ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ–13 | ISSUE - 116 ಸಂಚಿಕೆ– 116 | PAGE-8 ಪುಟ–8 | ಶನಿವಾರ 14.06.2025 | RS.2/- ಬೆಲೆ 2/–

# ತೆರಿಗೆ ವಿಕೇಂದ್ರೀಕರಣಕ್ಕೆ ಸಿಎಂ ಒತ್ತಾಯ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಜೂ.13:ರಾಜ್ಯಗಳಿಗೆ ನ್ಯಾಯಯುತತೆರಿಗೆವಿಕೇಂದ್ರೀಕರಣಕ್ಕಾಗಿ ಬಲವಾದವಾದವನ್ನುಇಂದು ನಡೆದ 16ನೇ ಹಣಕಾಸು ಆಯೋಗದ ಸಭೆಯಲ್ಲಿಮುಖ್ಯಮಂತ್ರಿಸಿದ್ದರಾಮಯ್ಯ ಮಂಡಿಸಿದ್ದಾರೆ.

ಹಣಕಾಸು ಆಯೋಗದ ಅಧ್ಯಕ್ಷ ಡಾ. ಅರವಿಂದ್ ಪನಗಾರಿಯಾ ಅವರೊಂದಿಗಿನ ಮಾತುಕತೆ ವೇಳೆ ಸಿಎಂ, ನ್ಯಾಯಯುತ ತೆರಿಗೆ ವಿಕೇಂದ್ರೀಕರಣಕ್ಕಾಗಿ ಪ್ರಬಲವಾದ ವಾದ ಮಂಡಿಸಿ, ಕರ್ನಾಟಕದ 8.7% ಜಿಡಿಪಿ ಪಾಲು ಮತ್ತು ಎರಡನೇ ಅತಿ ಹೆಚ್ಚು ಜಿಎಸ್‌ಟಿ ಸಂಗ್ರಹ ಮಾಡುತ್ತಿದೆ ಎಂದ ಅವರು, ರಾಜ್ಯವು ನೀಡುವ ಪ್ರತಿ ರೂಪಾಯಿಗೆ ಕೇವಲ 15 ಪೈಸೆ ಮಾತ್ರ ಪಡೆಯುತ್ತಿದೆ. ರಾಜ್ಯವು ದೇಶದ ಒಟ್ಟು ಜಿಡಿಪಿಗೆ ಸುಮಾರು




ಶೇ.8.7ರಷ್ಟು ಕೊಡುಗೆ ನೀಡುತ್ತಿದ್ದು ಜಿ.ಎಸ್.ಟಿ ಸಂಗ್ರಹಣೆಯಲ್ಲಿ 2ನೇ ಸ್ಥಾನದಲ್ಲಿದೆ ಎಂದು ತಿಳಿಸಿದರು.

ತಲಾ ವಿಕೇಂದ್ರೀಕರಣ ಕುಸಿತ, ದೋಷಪೂರಿತಆದಾಯ,ಅನುದಾನಗಳು ಮತ್ತು ವಿಶೇಷ ಅನುದಾನಗಳಲ್ಲಿನ ಅನಿರೀಕ್ಷಿತತೆಯನ್ನು ಸರಿಪಡಿಸಲು ಸುಧಾರಣೆಗಳನ್ನು ಕೈಗೊಳ್ಳುವಂತೆ ಆಯೋಗದ ಸಭೆಯಲ್ಲಿ ಸಿಎಂ

(2ನೇ ಪುಟ ನೋಡಿ)

# ಸಮಸ್ಯೆಗಳ ಸುಳಿಯಲ್ಲಿ ಮಿರಖಲ ಗ್ರಾಮಸ್ಥರು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 13 : ಹುಲಸೂರ್ ತಾಲ್ಲೂಕಿನ ಮಿರಖಲ ಗ್ರಾಮಸ್ಥರು ಹತ್ತು ಹಲವು ಸಮಸ್ಯೆಗಳ ನಡುವೆ ಬದುಕು ಸಾಗಿಸುತ್ತಿದ್ದಾರೆ.

ಸಮರ್ಪಕರಸ್ತೆಗಳಿಲ್ಲದೆಗ್ರಾಮಸ್ಥರು ಪರದಾಡುತ್ತಿದ್ದಾರೆ. ಗ್ರಾಮದ ಕೆಲ ಭಾಗಗಳಲ್ಲಿನಾಲ್ಕುಚಕ್ರದವಾಹನಗಳು ಸಂಚರಿಸಲು ಸಾಧ್ಯವಿಲ್ಲದಂಥ ಸ್ಥಿತಿಯಿದೆ. ಇದರಿಂದಾಗಿ ಹೆರಿಗೆ, ಅಪಘಾತ ಮೊದಲಾದ ತುರ್ತು ಸಂದರ್ಭಗಳಲ್ಲಿ ಗ್ರಾಮಸ್ಥರು ತೀವ್ರ ತೊಂದರೆ ಅನುಭವಿಸುವಂತಾಗಿದೆ.

ಗ್ರಾಮದ ಮುಖ್ಯ ರಸ್ತೆಗಳು ಹಾಗೂ ಒಳ ರಸ್ತೆಗಳು ತುಂಬಾ ಇಕ್ಕಟ್ಟಾಗಿವೆ. ಗ್ರಾಮ ಪಂಚಾಯಿತಿಯವರು ರಸ್ತೆ ಬದಿಗಳಲ್ಲಿ ಚರಂಡಿ ನಿರ್ಮಿಸದೆ ಇರುವುದರಿಂದ ರಸ್ತೆಗಳ ಮೇಲೆ ಗಲೀಜು ನೀರು ಹಾಗೂ ಮಳೆ ನೀರು ಹರಿಯುತ್ತದೆ.

ಅಲ್ಲಲ್ಲಿ ಚರಂಡಿ ಇದ್ದರೂ, ಹೂಳು ತುಂಬಿದೆ. ನೀರು ಸರಾಗವಾಗಿ ಹರಿದೇ ಸೊಳ್ಳೆಗಳ ಹಾವಳಿ ಹೆಚ್ಚಾಗಿದೆ. ಸಾಂಕ್ರಾಮಿಕ ರೋಗಗಳು ಉಲ್ಬಣಗೊಳ್ಳುವಲಕ್ಷಣಗಳುಹೆಚ್ಚಾಗಿವೆ. ದುರ್ವಾಸನೆಯೂ

(2ನೇ ಪುಟ ನೋಡಿ)

# ಇಂದು 440.63 ಕೋ.ರೂ.ಗಳ ವೆಚ್ಚದಲ್ಲಿ "ಆರೋಗ್ಯ ಆವಿಷ್ಕಾರ" ಯೋಜನೆಯಡಿ ಕಲ್ಯಾಣ ಕರ್ನಾಟಕ ವಿಭಾಗದ ಆರೋಗ್ಯ ಇಲಾಖೆಯ ವಿವಿಧ ಕಾಮಗಾರಿಗಳಿಗೆ ಅಡಿಗಲ್ಲು

ಯಾದಗಿರಿ : ಜೂ. 13: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಬೆಂಗಳೂರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಹಾಗೂ ಕಲಬುರಗಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಮತ್ತು ಕರ್ನಾಟಕ ಸರ್ಕಾರದ ವತಿಯಿಂದ 440.63 ಕೋ.ರೂ.ಗಳ ವೆಚ್ಚದಲ್ಲಿ "ಆರೋಗ್ಯ ಆವಿಷ್ಕಾರ" ಯೋಜನೆಯಡಿ ಕಲ್ಯಾಣ ಕರ್ನಾಟಕ ವಿಭಾಗದ ಆರೋಗ್ಯ ಇಲಾಖೆಯ ವಿವಿಧ ಕಾಮಗಾರಿಗಳಿಗೆ ಅಡಿಗಲ್ಲು ಕಾರ್ಯಕ್ರಮ ಹಾಗೂ ಯಾದಗಿರಿ ಜಿಲ್ಲಾ ಬಂಜಾರ ಭವನದ ಉದ್ಘಾಟನೆ ಯಾದಗಿರಿ ಜಿಲ್ಲಾ ಕ್ರೀಡಾಂಗಣದಲ್ಲಿ ಜೂನ್ 14ರ ಶನಿವಾರ ರಂದು ಬೆಳಿಗ್ಗೆ 11 ಗಂಟೆಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕರ್ನಾಟಕ ಸರ್ಕಾರ ಮುಖ್ಯಮಂತ್ರಿಗಳು ಸನ್ಮಾನ್ಯ ಶ್ರೀ ಸಿದ್ದರಾಮ್ಯಯ ಕಾರ್ಯಕ್ರಮವನ್ನು ಉದ್ಘಾಟಿಸುವರು.

ರಾಜ್ಯಸಭೆ ಸದಸ್ಯರು ಹಾಗೂ ವಿರೋಧ ಪಕ್ಷದ ನಾಯಕರಾದ ಡಾ.ಮಲ್ಲಿಕಾರ್ಜುನ ಖರ್ಗೆ ಘನ ಉಪಸ್ಥಿತಿಯಲ್ಲಿ ನೆರವೇರಿಸುವರು.

ಕರ್ನಾಟಕ ಸರ್ಕಾರ ಉಪ ಮುಖ್ಯಮಂತ್ರಿಗಳು ಶ್ರೀ ಡಿ.ಕೆ.ಶಿವಕುಮಾರ, ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಡಾ.ಎಚ್.ಸಿ.ಮಹಾದೇವಪ್ಪ, ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರಾದ ಶ್ರೀ ಡಿ.ಸುಧಾಕರ್, ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ದಿನೇಶ ಗುಂಡೂರಾವ್, ಜೇವರ್ಗಿ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಅಧ್ಯಕ್ಷರು ಡಾ.ಅಜಯ ಧರ್ಮಸಿಂಗ್ ಗೌರವ ಉಪಸ್ಥಿತಿಯಲ್ಲಿ ನೆರವೇರಿಸುವರು

(2ನೇ ಪುಟ ನೋಡಿ)

# ವಿಮಾನ ದುರಂತ : ಸಾವಿನ ಸಂಖ್ಯೆ 265ಕ್ಕೆ ಏರಿಕೆ

ಮಲ್ಲಮ್ಮ ನುಡಿ ವಾರ್ತೆ

ಗಾಂಧೀನಗರ:ಜೂ.13:ಗುಜರಾತ್‌ನ ಅಹಮದಾಬಾದ್ ವಿಮಾನ ದುರಂತದಲ್ಲಿ ಅಲ್ಲಿನ ಸ್ಥಳೀಯರು, ಮೆಡಿಕಲ್ ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 265 ಜನರು ಸಾವಿಗೀಡಾಗಿದ್ದಾರೆ.

ಗುರುವಾರ ಅಹಮದಾಬಾದ್ ಸರ್ದಾರ್ ವಲ್ಲಭಬಾಯಿ ಪಟೇಲ್ ಅಂತಾರಾಷ್ಟ್ರೀಯವಿಮಾನನಿಲ್ದಾಣದಿಂದ ಲಂಡನ್‌ಗೆ ಹೊರಟ ಏರ್ ಇಂಡಿಯಾ ವಿಮಾನ ಟೇಕಾಫ್ ಆದ ಕೆಲವೇ ಕ್ಷಣಗಳಲ್ಲಿ ಪತನಗೊಂಡಿತು. ಪರಿಣಾಮ ವಿಮಾನ ನಿಲ್ದಾಣದ ಸಮೀಪದ ಮೇಘನಿ ನಗರದ ಬಿಜೆ ಎಂಬಿಬಿಎಸ್ ಕಾಲೇಜಿನ ಹಾಸ್ಟೆಲ್ ಮೇಲೆ ಬಿದ್ದಿತ್ತು.

ವಿಮಾನದಲ್ಲಿ 169 ಭಾರತೀಯರು, 53 ಬ್ರಿಟಿಷ್, ಒಬ್ಬ ಕೆನಡಾ ಮತ್ತು ಏಳು ಪೋರ್ಚುಗೀಸ್ ಪ್ರಜೆಗಳು 12 ಸಿಬ್ಬಂದಿ ಇದ್ದರು. ಈ ಪೈಕಿ 241 ಜನ ಸಾವನ್ನಪ್ಪಿದ್ದು, ಓರ್ವ ಪ್ರಯಾಣಿಕ ಪವಾಡ ಸದೃಶ್ಯ ಪಾರಾಗಿದ್ದಾರೆ. ಜೊತೆಗೆ ಬಿಜೆ ಮೆಡಿಕಲ್ ಕಾಲೇಜಿನ 5 ವಿದ್ಯಾರ್ಥಿಗಳು ಸಾವನ್ನಪ್ಪಿದ್ದಾರೆ. ಇನ್ನೂ ಭಾರೀ ಬೆಂಕಿ ಹೊತ್ತಿಕೊಂಡ ಪರಿಣಾಮ ಅಲ್ಲಿದ್ದ 19 ಸ್ಥಳೀಯರು ಸಾವಿಗೀಡಾಗಿದ್ದರು.

ರಕ್ಷಣಾ ಕಾರ್ಯಾಚರಣೆ ಬಳಿಕ 265 ಜನರ ಮೃತದೇಹಗಳನ್ನು ಅಹಮದಾಬಾದ್ ಸಿವಿಲ್ ಆಸ್ಪತ್ರೆಯಲ್ಲಿ ಇಡಲಾಗಿತ್ತು. ಗುರುತು ಪತ್ತೆ ಹಚ್ಚಲೂ

(2ನೇ ಪುಟ ನೋಡಿ)



ಒಂದನೇ ಪುಟದಿಂದ

# ಕಲ್ಯಾಣ ಕರ್ನಾಟಕ ವಿಭಾಗದ ಆರೋಗ್ಯ ಇಲಾಖೆಯ ವಿವಿಧ ಕಾಮಗಾರಿಗಳಿಗೆ ಅಡಿಗಲ್ಲು

. ವಸತಿ ವಕ್ಫ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಸಚಿವರು ಹಾಗೂ ವಿಜಯನಗರ ಮತ್ತು ಬಳ್ಳಾರಿ ಉಸ್ತುವಾರಿ ಸಚಿವರಾದ ಶ್ರೀ ಬಿ.ಜೆಡ್ ಜಮೀರ್ ಅಹ್ಮದಖಾನ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ, ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಈಶ್ವರ ಬಿ.ಖಂಡ್ರೆ, ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಆರ್. ಪಾಟೀಲ್, ಹಿಂದುಳಿದ ವರ್ಗಗಳ ಕಲ್ಯಾಣ ಕನ್ನಡ ಮತ್ತು ಸಂಸ್ಕೃತಿ ಸಚಿವರು ಹಾಗೂ ಕೊಪ್ಪಳ ಜಿಲ್ಲಾ

ಉಸ್ತುವಾರಿ ಸಚಿವರಾದ ಶೀ ತಂಗಡಗಿ ಶಿವರಾಜ ಸಂಗಪ್ಪ, ಪೌರಾಡಳಿತ ಮತ್ತು ಹಜ್ ಸಚಿವರಾದ ಶ್ರೀ ರಹೀಮ್ ಖಾನ್, ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಶ್ರೀ ಎನ್.ಎಸ್.ಬೋಸರಾಜು, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ನಾರಾಯಣಸ್ವಾಮಿ, ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರಾದ ಶ್ರೀ ಬಸವರಾಜ ರಾಯರಡ್ಡಿ, ಆಳಂದ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗ ಉಪಾಧ್ಯಕ್ಷರಾದ ಶ್ರೀ ಬಿ.ಆರ್.ಪಾಟೀಲ್, ಬೀಳಗಿ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತ ಅಧ್ಯಕ್ಷರಾದ ಶ್ರೀ ಜೆ.ಟಿ ಪಾಟೀಲ್, ಕುಷ್ಟಗಿ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ದೊಡ್ಡನಗೌಡ ಹನಮಗೌಡ ಪಾಟೀಲ್, ಕಲಬುರಗಿ ಉತ್ತರ ವಿಧಾನಸಭಾ ಕ್ಷೇತ್ರದ ಶಾಸಕ ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ಅಧ್ಯಕ್ಷರಾದ ಶ್ರೀಮತಿ ಕನೀಜ್ ಫಾತೀಮ್, ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಅಧ್ಯಕ್ಷರಾದ ಶ್ರೀ ಬಸನಗೌಡ ದದ್ದಲ್, ಕಂಪ್ಲಿ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಕೈಮಗ್ಗ ಅಭಿವೃದ್ಧಿ ನಿಗಮ ಅಧ್ಯಕ್ಷರಾದ ಶ್ರೀ ಜೆ.ಎನ್ ಗಣೇಶ್, ಮಸ್ಕಿ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರಾದ ಶ್ರೀ ಬಸನಗೌಡ ತುರುವಿಹಾಳ, ಬೆಂಗಳೂರು ಕರ್ನಾಟಕ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ಅಧ್ಯಕ್ಷರಾದ ಶ್ರೀ ಬಾಬುರಾವ್ ಚಿಂಚನಸೂರ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ರಾಯಚೂರು ಲೋಕಸಭಾ ಸದಸ್ಯರು ಶ್ರೀ ಜಿ.ಕುಮಾರ ನಾಯಕ, ಕಲಬುರಗಿ ಲೋಕಸಭಾ ಸದಸ್ಯರು ಶ್ರೀ ರಾಧಾಕೃಷ್ಣ ದೊಡ್ಡಮನಿ, ಬಳ್ಳಾರಿ ಲೋಕಸಭಾ ಸದಸ್ಯರು ಶ್ರೀ ಈ.ತುಕಾರಮ್, ದಾವಣಗೆರೆ ಲೋಕಸಭಾ ಸದಸ್ಯರು ಡಾ.ಪ್ರಭಾ ಮಲ್ಲಿಕಾರ್ಜುನ, ಕೊಪ್ಪಳ ಲೋಕಸಭಾ ಸದಸ್ಯರು ಶ್ರೀ ಕೆ. ರಾಜಶೇಖರ ಬಸವರಾಜ ಹಿಟ್ನಾಳ್, ಬೀದರ ಲೋಕಸಭಾ ಸದಸ್ಯರು ಶ್ರೀ ಸಾಗರ ಈಶ್ವರ ಖಂಡ್ರೆ, ರಾಜ್ಯ ಸಭೆ ಸದಸ್ಯರು ಡಾ.ಸೈಯದ್ ನಾಸೀರ್ ಹುಸೇನ್ ಗೌರವಾನ್ವಿತ ಅತಿಥಿಗಳಾಗಿ ಆಗಮಿಸುವರು. ಔರಾದ (ಬಿ) ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಪ್ರಭು ಬಿ. ಚವ್ಹಾಣ್, ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಬಿ.ನಾಗೇಂದ್ರ, ಸಿಂಧನೂರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಹಂಪನಗೌಡ ಬಾದರ್ಲಿ, ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಜಿ.ಹಂಪಯ್ಯ ನಾಯಕ, ಲಿಂಗಸೂಗೂರು ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಮಾನಪ್ಪ ಡಿ.ವಜ್ಜಲ್, ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಶಾಸಕ ಡಾ.ಎಸ್.ಶಿವರಾಜ ಪಾಟೀಲ್, ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಕೆ.ರಾಘವೇಂದ್ರ ಹಿಟ್ನಾಳ, ವಿಜಯನಗರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಹೆಚ್.ಆರ್. ಗವಿಯಪ್ಪ, ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಕೆ.ನೇಮಿರಾಜ ನಾಯ್ಕ, ಸಿರಗುಪ್ಪಾ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಬಿ.ಎಮ್.ನಾಗರಾಜ, ಅಫಜಲಪೂರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಎಂ.ವೈ ಪಾಟೀಲ್, ಕಲಬುರಗಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಬಸವರಾಜ ಮತ್ತಿಮುಡು, ಬಸವಕಲ್ಯಾಣ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣು ಸಲಗರ, ಚಿಂಚೋಳಿ ವಿಧಾನಸಭಾ ಕ್ಷೇತ್ರದ ಶಾಸಕ ಡಾ.ಅವಿನಾಶ ಉ.ಜಾಧವ, ಕಲಬುರಗಿ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಅಲ್ಲಮಪ್ರಭು

ಪಾಟೀಲ್, ಜಗಳೂರು ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಬಿ.ದೇವೇಂದ್ರಪ್ಪ, ಗಂಗಾವತಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಜಿ.ಜನಾರ್ದನ ರೆಡ್ಡಿ, ಹರಪನಹಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀಮತಿ ಎಂ.ಪಿ.ಲತಾಮಲ್ಲಿಕಾರ್ಜುನ, ಸಂಡೂರು ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀಮತಿ ಈ ಅನ್ನಪೂರ್ಣ, ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಕೂಡ್ಲಗಿ ವಿಧಾನಸಭಾ ಕ್ಷೇತ್ರದ ಶಾಸಕ ಡಾ.ಶ್ರೀನಿವಾಸ ಎನ್.ಟಿ, ಹುಮನಾಬಾದ್ ವಿಧಾನಸಭಾ ಕ್ಷೇತ್ರದ ಶಾಸಕ ಡಾ.ಸಿದ್ದಲಿಂಗಪ್ಪ ಎನ್.ಪಾಟೀಲ್, ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣಗೌಡ ಕಂದಕೂರ, ಹಡಗಲಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಎಲ್.ಕೃಷ್ಣನಾಯ್ಕ, ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ರಾಜಾ ವೇಣುಗೋಪಾಲ ನಾಯಕ, ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀನಾರಾ ಭಾರತ್ ರೆಡ್ಡಿ, ದೇವದುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀಮತಿ ಕರೆಮ್ಮ ಜಿ.ನಾಯಕ, ಗೌರವಾನ್ವಿತ ಆಹ್ವಾನಿತರಾಗಿ ಪಾಲ್ಗೋಳ್ಳುವರು. ವಿಧಾನ ಪರಿಷತ್ತು ಸದಸ್ಯರು ಡಾ.ಬಿ.ಜಿ.ಪಾಟೀಲ್, ಡಾ.ಚಂದ್ರಶೇಖರ ಬಿ.ಪಾಟೀಲ್, ಶ್ರೀ ಶಶೀಲ್ ಜಿ.ನಮೋಶಿ, ಶ್ರೀ ತಿಪ್ಪಣ್ಣಪ್ಪ ಕಮಕನೂರ, ಶ್ರೀ ಸುನೀಲ್ ವಲ್ಲಾ ??ಪುರೆ, ಡಾ.ತಳವಾರ ಸಾಬಣ್ಣಾ, ಶ್ರೀ ವೈಎಂ.ಸತೀಶ್, ಶ್ರೀ ಶರಣಗೌಡ ಪಾಟೀಲ್ ಬಯ್ಯಾಪುರ, ಶ್ರೀ ಭೀಮರಾವ ಬಿ.ಪಾಟೀಲ್, ಶ್ರೀಮತಿ ಹೇಮಲತಾ ನಾಯಕ, ಶ್ರೀ ಬಸನಗೌಡ ಬಾದರ್ಲಿ, ಡಾ.ಎಂ.ಜಿ.ಮೂಳೆ, ಶ್ರೀ ಜಗದೇವ ಗುತ್ತೇದಾರ, ಶ್ರೀ ಎ.ವಸಂತಕುಮಾರ, ಬೆಂಗಳೂರು ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ, ಅಧ್ಯಕ್ಷರು ಶ್ರೀ ಮುಂಡರಗಿ ನಾಗರಾಜ, ಮುನಿರಾಬಾದ್ (ಕಾಡಾ) ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ತುಂಗಭದ್ರಾ ಯೋಜನೆ ಅಧ್ಯಕ್ಷರು ಶ್ರೀ ಹಸನಸಾಬ ನಬಿಸಾಬ ದೋಟಿಹಾಳ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ ನಿಯಮಿತ ಅಧ್ಯಕ್ಷರು ಶ್ರೀಮತಿ ಮಾಲಾ ನಾರಾಯಣರಾವ, ಕಲಬುರಗಿ ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು ಡಾ.ಅಬ್ದುಲ್ ರಶೀದ್, ಬೆಂಗಳೂರು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ಅಧ್ಯಕ್ಷರು ಶ್ರೀ ದೇವಿಂದ್ರಪ್ಪ ಮರತೂರ, ಬೆಂಗಳೂರು ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತ ಅಧ್ಯಕ್ಷರು ಶ್ರೀ ಎನ್.ಜಯದೇವ್ ನಾಯ್ಕ, ಯಾದಗಿರಿ ನಗರಸಭೆ ಅಧ್ಯಕ್ಷರು ಕು.ಲಲೀತಾ ಅನಪೂರ, ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು ಶ್ರೀ ವಿನಾಯಕ ಮಾಲಿ ಪಾಟೀಲ್, ವಿಶೇಷ ಆಹ್ವಾನಿತರಾಗಿ ಆಗಮಿಸುವರು. ಕರ್ನಾಟಕ ಸರ್ಕಾರ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಡಾ.ಶಾಲಿನಿ ರಜನಿಶ್, ಕರ್ನಾಟಕ ಸರ್ಕಾರ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು ಶ್ರೀ ಉಮಾ ಮಹಾದೇವನ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಶ್ರೀ ಹರ್ಷ ಗುಪ್ತ, ಸಮಾಜ ಕಲ್ಯಾಣ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಶ್ರೀ ಪಿ.ಮಣಿವಣ್ಣನ್, ನಾಗರಿಕ ಸರಬರಾಜು ಗ್ರಾಹಕರ ವ್ಯವಹಾರಗಳು ಮತ್ತು ಕಾನೂನು ಮಾಪನಶಾಸ್ತ್ರ ಇಲಾಖೆ ಯೋಜನಾ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಆಡಳಿತಾಧಿಕಾರಿಗಳು ಯಾದಗಿರಿ ಜಿಲ್ಲಾ ಪಂಚಾಯತ್ ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಶ್ರೀ ಮನೋಜ್ ಜೈನ್, ಬಹುಮಹಡಿ ಕಟ್ಟಡ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಯೋಜನೆ ಸರ್ಕಾರದ ಕಾರ್ಯದರ್ಶಿಗಳು ಶ್ರೀ ರಂದೀಪ್.ಡಿ, ಕಲಬುರಗಿ ವಿಭಾಗ ಪ್ರಾದೇಶಿಕ ಆಯುಕ್ತರು ಶ್ರೀ ಕೃಷ್ಣ ಭಾಜಪೇಯಿ, ಕಲಬುರಗಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಕಾರ್ಯದರ್ಶಿಗಳು ಶ್ರೀ ಎಂ ಸುಂದರೇಶ ಬಾಬು, ಕರ್ನಾಟಕ ರಾಜ್ಯದ ಕಲ್ಯಾಣ ಕರ್ನಾಟಕ ಪ್ರದೇಶದ ಎಲ್ಲಾ ಜಿಲ್ಲಾಧಿಕಾರಿಗಳು ಕರ್ನಾಟಕದ ರಾಜ್ಯದ ಕಲ್ಯಾಣ ಕರ್ನಾಟಕ ಪ್ರದೇಶದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಕರ್ನಾಟಕ ರಾಜ್ಯದ ಕಲ್ಯಾಣ ಕರ್ನಾಟಕ ಪ್ರದೇಶದ ಎಲ್ಲಾ ಜಿಲ್ಲಾ ಪೊಲೀಸ್ ಅಧೀಕ್ಷಕರು ಸ್ವಾಗತ ಬಯಸುವರು ಎಂದು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಸುಳಿಯಲ್ಲಿ ಮಿರಖಲ ಗ್ರಾಮಸ್ಥರು

ಹೆಚ್ಚಾಗಿದೆ. ಜೋರು ಮಳೆಯಾದಾಗ ಚರಂಡಿ ನೀರು ರಸ್ತೆ ಮೇಲೆಯೇ ಹರಿಯುತ್ತದೆ. ಇದರಿಂದ ರಸ್ತೆಗಳು ಹಾಳಾಗಿ ತಗ್ಗು-ಗುಂಡಿಗಳು ಬಿದ್ದಿವೆ. ಮಕ್ಕಳು, ವೃದ್ಧರು ಮತ್ತು ಮಹಿಳೆಯರು ಸಂಚರಿಸಲೂ ಭಯಪಡುವಂಥ ಸ್ಥಿತಿ ಇದೆ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸುತ್ತಾರೆ. ಗ್ರಾಮದಲ್ಲಿ ಬಹುತೇಕ ವಿದ್ಯುತ್ ಕಂಬಗಳಿಗೆ ಬೀದಿ ದೀಪಗಳಿಲ್ಲ. ರಾತ್ರಿ ಸಮಯದಲ್ಲಿ ಒಬ್ಬಂಟಿಯಾಗಿ ಸಂಚರಿಸಲು ಹಿಂದೇಟು ಹಾಕುವಂತಾಗಿದೆ. ಮಳೆಗಾಲದ ಸಮಯ ಆಗಿರುವುದರಿಂದ ಕೆಸರು, ವಿಷಜಂತುಗಳ ಭಯ ಕಾಡುತ್ತಿದೆ. ಗ್ರಾಮದಲ್ಲಿ ಒಂದು ಅಂಗನವಾಡಿ ಕೇಂದ್ರವಿದ್ದು, ಅಂಗನವಾಡಿ ಕೇಂದ್ರದ ಅಕ್ಕಪಕ್ಕದಲ್ಲಿ ಗಲೀಜು ನೀರು ಹರಿಯುತ್ತದೆ. ಅಂಥ ಪ್ರದೇಶದಲ್ಲೇ ಮಕ್ಕಳ ಅಕ್ಷರಾಭ್ಯಾಸ ನಡೆಯುತ್ತಿದ್ದು, ಊಟ, ಉಪಾಹಾರ ಸೇವಿಸಬೇಕಿದೆ. ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಯ ಬಸ್‌ಗಳು ಸಮಯಕ್ಕೆ ಸರಿಯಾಗಿ ಬರುವುದಿಲ್ಲ. ಅವುಗಳನ್ನು ಹೊರತುಪಡಿಸಿ ಯಾವ ವಾಹನ ಸೌಲಭ್ಯವೂ ಇಲ್ಲ. ಅಗತ್ಯ ಹಾಗೂ ತುರ್ತು ಸಂದರ್ಭಗಳಲ್ಲಿ ಗ್ರಾಮಸ್ಥರು ಬೇರೆ ಊರಿಗೆ ತೆರಳಬೇಕಾದರೆ ಪಕ್ಕದಲ್ಲಿರುವ ಹುಲಸೂರ ಪಟ್ಟಣಕ್ಕೆ ಬರಬೇಕು. ಗ್ರಾಮದಲ್ಲಿ ತೀರಾ ಹಳೆಯದಾದ ಹಾಗೂ ಈಗ ಸಂಪೂರ್ಣವಾಗಿ ಹಾಳಾಗಿರುವ ಪಶು ಆಸ್ಪತ್ರೆಯ ಕಟ್ಟಡವಿದೆ. ಅಲ್ಲಿ ವೈದ್ಯರು ಸೇರಿದಂತೆ ಯಾವ ಸೌಲಭ್ಯ, ಸಿಬ್ಬಂದಿಯೂ ಇಲ್ಲ. ಗ್ರಾಮಕ್ಕೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರದ ಅಗತ್ಯವಿದ್ದು, ಗ್ರಾಮಸ್ಥರು ಅದಕ್ಕಾಗಿ ಕಾಯುತ್ತಿದ್ದಾರೆ. ಈ ಕುರಿತು ಅಭಿಪ್ರಾಯ ಪಡೆಯಲು ಪಿಡಿಒ ಅವರಿಗೆ ಹಲವು ಬಾರಿ ಕರೆ ಮಾಡಿದರೂ ಅವರು ಕರೆ ಸ್ವೀಕರಿಸಲಿಲ್ಲ. ಗಣೇಶ ಪಾಟೀಲ ಮಿರಖಲ ಗ್ರಾಮಸ್ಥಚರಂಡಿ ನೀರು ನಿಂತಲ್ಲಿಯೇ ನಿಂತು ಸೊಳ್ಳೆ ಉತ್ಪತ್ತಿಯಾಗುತ್ತಿವೆ. ಸಾಂಕ್ರಾಮಿಕ ರೋಗ ಭೀತಿ ಗ್ರಾಮಸ್ಥರನ್ನು ಕಾಡುತ್ತಿದೆ. ಪಂಚಾಯಿತಿಯವರು ಗ್ರಾಮದ ಅಭಿವೃದ್ಧಿ ಕಡೆಗೆ ಗಮನ ಹರಿಸಬೇಕು ಮಹದೇವ ಜಮ್ಮು ತಾಲ್ಲೂಕು ಪಂಚಾಯಿತಿ ಇಒಮಿರಖಲ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯೊಂದಿಗೆ ಚರ್ಚಿಸಿ ಗ್ರಾಮದ ಸಮಸ್ಯೆಗಳ ನಿವಾರಣೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು

# ವಿಕೇಂದ್ರೀಕರಣಕ್ಕೆ ಸಿಎಂ ಒತ್ತಾಯ

ಒತ್ತಾಯಿಸಿದರು. ಕೇಂದ್ರ ಸರ್ಕಾರದ ವಿವೇಚನಾಧಾರಿತ ಅನುದಾನವಾಗಿರುವ ರಾಜ್ಯ ಕೇಂದ್ರಿತ ಅನುದಾನದ ಬದಲಾಗಿ ಒಟ್ಟು ಕೇಂದ್ರ ಸ್ವೀಕೃತಿಗಳ 0.3% ರಷ್ಟು ಅನುದಾನವನ್ನು ಸೂತ್ರ ಆಧಾರಿತ ಹಂಚಿಕೆಯ ಮೂಲಕರಾಜ್ಯಗಳಿಗೆ ನೀಡಬೇಕೆಂದು ಕರ್ನಾಟಕವು ಶಿಫಾರಸು ಮಾಡಿದೆ. ಆದಾಗ್ಯೂ, ಆಯೋಗವು ಅಂತಹನಿಬಂಧನೆಗಳನ್ನು ಮುಂದುವರಿಸಿದರೆ ಬೆಂಗಳೂರು ಮತ್ತು ಇತರ ನಿರ್ಣಾಯಕ ಯೋಜನೆಗಳಿಗೆ ಅನುದಾನಕ್ಕಾಗಿ ಮೂಲ ಜ್ಞಾಪಕಪತ್ರದಲ್ಲಿ ಸಲ್ಲಿಸಿರುವ ತನ್ನ ಪ್ರಸ್ತಾವನೆಯನ್ನು ಪುನರುಚ್ಚರಿಸಿದೆ.ಕರ್ನಾಟಕದ ಆರ್ಥಿಕತೆಯಲ್ಲಿ ಬೆಂಗಳೂರಿನಪ್ರಮುಖ ಪಾತ್ರವನ್ನು ಪರಿಗಣಿಸಿ, ಬೆಂಗಳೂರಿನ ಮೂಲಸೌಕರ್ಯವನ್ನು ಬಲಪಡಿಸಲು ರೂ. 1.15 ಲಕ್ಷಕೋಟಿ ಹೂಡಿಕೆಗೆ ಬೆಂಬಲವನ್ನು ಮುಖ್ಯಮಂತ್ರಿ ಕೋರಿದರು. ಅಲ್ಲದೆ, ಕಡಿಮೆ ಆದಾಯ ಮತ್ತು ಕುಂಠಿತ ಮೂಲಸೌಕರ್ಯ ಅಭಿವೃದ್ಧಿ ಸಮಸ್ಯೆಯನ್ನು ಎದುರಿಸುತ್ತಿರುವ ಕಲ್ಯಾಣ ಕರ್ನಾಟಕ ಮತ್ತು ಮಲೆನಾಡಿನಲ್ಲಿ ಪ್ರಾದೇಶಿಕ ಅಂತರವನ್ನು ಕಡಿಮೆ ಮಾಡುವ ಅಗತ್ಯವನ್ನು ಅವರು ಒತ್ತಿ ಹೇಳಿದರು.ಬೆಳವಣಿಗೆ ಮತ್ತು ಸಮಾನತೆ ಜೊತೆ ಜೊತೆಯಾಗಿ ಮುಂದುವರಿಯಬೇಕು. ಆದ್ದರಿಂದ ಸದೃಢ ಭಾರತದ ನಿರ್ಮಾಣಕ್ಕೆ ನ್ಯಾಯಯುತಸಂಪನ್ಮೂಲ ಹಂಚಿಕೆಯಿಂದ ಬೆಂಬಲಿತವಾದ ಬಲವಾದ ಕರ್ನಾಟಕ ಅತ್ಯಗತ್ಯ ಎಂದು ಮುಖ್ಯಮಂತ್ರಿ ಯವರು ಒತ್ತಿ ಹೇಳಿದರು.ಕರ್ನಾಟಕದ ಆರ್ಥಿಕ ಬಲವು ರಾಷ್ಟ್ರೀಯ ಬೆಳವಣಿಗೆಗೆ ಇಂಧನವಾಗಿದೆ. ಬೆಳವಣಿಗೆಗೆ ದಂಡ ವಿಧಿಸಬಾರದು, ಬದಲಾಗಿ ಪ್ರೊ???ತ್ಸಾಹ ದೊರೆಯುವಂತೆ ನೋಡಿಕೊಳ್ಳುವ ಸಮಯ ಇದು. ಸಮತೋಲಿತ, ಸಂಪನ್ಮೂಲ ಹಂಚಿಕೆಯ ದೃಷ್ಟಿಕೋನವನ್ನು ಅಳವಡಿಸಿಕೊಳ್ಳುವಂತೆ ನಾವು ಆಯೋಗವನ್ನು ಒತ್ತಾಯಿಸಿದರು.ಈ ಸಭೆಯಲ್ಲಿ ಮುಖ್ಯಮಂತ್ರಿ ಆರ್ಥಿಕ ಸಲಹೆಗಾರರಾದ ಬಸವರಾಜ ರಾಯರೆಡ್ಡಿ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಹಣಕಾಸು ಇಲಾಖೆ ಪ್ರಧಾನ ಕಾರ್ಯದರ್ಶಿ ರಿತೇಶ್ ಮತ್ತಿತರ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

# ಸಾವಿನ ಸಂಖ್ಯೆ 265ಕ್ಕೆ ಏರಿಕೆ

ಆಗದಷ್ಟು ಸುಟ್ಟು ಕರಕಲಾಗಿದ್ದರಿಂದ ಎಲ್ಲಾ ಮೃತದೇಹಗಳ ಡಿಎನ್‌ಎ ಸಂಗ್ರಹಿಸಲಾಗಿದೆ. ಇನ್ನೂ ಅವಘಡದಲ್ಲಿ ಗಾಯಗೊಂಡವರಿಗೆ ಅಹಮದಾಬಾದ್ ಸಿವಿಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಗಾಯಾಳುಗಳಿಗೆ 'ಓ' ನೆಗೆಟಿವ್ ರಕ್ತ ಬೇಕಾಗಿದ್ದು, ಹಲವಾರು ಸೈನಿಕರು ರಕ್ತದಾನ ಮಾಡಿದ್ದಾರೆ.

# ಗಂಡೋರಿನಾಲಾ ಜಲಾಶಯದಿಂದ ನೀರು ಬಿಡುಗಡೆಯ ಮುನ್ನೆಚ್ಚರಿಕೆ

ಕಲಬುರಗಿ,ಜೂ.13:ಕಮಲಾಪೂರ ತಾಲೂಕಿನಗಂಡೋರಿನಾಲಾಯೋಜನೆ ಜಲಾಶಯದಜಲಾನಯನಪ್ರದೇಶದಲ್ಲಿ ವ್ಯಾಪಕವಾಗಿ ಮಳೆಯಾಗುತ್ತಿದ್ದು, ಜಲಾಶಯಕ್ಕೆ ನಿರಂತರವಾಗಿ ಒಳಹರಿವು ಹೆಚ್ಚಾಗುತ್ತಿದ್ದು, ಯಾವುದೇ ಕ್ಷಣದಲ್ಲಿ ಆಣೆಕಟ್ಟು ಭರ್ತಿಯಾಗುವ ಹಂತದಲ್ಲಿದೆ. ಗರಿಷ್ಠ ಮಟ್ಟದ ನಂತರ ಬಂದ ಒಳಹರಿವಿನ ನೀರನ್ನು ಆಣೆಕಟ್ಟಿನ ಕೋಡಿಯ ಮುಖಾಂತರ ನದಿ ಪಾತಳಿಗೆ ಬಿಡಲಾಗುತ್ತದೆ ಎಂದು ಕಲಬುರಗಿ ಕರ್ನಾಟಕ ನೀರಾವರಿ ನಿಗಮ ನಿಯಮಿತದ ವಿಭಾಗ ನಂ.1ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

# ಮಾನವೀಯ ಮೌಲ್ಯ ಬೆಳೆಸಿಕೊಳ್ಳಲು ಸಲಹೆ




ಗುಣಾತ್ಮಕ ಶಿಕ್ಷಣ ಉತ್ತಮ ಸಂಸ್ಕಾರಕ್ಕೆ ಆದ್ಯತೆ ನೀಡುತ್ತಿರುವ ಪರಿಣಾಮ ನಮ್ಮ ಸಂಸ್ಥೆಯಿಂದ ಪ್ರತಿವರ್ಷ ನೂರಾರು ಮಕ್ಕಳು ಐಐಟಿ, ನೀಟ್, ಎನ್ ಐಟಿ ಸೇರಿ ವಿವಿಧ ರಾಷ್ಟ್ರ ಮಟ್ಟದ ಪರೀಕ್ಷೆಗಳಲ್ಲಿ ಅರ್ಹತೆ ಗಳಿಸುತ್ತಿರುವುದು ಹೆಮ್ಮೆ ತರಿಸಿದೆ.
– ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ

ಗ್ರಾಮೀಣ ಭಾಗದ ಮಕ್ಕಳು ಐಐಟಿಯಲ್ಲಿ ಉತ್ತಮ ಸಾಧನೆ ತೋರುತ್ತಿದ್ದಾರೆ. ಈ ವರ್ಷ ನಮ್ಮ ಸಂಸ್ಥೆಯ ಒಂದರಿಂದಲೇ 46 ಮಕ್ಕಳು ಐಐಟಿ ಪ್ರವೇಶ ಪಡೆಯಲು ಅರ್ಹತೆ ಗಿಟ್ಟಿಸಿ ದೇಶವೇ ತಿರುಗಿ ನೋಡುವಂತಹ ಸಾಧನೆ ಮಾಡಿದ್ದಾರೆ.
– ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.13:ವಿದ್ಯಾರ್ಥಿಗಳು ಉನ್ನತ ವ್ಯಾಸಂಗದ ಜತೆಗೆ ಶರೀರ ಮನಸ್ಸು ಶುದ್ಧವಾಗಿರಿಸಿಕೊಂಡು ನೈತಿಕ, ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ವಿಜ್ಞಾನ ಪದವಿ ಪೂರ್ವ ಕಾಲೇಜಿನಲ್ಲಿ 2024-25ನೇಯ ಸಾಲಿನ ಐಐಟಿ ಸಾಧಕ ವಿದ್ಯಾರ್ಥಿಗಳಿಗೆ ಶುಕ್ರವಾರ ಹಿತವಚನ ನೀಡಿದರು.

ಗಡಿಭಾಗದ ಗ್ರಾಮೀಣ ಪ್ರದೇಶದ ರೈತರು, ಕೂಲಿಕಾರ್ಮಿಕರು, ಬಡವರ, ಮಧ್ಯಮ ವರ್ಗದ ಮಕ್ಕಳು ರಾಷ್ಟ್ರ ಮಟ್ಟದ ಜೆಇಇ ಅಡ್ವಾನ್ಸ್ ನಂತಹ ಪರೀಕ್ಷೆಯಲ್ಲಿ ಉತ್ತಮ ರ್‍ಯಾಂಕ್ ಪಡೆದು ದೇಶದ ಪ್ರತಿಷ್ಠಿತ ಐಐಟಿ ಕಾಲೇಜುಗಳಲ್ಲಿ ಪ್ರವೇಶ ಪಡೆಯಲು ಅರ್ಹತೆ ಪಡೆದಿರುವುದು ಹೆಮ್ಮೆ ತರಿಸಿದೆ ಎಂದರು.

ವಿದ್ಯಾರ್ಥಿಗಳು ಈ ಸಂಸ್ಥೆಯಲ್ಲಿ ಕಲಿತ ಸಂಸ್ಕಾರ ಜೀವನದುದ್ದಕ್ಕೂ ಪಾಲಿಸಬೇಕು. ದುಶ್ಚಟ ದುರ್ಗುಣಗಳಿಂದ ದೂರ ಉಳಿದು ಉತ್ತಮ ಸಂಶೋಧಕ, ವಿಜ್ಞಾನಿಗಳಾಗಿ ರಾಷ್ಟ್ರಕ್ಕೆ ತಮ್ಮದೇ ಆದ ಕೊಡುಗೆ ನೀಡುವುದರ ಜತೆಗೆ ಸಮಾಜದಲ್ಲಿನ ಬಡವರು, ದುರ್ಬಲ ವರ್ಗದವರಿಗೆ ಕೈಲಾದಷ್ಟು ಸಹಾಯ ಮಾಡುವ ಗುಣ ಬೆಳೆಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ನೇತೃತ್ವವಹಿಸಿದ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ಗಡಿಭಾಗದ ಮಕ್ಕಳು ಶೈಕ್ಷಣಿಕವಾಗಿ ರಾಷ್ಟ್ರ ಮಟ್ಟದಲ್ಲಿ ಸಾಧನೆ ಮಾಡಬೇಕು ಎನ್ನುವುದು ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಕನಸಾಗಿತ್ತು ಅದರಂತೆ ನಮ್ಮ ಸಂಸ್ಥೆಯವೊಂದರಿಂದಲೇ ಪ್ರತಿವರ್ಷ ಹತ್ತಾರು ಮಕ್ಕಳು ಐಐಟಿ ಪ್ರವೇಶ ಪಡೆಯಲು ಅರ್ಹತೆ ಗಿಟ್ಟಿಸಿಕೊಳ್ಳುತ್ತಿರುವುದು ಸಂತಸ ತರಿಸಿದೆ ಎಂದು ತಿಳಿಸಿದರು.

ಪ್ರಾಚಾರ್ಯ ಬಸವರಾಜ ಮೊಳಕೀರೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಉಪನ್ಯಾಸಕರಾದ ಸದಾ ವಿಜಯ, ಪುರುಷೋತ್ತಮ, ಶ್ರೀನಿವಾಸ ರೆಡ್ಡಿ, ಸಂಜಯ ತಿವಾರಿ, ರಾಘವೇಂದ್ರ ಪತ್ರಿ, ನಾಗೇಶ ಬಿರಾದಾರ್ ಸೇರಿದಂತೆ ಹಲವರು ಇದ್ದರು.

# ಮಾಧ್ಯಮವಾರು ಶಾಲಾ ಡ್ರೈಸ್ ಕೋಡ್ ಬದಲಾವಣೆಗೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಜೂ.13:ಸರ್ಕಾರಿ ಶಾಲೆಗಳಲ್ಲಿ ಮಾಧ್ಯಮವಾರು ಶಾಲಾ ಡ್ರೈಸ್ ಕೋಡ್ ಬದಲಾವಣೆ ಮಾಡುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಘಟಕ ಹಾಗು ಎಲ್ಲಾ ತಾಲೂಕು ಘಟಕದ ಪದಾಧಿಕಾರಿಗಳು ಸಂಸದ ಸಾಗರ ಖಂಡ್ರೆಯವರಿಗೆ ಶುಕ್ರವಾರ ಮನವಿ ಸಲ್ಲಿಸಿದರು.

ಬೀದರ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಒಂದೇ ಡ್ರೈಸ್ ಕೋಡ್ ಅಡಿಯಲ್ಲಿ ಕನ್ನಡ, ಮರಾಠಿ, ಇಂಗ್ಲೀಷ, ಉರ್ದು (ಭಾಷೆಗಳ) ಮಾಧ್ಯಮದ ಶಾಲೆಗಳು ನಡೆಯುತ್ತಿದ್ದು. ಇದರಿಂದ ಶಿಕ್ಷಕರು ಹೆಚ್ಚುವರಿಯಾಗುತ್ತಿದ್ದಾರೆ. ಹೀಗಾಗಿ ಶೈಕ್ಷಣಿಕವಾಗಿ ತುಂಬ ತೊಂದರೆ ಅನುಭವಿಸುವಂತಾಗಿದೆ. ಹೀಗಾಗಿ ಎಲ್ಲಾ ಬಹುಭಾಷಾ ಮಾಧ್ಯಮದ ಶಾಲೆಗಳಲ್ಲಿ ಮಾಧ್ಯಮವಾರು ಡ್ರೈಸ್ ಕೋಡು ನೀಡಿದ್ದಲ್ಲಿ ಈ ತೊಂದರೆ ಉಂಟಾಗುದಿಲ್ಲ. ಕಾರಣ ಈ ಎಲ್ಲಾ ಬಹುಭಾಷಾ ಮಧ್ಯಮಗಳ ಶಾಲೆಗಳಲ್ಲಿ ಮಾಧ್ಯಮವಾರು ಶಾಲಾ ಡ್ರೈಸ್‌ಕೋಡ್ ನೀಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಆಜ್ಯ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ರವೀಂದ್ರ ರೆಡ್ಡಿ, ಭಾಲ್ಕಿ ತಾಲೂಕು

ಅಧ್ಯಕ್ಷ ಸೂರ್ಯಕಾಂತ ಸುಂಟೆ, ಇಂದುಮತಿ ಕಲ್ಲೂರೆ, ಕೃಷ್ಣಾಬಾಯಿ

ಲಾಂಚಕರ, ಲಕ್ಷ ??ಣ ಹೆಂಬಾಳೆ, ಮಹೇಶ ಮುಳೆ, ಶರಣಬಸಪ್ಪ ಬಿರಾದಾರ, ಹರಿನಾತ ಪಾಟೀಲ, ದತ್ತು ಪಾಟೀಲ, ವಿಜಯಕುಮಾರ ನುದನೂರೆ, ಗಜಾನನ ಮುಳ್ಳಾ, ಅಶೋಕ ಕುಂಬಾರ, ಸರ್ಕಾರಿ ನೌಕರರ ಸಂಘದ ತಾಲೂಕು ಕಾರ್ಯದರ್ಶಿ

ರಾಜೆಪ್ಪಪಾಟೀಲ, ಬಸವರಾಜ ಮಡಿವಾಳ, ಬಸವರಾಜ ನೇಳಗೆ, ಬಾಲಾಜಿ ಬೈರಾಗಿ, ಪ್ರಭಾವತಿ ಬಿಗೆ ಮತ್ತಿತರರು ಇದ್ದರು.

# ಸೋಯಾಬೀನ್ ಬೀಜದ ಕೊರತೆಯಾಗದಿರಲಿ: ಶಾಸಕ ಪ್ರಭು ಚವ್ಹಾಣ

ಮಲ್ಲಮ್ಮ ನುಡಿ ವಾರ್ತೆ

ಔರಾಧ:ಜೂ.13:ಮುಂಗಾರು ಹಂಗಾಮಿನಲ್ಲಿ ಔರಾದ(ಬಿ) ಹಾಗೂ ಕಮಲನಗರ ತಾಲ್ಲೂಕುಗಳಲ್ಲಿ ರೈತರು ಹೆಚ್ಚಾಗಿ ಬಿತ್ತನೆ ಮಾಡಲಾಗುವ ಸೋಯಾಬೀನ್ ಬೀಜದ ಕೊರತೆಯಾಗದಂತೆ ಅಗತ್ಯ ವ್ಯವಸ್ಥೆ ಮಾಡಿಕೊಳ್ಳಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಕೃಷಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಪ್ರಸಕ್ತ ಹಂಗಾಮಿನಲ್ಲಿ ಬಿತ್ತನೆ ಸಮಯಕ್ಕೆ ಸರಿಯಾಗಿ ಮಳೆಯಾಗಿರುವುದರಿಂದ ಎಲ್ಲ ರೈತರು ಕೃಷಿ ಚಟುವಟಿಕೆಗಳನ್ನು ಆರಂಭಿಸಿದ್ದಾರೆ.ಈ ಸಂದರ್ಭದಲ್ಲಿ ರೈತರಿಗೆ ಬಿತ್ತನೆ ಬೀಜ ಸಿಗಬೇಕು. ಎಲ್ಲ ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜ ವಿತರಣೆ ನಡೆ-ಯುತ್ತಿದೆ ಆದರೂ ಕೆಲವೆಡೆ ಸೋಯಾಬೀನ್ ಬೀಜ ಸಿಗುತ್ತಿಲ್ಲವೆಂದು ರೈತರಿಂದ ನಿರಂತರವಾಗಿ ದೂರುಗಳು ಬರುತ್ತಿವೆ. ಕ್ಷೇತ್ರಕ್ಕೆ ಬೇಕಾದಷ್ಟು ಸೋಯಾಬೀನ್ ಬೀಜ ತರಿಸಿಕೊಂಡು ಸಕಾಲಕ್ಕೆ ರೈತರಿಗೆ ಕಲ್ಪಿಸಬೇಕೆಂದು ನಿರ್ದೇಶನ ನೀಡಿದ್ದಾರೆ.

ರೈತ ಸಂಪರ್ಕ ಕೇಂದ್ರಗಳಿಗೆ ಬರುವ ರೈತರೊಂದಿಗೆ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿ ಸೌಜನ್ಯದಿಂದ ವ್ಯವಹರಿಸಬೇಕು. ಬಿತ್ತನೆ ಬೀಜ, ರಸಗೊಬ್ಬರಕ್ಕಾಗಿ ಬರುವ ಯಾವೊಬ್ಬ ರೈತರನ್ನು ಬರಿಗೈಯಿಂದ ಕಳುಹಿಸಬಾರದು. ಎಲ್ಲ ಗ್ರಾಮಗಳಿಗೆ ನಿಗದಿತ ದಿನಾಂಕದಂದು ಬಿತ್ತನೆ ಬೀಜ ವಿತರಿಸಬೇಕು. ಆಯಾ ದಿನದಂದು ಬಿತ್ತನೆ ಬೀಜ ಪಡೆಯದ ರೈತರಿಗೆ ಅನ್ಯ ದಿನಗಳಂದು ವಿತರಿಸಲು ವ್ಯವಸ್ಥೆ ಮಾಡಿಕೊಳ್ಳಬೇಕು ಎಂದಿದ್ದಾರೆ.

ಬಿತ್ತನೆ ಬೀಜ ಹಾಗೂ ರಸಗೊಬ್ಬರದ ದರಗಳ ಬಗ್ಗೆ ಎಲ್ಲ ರೈತ ಸಂಪರ್ಕ ಕೇಂದ್ರಗಳಲ್ಲಿ ಸರಿಯಾಗಿ ಕಾಣುವ ರೀತಿಯಲ್ಲಿ ಪ್ರದರ್ಶಿಸಬೇಕು. ಇಳುವರಿ ಹೆಚ್ಚಿಸಲು ಅಗತ್ಯ ಮಾರ್ಗದರ್ಶನ ನೀಡಬೇಕು. ಅನ್ನದಾತರಾಗಿರುವ ರೈತರಿಗೆ ಯಾವುದೇ ರೀತಿಯ ಸಮಸ್ಯೆಗಳಾಗಬಾರದು.ಅವರಿಗಾಗಿ ಇರುವ ಎಲ್ಲ ಯೋಜನೆಗಳ ಸೌಲಭ್ಯಗಳನ್ನು ತಲುಪಿಸಬೇಕು. ರೈತರಿಗೆ ಯಾವುಧೇ ರೀತಿಯ ಸಮಸ್ಯೆಗಳಾದರೆ ಸಹಿಸುವುದಿಲ್ಲ ಎಂದು ಹೇಳಿದ್ದಾರೆ.

ಸೋಯಾಬೀನ್ ಕೊರತೆಗೆ ಸಂಬಂಧಿಸಿದಂತೆ ಕೃಷಿ ಇಲಾಖೆಯ ಜಂಟಿ ನಿರ್ದೇಶಕರು, ಉಪ ನಿರ್ದೇಶಕರು, ಸಹಾಯಕ ನಿರ್ದೇಶಕರೊಂದಿಗೆ ಮಾತನಾಡಿದ್ದೇನೆ. ಅವಶ್ಯಕ ಬಿತ್ತನೆ ಬೀಜ ಸಕಾಲಕ್ಕೆ ಕಲ್ಪಿಸಲಾಗುತ್ತದೆ. ಎಲ್ಲ ರೈತರಿಗೂ ಬಿತ್ತನೆ ಬೀಜ ಲಭಿಸಲಿದೆ. ರೈತರು ಯಾವುದೇ ರೀತಿಯ ಆತಂಕಕ್ಕೆ ಒಳಗಾಗದೇ ತಮ್ಮ ಕೃಷಿ ಚಟುವಟಿಕೆಗಳನ್ನು ಮುಂದುವರೆಸಬೇಕೆಂದು ಶಾಸಕರು ರೈತರಲ್ಲಿ ಮನವಿ ಮಾಡಿದ್ದಾರೆ.

# ಭಾಗ್ಯಲಕ್ಷ್ಮೀ ಯೋಜನೆಗೆ 18 ವರ್ಷ ಪೂರ್ಣ: ಮೊದಲ ಫಲಾನುಭವಿಗಳಿಗೆ ಹಣ ರವಾನೆ ಆರಂಭ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂ.13 : ಉಪ ನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿಯಲ್ಲಿ ಬರುವ ಭಾಗ್ಯಲಕ್ಷ್ಮೀ ಯೋಜನೆಯಡಿ ದಿನಾಂಕ:01-06-2006ರಿಂದ 31-07-2008ರ ಅವಧಿಯಲ್ಲಿ (Project-1) ಜನಿಸಿ ನೋಂದಣಿಯಾಗಿರುವ ಹೆಣ್ಣು ಮಕ್ಕಳ ಹೆಸರಿನಲ್ಲಿ 10,000 ರೂ. ಠೇವಣಿ ಮೊತ್ತವನ್ನು ಪಾಲುದಾರ ಹಣಕಾಸು ಸಂಸ್ಥೆಯಾದ ಭಾರತೀಯ ಜೀವ ವಿಮಾ ನಿಗಮದಲ್ಲಿ ಹೂಡಲಾಗಿದ್ದು, ಈ ಯೋಜನೆಯ ಮಾರ್ಗಸೂಚಿಯನ್ವಯ ಸದರಿ ದಿನಾಂಕದ ನಂತರ ಜನಿಸಿ, ಯೋಜನೆಯಡಿ ನೋಂದಣಿಯಾಗಿ, 18 ವರ್ಷ ಪೂರ್ಣಗೊಂಡಿರುವ ಬಿಪಿಎಲ್ ಕುಟುಂಬದ ಮೊದಲ 02 ಹೆಣ್ಣು ಮಕ್ಕಳಿಗೆ ಪ್ರಸಕ್ತ ಸಾಲಿನಲ್ಲಿ ಆರ್ಥಿಕ ಸೌಲಭ್ಯ ಕಲ್ಪಿಸಲಾಗುತ್ತಿದೆ ಎಂದು ಬೀದರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಶ್ರೀಧರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಪರಿಪಕ್ವ ಮೊತ್ತಕ್ಕೆ ಸಲ್ಲಿಸಬೇಕಾದ ದಾಖಲಾತಿಗಳ ವಿವರ: ಭಾಗ್ಯಲಕ್ಷ್ಮೀ ಬಾಂಡ್, ಫಲಾನುಭವಿಯ ಜನನ ಪ್ರಮಾಣ ಪತ್ರ, ಪಡೀತರ ಚೀಟಿ, ಶಾಲಾ ದಾಖಲಾತಿಗಳು, ಬ್ಯಾಂಕ್‌ಪಾಸ್‌ಬುಕ್, ಇತರೇ ದಾಖಲಾತಿಗಳು.ಅದನರ್ವಯ ಈ ಯೋಜನೆಯಡಿ ಈಗಾಗಲೇ ಬಾಂಡ್ ಸೌಲಭ್ಯವನ್ನು ಪಡೆದಿರುವ ಫಲಾನುಭವಿಗಳು ಆಯಾ ತಾಲ್ಲೂಕಿನ ಅಂಗನವಾಡಿ ಕೇಂದ್ರದಲ್ಲಿ ಬರುವ ಅಂಗನವಾಡಿ ಕಛೇರಿಗೆ /ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಗೆ/ ಉಪ ನಿರ್ದೇಶಕರ ಕಛೇರಿಗೆ ಭೇಟಿ ನೀಡಿ, ಸದರಿ ಯೋಜನೆಯ ಕುರಿತು ಸಂಪೂರ್ಣ ವ ನಾಹಿತಿಯನ್ನು ಪಡೆಯಬಹುದಾಗಿದೆ. 18 ವರ್ಷ ಪೂರ್ಣಗೊಂಡಿರುವ ಬಿಪಿಎಲ್ ಕುಟುಂಬದ ಮೊದಲ 02 ಹೆಣ್ಣು ಭಾಗ್ಯಲಕ್ಷ್ಮೀ ಯೋಜನೆಯ ಪರಿಪಕ್ವ ಅರ್ಜಿಯನ್ನು ಆಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಯಲ್ಲಿ ಅರ್ಜಿ ನಮೂನೆಯನ್ನು ಪಡೆಯಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ರಾಜ್ಯದ ಮುಖ್ಯಮಂತ್ರಿಗಳ ಪ್ರವಾಸ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.13–ರಾಜ್ಯದ ಮುಖ್ಯಮಂತ್ರಿಗಳಾದಸಿದ್ದರಾಮಯ್ಯ ಅವರುಬೆಂಗಳೂರಿನಿಂದವಿಶೇಷ ವಿಮಾನದ ಮೂಲಕ ಜೂನ್ 14 ರಂದು ಶನಿವಾರ ಬೆಳಿಗ್ಗೆ 11.30 ಗಂಟೆಗೆ ಕಲಬುರಗಿಗೆ ಆಗಮಿಸುವರು. ನಂತರ ಅಂದು ಬೆಳಿಗ್ಗೆ 11.35 ಗಂ–ಟೆಗೆ ಕಲಬುರಗಿ ವಿಮಾನದ ನಿಲ್ದಾಣದಿಂದ ಹೆಲಿಕ್ಯಾಪ್ಟರ್ ಮೂಲಕ ಯಾದಗಿರಿಗೆ ಪ್ರಯಾಣಿಸಿ, ಬೆಳಿಗ್ಗೆ 11.55 ಗಂಟೆಗೆ ಯಾದಗಿರಿಯಲ್ಲಿ ನಿಗದಿತ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ಸಂಜೆ 4.25 ಗಂಟೆಗೆ ಯಾದಗಿರಿಯಿಂದ ಹೆಲಿಕ್ಯಾಪ್ಟರ್ ಮೂಲಕ ಕಲಬುರಗಿಗೆ ವಿಮಾನ ನಿಲ್ದಾಣಕ್ಕೆ ಆಗಮಿಸಿ, ಸಂಜೆ 4.30 ಗಂಟೆಗೆ ಕಲಬುರಗಿ ವಿಮಾನ ನಿಲ್ದಾಣದಿಂದ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

## ರಾಜ್ಯದ ಉಪ ಮುಖ್ಯಮಂತ್ರಿಗಳ ಪ್ರವಾಸ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.13–ರಾಜ್ಯದ ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಬೆಂಗಳೂರಿನಿಂದ ವಿಶೇಷ ವಿಮಾನದ ಮೂಲಕ ಜೂನ್ 14 ರಂದು ಶನಿವಾರ ಬೆಳಿಗ್ಗೆ 11.30 ಗಂಟೆಗೆ ಕಲಬುರಗಿ ವಿಮಾಣ ನಿಲ್ದಾಣಕ್ಕೆ ಆಗಮಿಸುವರು. ನಂತರ ಅಂದು ಬೆಳಿಗ್ಗೆ 11.35 ಗಂಟೆಗೆ ಕಲಬುರಗಿ ವಿಮಾನ ನಿಲ್ದಾಣದಿಂದ ಹೆಲಿಕ್ಯಾಪ್ಟರ್ ಮೂಲಕ ಯಾದಗಿರಿಗೆ ಪ್ರಯಾಣಿಸಿ, ಬೆಳಿಗ್ಗೆ 11.55 ಗಂಟೆಗೆ ಯಾದಗಿರಿಯಲ್ಲಿ ನಿಗದಿತ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ಸಂಜೆ 4 ಗಂಟೆಗೆಮರಳಿ ಯಾದಗಿರಿಯಿಂದ ಹೆಲಿಕ್ಯಾಪ್ಟರ್ ಮೂಲಕಕಲಬುರಗಿ ವಿಮಾನ ನಿಲ್ದಾಣಕ್ಕೆ ಆಗಮಿಸಿ, ಸಂಜೆ 4.30 ಗಂಟೆಗೆ ಕಲಬುರಗಿ ವಿಮಾನ ನಿಲ್ದಾಣದಿಂದ ವಿಶೇಷ ವಿಮಾನದಮೂಲಕಬೆಂಗಳೂರಿಗೆ ಪ್ರಯಾಣಿಸುವರು.

## ರಾಜ್ಯದ ಸಮಾಜ ಕಲ್ಯಾಣ ಸಚಿವರ ಪರಿಷ್ಕೃತ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.13–ರಾಜ್ಯದ ಸಮಾಜ ಕಲ್ಯಾಣ ಸಚಿವರಾದ ಡಾ. ಹೆಚ್.ಸಿ. ಮಹದೇವಪ್ಪ ಅವರು ಬೆಂಗಳೂರಿನಿಂದ ಮುಖ್ಯಮಂತ್ರಿಗಳೊಂದಿಗೆ ವಿಶೇಷ ವಿಮಾನದ ಮೂಲಕ ಜೂನ್ 14 ರಂದು ಶನಿವಾರ ಬೆಳಿಗ್ಗೆ 11.30 ಕಲಬುರಗಿಗೆ ಆಗಮಿಸಿ, ಬೆಳಿಗ್ಗೆ 11.35 ಗಂಟೆಗೆ ಕಲಬುರಗಿ ವಿಮಾನ ನಿಲ್ದಾಣದಿಂದ ಹೆಲಿಕ್ಯಾಪ್ಟರ್ ಮೂಲಕಯಾದಗಿರಿಗೆಪ್ರಯಾಣಿಸಿ, ಮುಖ್ಯಮಂತ್ರಿಗಳೊಂದಿಗೆ ಯಾದಗಿರಿಯಲ್ಲಿ ನಿಗದಿತ ಕಾರ್ಯಕ್ರಮಗಳಲ್ಲಿಭಾಗವಹಿಸುವರು. ನಂತರ ಅಂದು ಸಂಜೆ 4.25 ಗಂಟೆಗೆ ಯಾದಗಿರಿಯಿಂದ ಕಲಬುರಗಿಗೆ ಆಗಮಿಸಿ ವಾಸ್ತವ್ಯ ಮಾಡುವರು.

ಜೂನ್ 15 ರಂದು ಭಾನುವಾರ ಬೆಳಿಗ್ಗೆ 11ಗಂಟೆಗೆಸೇಡಂತಾಲೂಕಿನ ಕೋಡ್ಲಾ ಗ್ರಾಮದಲ್ಲಿ ಉರಿಲಿಂಗ ಪೆದ್ದೀಶ್ವರ ಮಹಾಸಂಸ್ಥಾನದ ಮಠದ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ ಮಧ್ಯಾಹ್ನ 12 ಗಂಟೆಗೆ ಬೀದರ ಜಿಲ್ಲೆಯಹಮನಾಬಾದ್‌ತಾಲೂಕಿನ ದುಬಲಗುಂಡಿ ಗ್ರಾಮಕ್ಕೆ ತೆರಳಿ ನಿಗದಿತ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ ಅಂದು ರಾತ್ರಿ 8.30 ಗಂಟೆಗೆ ಮರಳಿ ಕಲಬುರಗಿಗೆ ಆಗಮಿಸಿ, ರಾತ್ರಿ 9.15 ಗಂಟೆಗೆ ಕಲಬುರಗಿಯಿಂದ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

## ಜೂನ್ 15 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.13–ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ–1ರ ವತಿಯಿಂದ ಇದೇ ಜೂನ್ 15 ರಂದು 110/11ಕೆವಿ ನಂದೂರ ವಿದ್ಯುತ್ ವಿತರಣಾ ಕೇಂದ್ರದ ಲಿಂಕಲೈನ್ ಕಾರ್ಯ ಹಾಗೂ 110/33ಕೆವಿ ಕಲಬುರಗಿ ಉತ್ತರ ವಿದ್ಯುತ್ ವಿತರಣಾ ಕೇಂದ್ರದಲ್ಲಿ 20 ಎಮ್.ವಿ.ಎ. ಪರಿವರ್ತಕದ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಂಡಿರುವ ಪ್ರಯುಕ್ತ ಕೇಂದ್ರದಿಂದ ಹೊರಹೊಗುವ 33ಕೆವಿ ಫೀಡರಗಳ ( 33/11ಕೆವಿ ಜಂಬಗಾ ವಿದ್ಯುತ್ ಉಪ ವಿತರಣಾ ಕೇಂದ್ರ) ವ್ಯಾಪ್ತಿಯ ಗ್ರಾಮಗಳಲ್ಲಿ ಇದೇ ಜೂನ್ 15 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಎಲ್ಲಾ ಗ್ರಾಹಕರು ಇದಕ್ಕೆ ಸಹಕರಿಸಬೇಕೆಂದು ಕಲಬುರಗಿ ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ–1ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

ನಂದೂರ ವಿದ್ಯುತ್ ವಿತರಣಾ ಕೇಂದ್ರ: ಎಫ್–10 ನಂದೂರ ಐಪಿ ಎಫ್–11 ಐ.ಓ.ಸಿ.ಎಲ್, ಎಫ್–12 ಎಮ್.ಆರ್.ಎಫ್. ಫೀಡರಿನ ನಂದೂರ(ಕೆ), ನಂದೂರ(ಬಿ), ನಂದೂರ ತಾಂಡಾ, ಬಾಪು ನಾಯಕ ತಾಂಡಾ, ಧರ್ಮಾಪೂರ, ಕುಸನೂರ ತಾಂಡಾ ಹಾಗೂ ನಂದೂರಇಂಡಸ್ಟ್ರೀಯಲ್ ಏರಿಯಾ ಹಂತ–1. ಜಂಬಗಾ ವಿದ್ಯುತ್ ವಿತರಣಾ ಕೇಂದ್ರ: ಎಫ್–1 ಚಿಂಚನಸೂರ ಎನ್.ಜಿ.ವೈ,ಎಫ್–2 ಬನ್ನೂರ ಎನ್.ಜಿ.ವೈ, ಎಫ್–3 ಕಲ್ಲಹಂಗರಗಾ ಐಪಿ, ಎಫ್–4 ಸಂಗೋಳಗಿ ಐಪಿ, ಎಫ್–5 ಸುಲ್ತಾನಪೂರ ಐಪಿ, ಎಫ್–6 ಜಂಬಗಾ ಎನ್.ಜಿ.ವೈ, ಎಫ್–7 ಅಷ್ಟಗಾ ಐಪಿ ಮತ್ತು ಎಫ್–8 ಭೀಮಳ್ಳಿ ಐಪಿ ಫೀಡರಿನ ಕಲ್ಲಹಂಗರಗಾ, ಚಿಂಚನಸೂರ, ಕೆರಿ ಅಂಬಲಗಾ, ಕುಮಸಿ ವಾಡಿ, ಸಂಗಳೋಗಿ, ಸುಲ್ತಾನಪೂರ, ಜಂಬಗಾ, ಅಷ್ಟಗಾ, ಭೀಮಳ್ಳಿ ಮತ್ತು ಕಟ್ಟರಗಾ ಹಾಗೂ ಸುತ್ತಮುತ್ತಲಿನ ಗ್ರಾಮಗಳು.

## ಜೂ.15 ರಂದು ಶಾಲಾ ಅಮೃತ ಮಹೋತ್ಸವ ಕಾರ್ಯಕ್ರಮ

ಬಳ್ಳಾರಿ,ಜೂ.13–ತಾಲ್ಲೂಕಿನ ಇಬ್ರಾಹಿಂಪುರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಜೂ.15 ರಂದು ಶಾಲೆಯ 75 ನೇ ವರ್ಷದ ಶಾಲಾ ಅಮೃತ ಮಹೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಶಾಲೆಯ ಪ್ರಭಾರಿ ಮುಖ್ಯಗುರುಗಳಾದ ಹನುಮೇಶಿ.ಟಿ ಅವರು ತಿಳಿಸಿದ್ದಾರೆ.

ಕಾರ್ಯಕ್ರಮದಲ್ಲಿ ಹಳೆಯ ವಿದ್ಯಾರ್ಥಿಗಳಿಂದ ಗುರುವಂದನಾ, ನಿವೃತ್ತ ಪ್ರಭಾರಿ ಮುಖ್ಯಗುರುಗಳಾದ ಡಿ.ರ‍್ರಿಸ್ವಾಮಿ ಅವರ ಬೀಳ್ಕೊಡುಗೆ ಸನ್ಮಾನ ಮತ್ತು 1950 ರಿಂದ ಇಲ್ಲಿಯವರೆಗೆ ಸೇವೆ ಸಲ್ಲಿಸಿದ ಶಿಕ್ಷಕರಿಗೆ ಪೂರ್ಣ ಕುಂಭ ಸ್ವಾಗತ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದ್ದಾರೆ.

## ಲಾಡವಂತಿ ಗ್ರಾಮದಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜೂ 13 ಐಸಿಎಆರ್ –ಕೃಷಿ ವಿಜ್ಞಾನ ಕೇಂದ್ರ ಬೀದರ್ ಹಾಗೂ ಐಸಿಎಆರ್– ಕೃಷಿ ಸಂಶೋಧನಾ ಸಂಸ್ಥೆಗಳ ಸಹಕಾರದೊಂದಿಗೆ ವಿಕಸಿತ ಕೃಷಿ ಸಂಕಲ್ಪ ಅಭಿಯಾನವನ್ನು ತಾಲೂಕಿನ ಲಾಡವಂತಿ ಗ್ರಾಮದಲ್ಲಿ ಹಮ್ಮಿಕೊಳ್ಳಲಾಯಿತು.

ಬೀದರ ಐಸಿಎಆರ್ –ಕೃಷಿ ವಿಜ್ಞಾನ ಕೇಂದ್ರ ವಿಜ್ಞಾನಿಗಳಾದ ಡಾ. ಆರ್.ಎಲ್. ಜಾಧವ್ ರವರು ರೈತರನ್ನು ಉದ್ದೇಶಿಸಿ ಮಾತನಾಡಿ ಗ್ರಾಮದಲ್ಲಿ ಬೆಳೆಯುವ ಮುಖ್ಯ ಬೆಳೆಗಳಾದ ಸೋಯಾಬಿನ್ ಮತ್ತು ತೊಗರಿ ಬೆಳೆಯ ಸುಧಾರಿತ ಬೇಸಾಯ ಕ್ರಮಗಳಾದ ಭೂಮಿ ಸಿದ್ದತೆ, ಮೊಳಕೆಯೊಡೆಯುವಿಕೆ ಪರೀಕ್ಷೆ ಮಾಡುವುದು, ಬೀಜೋಪಚಾರ ಮಾಡುವುದು, ಸುಧಾರಿತ ತಳಿ ಆಯ್ದುಕೊಳ್ಳುವುದು,ತೊಗರಿಯಲ್ಲಿ ಚಂಡಿ ಚೂಟುವುದು, ಸಮಗ್ರ ಪೋಷಕಾಂಶ ಹಾಗೂ ನೀರಿನ ನಿರ್ವಹಣೆ ಮಾಡುವದು ಮತ್ತು ಇತರ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ಮುಂಗಾರು ಕೃಷಿ ಹಂಗಾಮಿನ ಸಿದ್ಧತೆ ಹಾಗೂ ಕೃಷಿ ತಾಂತ್ರಿಕ ಮಾಹಿತಿಯನ್ನು ನೀಡಲಾಯಿತು.ರೈತರಿಗೆ ಒಂದು ಎಕರೆ ಭೂಮಿಯಲ್ಲಿ ಒಂದು ಲಕ್ಷ ರೂ ಅದಾಯ ತೆಗೆಯುವ ಸರದಿ ಬೆಳೆಗಳ ಬಗ್ಗೆ ಅಂದರೆ, ಹೆಸರು–ಚೀಯಾ–ಎಳ್ಳು ಅಥವ ಹೆಸರು– ಅಜ್ವೈನ್– ಎಳ್ಳು ಬಗ್ಗೆ ಮಾಹಿತಿ ನೀಡಿದರು.

ಐಸಿಎಆರ್– ಭಾರತೀಯ ಹುಲ್ಲುಗಾವಲು ಮತ್ತು ಮೇವು ಸಂಶೋಧನ ಸಂಸ್ಥೆ,ಧಾರವಾಡದ ವಿಜ್ಞಾನಿಗಳಾದ ಡಾ.ವಿನೋದ್ ಕುಮಾರವರು ಬೀಜೋಪಚಾರ ಮತ್ತು ಮಣ್ಣು ಪರೀಕ್ಷೆಯ ಮಹತ್ವದ ಕುರಿತು ಮಾಹಿತಿ ನೀಡಿದರು. ಐಸಿಎಆರ್– ಭಾರತೀಯ ಹುಲ್ಲುಗಾವಲು ಮತ್ತು ಮೇವು ಸಂಶೋಧನ ಸಂಸ್ಥೆ,ಧಾರವಾಡದ ವಿಜ್ಞಾನಿಗಳಾದ ಇನ್ನೋರ್ವ ವಿಜ್ಞಾನಿಗಳಾದ ಡಾ. ನರೇಂದ್ರ ಕುಲಕರ್ಣಿ ಇವರು "ವಿಕಸಿತ ಕೃಷಿ ಸಂಕಲ್ಪ ಅಭಿಯಾನ" ದ ಕುರಿತು ಮಾಹಿತಿ ನೀಡಿದರು ಮತ್ತು ಮುಂಗಾರು ಬೆಳೆಗಳ ಸಮಗ್ರ ಕೀಟ ನಿರ್ವಹಣೆ ಬಗ್ಗೆ ತಿಳಿಸಿದರು ಹಾಗೂ ವಿಳ್ಯದ ಎಲೆ ರೋಗಗಳ ನಿರ್ವಹಣೆ ಬಗ್ಗೆ ಮಾಹಿತಿ ನೀಡಿದರು.

ಐಸಿಎಆರ್–ರಾಷ್ಟ್ರೀಯ ಪ್ರಾಣಿ ಪೋಷಕಾಂಶ ಮತ್ತು ಶರೀರ ಶಾಸ್ತ್ರ ಸಂಸ್ಥೆ, ಬೆಂಗಳೂರಿನ ವಿಜ್ಞಾನಿಗಳಾದ ಡಾ. ಹೆಚ್,ಎಸ್, ರಮೇಶ್ ರವರು ಸ್ವಚ್ಛ ಹಾಲು ಉತ್ಪಾದನೆ ಮತ್ತು ಪಶುಗಳಲ್ಲಿ ಬಂಜೆತನ ನಿವಾರಣೆ ಬಗ್ಗೆ ಮಾಹಿತಿ ನೀಡಿದರು.

ಐಸಿಎಆರ್– ರಾಷ್ಟ್ರೀಯ ಪಶು ಸಾಂಕ್ರಾಮಿಕ ರೋಗಶಾಸ್ತ್ರ ಮತ್ತು ರೋಗ ಇಂಫಾರ್ಮೇಟಿಂಗ್ ಸಂಸ್ಥೆ, ಬೆಂಗಳೂರಿನ ವಿಜ್ಞಾನಿಗಳಾದ ಡಾ. ಚೇತನ್ ಕುಮಾರ್ ಮಾತನಾಡಿ ಪ್ರಾಣಿಗಳಿಂದ ಮನುಷ್ಯರಿಗೆ ಹರಡಬಹುದಾದ ರೋಗಗಳು ಅದರಲ್ಲೂ ಮುಖ್ಯವಾಗಿ ಹುಚ್ಚು ನಾಯಿ ಕಡಿತ ರೋಗದ ಬಗ್ಗೆ ರೈತರಿಗೆ ತಿಳಿಸಿದರು. ಕಲಬುರ್ಗಿಯ ಕೃಷಿ ಮಹಾವಿದ್ಯಾಲಯ ಸಹಾಯಕ ಪ್ರಾಧ್ಯಾಪಕರಾದ ಡಾ ರಾಜಶೇಖರ್ ಬಸನಾಯಕ್, ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀಕೃಷ್ಣ ತಾರಮೋಡೆ, ಉಪಾಧ್ಯಕ್ಷರಾದ ಗೋಪಾಲ್ ಪಾಟೀಲ್, ಸದಸ್ಯರಾದ ಧನರಾಜ್ ಪಡೆ, ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾದ ರಮೇಶ್ ರಾಥೋಡ್, ಪ್ರಮುಖರಾದ ಸಂಜುಕುಮಾರ್ ಭೂಸರೆ, ವಿಲಾಸ್, ವೆಂಕಟರಾವ್ ವಾಡಿಕರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಸುತ್ತಮುತ್ತಲಿನ ಗ್ರಾಮದ ರೈತ ಬಾಂಧವರೊಂದಿಗೆ ವಿಜ್ಞಾನಿಗಳು ಸಂವಾದ ನಡೆಸಿ ವೈಜ್ಞಾನಿಕ ಮಾಹಿತಿ ನೀಡಿದರು.

## ಬಾಲ ಕಾರ್ಮಿಕ ಪದ್ಧತಿ ನಿಲ್ಲಲು ಪ್ರತಿಯೊಬ್ಬರ ಸಹಕಾರ ಅಗತ್ಯ, ನ್ಯಾಯಾಧೀಶ ಮರಿಯಪ್ಪ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜೂ:13:ಸಮಾಜದಲ್ಲಿ ಬಾಲ ಕಾರ್ಮಿಕ ಪದ್ದತಿಯು ಸಂಪೂರ್ಣವಾಗಿ ನಿಲ್ಲಲು ಪ್ರತಿಯೊಬ್ಬ ನಾಗರಿಕರ ಸಹಕಾರದ ಅವಶ್ಯಕತೆ ಇದೆ. ಶಿಕ್ಷಣ ವಂಚಿತ ಮಕ್ಕಳ ಶೈಕ್ಷಣಿಕ ಭವಿಷ್ಯವನ್ನು ರೂಪುಗೊಳ್ಳಲು ನೆರವಾಗುವಂತೆ ಹಿರಿಯ ಸಿವಿಲ್ ನ್ಯಾಯಾಧೀಶ ಶ್ರೀ ಮರಿಯಪ್ಪ ಅವರು ತಿಳಿಸಿದರು.

ಗುರುವಾರ ನಗರದ ಸರಕಾರಿ ಪದವಿ ಮಹಾವಿದ್ಯಾಲಯದ ಸಭಾಂಗಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಯಾದಗಿರಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕಾರ್ಮಿಕ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಇಲಾಖೆ ನಿರ್ಮೂಲನಾ ಯೋಜನಾ ಸೊಸೈಟಿ ಯಾದಗಿರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಪೊಲೀಸ್ ಇಲಾಖೆ ಹಾಗೂ ಮಕ್ಕಳ ಸಹಾಯವಾಣಿ –1098/112 ಯಾದಗಿರಿ ರವರ ಸಂಯುಕ್ತ ಆಶ್ರಯದಲ್ಲಿ " ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ "ವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ಬಾಲ ಕಾರ್ಮಿಕ ಅನಿಷ್ಟ ಪದ್ಧತಿಗಳನ್ನು ತಡೆಯುವಲ್ಲಿ ಸಮಾಜದ ಪ್ರತಿಯೊಬ್ಬ ಪ್ರಜೆಗಳ ಕರ್ತವ್ಯವಾಗಿದೆ. ಪೋಷಕರು ಕುಟುಂಬದಲ್ಲಿ ಬಡತನವಿದೆ ಎಂಬ ಕಾರಣವನ್ನು ಇಟ್ಟು ಮಕ್ಕಳನ್ನು ಕೆಲಸಕ್ಕೆ ಸೇರಿಸುವುದು ಕಾನೂನಿನ ಪ್ರಕಾರ ಅಪರಾಧವಾಗಿದೆ. ಇದನ್ನು ಪೋಷಕರು ಅರಿತು ಮಕ್ಕಳನ್ನು ಕೆಲಸಕ್ಕೆ ಕಳಿಸಬಾರದು ಎಂದರು.

ಇಂದಿನ ಮಕ್ಕಳೇ ಮುಂದಿನ ನಾಗರಿಕ ಪ್ರಜೆಗಳು.

ಮಕ್ಕಳು ಮುಂದೆ ಕೂಲಿ ಕಾರ್ಮಿಕರಾಗದೆ ಒಳ್ಳೆಯ ವಿದ್ಯಾಭ್ಯಾಸವನ್ನು ಪಡೆದು ಉನ್ನತ ಉದ್ಯೋಗವನ್ನು ಪಡೆದು ಸಮಾಜಕ್ಕೆ ಮಾದರಿಯಾಗಬೇಕು ಎಂದು ಹೇಳಿದರು.

ಕೆಲ ಅಂಶಗಳ ಪ್ರಕಾರ ವಿಶ್ವದಾದ್ಯಂತ 16 ಕೋಟಿ ಮಕ್ಕಳು ಕೆಲಸದಲ್ಲಿ ತೊಡಗಿರುತ್ತಾರೆಂಬ ವಿಷಯ ಬಹಳ ನೋವಿನ ಸಂಗತಿಯಾಗಿದ್ದು,

ಹೋಟೆಲ್‌ಗಳಲ್ಲಿ, ಧಾಭಾಗಳಲ್ಲಿ, ಇಟ್ಟಿಗೆ ಬಟ್ಟಿಗಳಲ್ಲಿ ಗ್ಯಾರೇಜ್ ಗಳಲ್ಲಿ ಇನ್ನು ಅನೇಕ ಸ್ಥಳಗಳಲ್ಲಿ 18 ವಯಸ್ಸಿಗಿಂತ ಕಡಿಮೆ ಇರುವ ಬಾಲ ಕಾರ್ಮಿಕರು ಕೆಲಸ ಮಾಡುತ್ತಿರುತ್ತಾರೆ. ಅಂತಹವರು ಕಂಡಲ್ಲಿ ಬಾಲ ಕಾರ್ಮಿಕ ಸಹಾಯವಾಣಿ 1098 ಅಥವಾ 112 ಗೆ ಕರೆ ಮಾಡುವುದರ ಮೂಲಕ

ಬಾಲ ಕಾರ್ಮಿಕತೆ ಯನ್ನು ಸಂಪೂರ್ಣವಾಗಿ ಪ್ರತಿಯೊಬ್ಬರು ತಡೆಹಿಡಿಯಬೇಕು ಎಂದು ಕಳವಳ ವ್ಯಕ್ತಪಡಿಸಿದರು.

## ಧರ್ತಿ ಆಬಾ ಅಭಿಯಾನ–ಜಾಗೃತಿ ಮತ್ತು ಪ್ರಯೋಜನ ಸ್ಯಾಚುರೇಶನ್ ಶಿಬಿರಗಳು ಆಯೋಜನೆಗೆ ಅಗತ್ಯ ಕ್ರಮಕ್ಕೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬೀದರ,ಜೂನ್.13–ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಕೇಂದ್ರ ಬುಡಕಟ್ಟು ವ್ಯವಹಾರಗಳ ಮಂತ್ರಾಲಯ ನವದೆಹಲಿ ಅವರು Dharti Aabajanjatiya Gram Utkarsh Abhiyan ಯೋಜನೆಯಡಿ Dharti Aaba-janjatiya Gram Utkarsh Abhiyan ಯೋಜನೆಯಡಿ "Dharti Aaba Abhiyan-Awareness and Ben-efit saturation Camps" ಎಂಬ ಅಭಿಯಾನವನ್ನು ಬೀದರ ಜಿಲ್ಲೆಯಲ್ಲಿ ಆಯ್ಕೆಯಾದ 196 ಗ್ರಾಮಗಳಲ್ಲಿ ದಿನಾಂಕ:15–06–2025 ರಿಂದ 30–06–2025 ರವರೆಗೆ ಆಯೋಜಿಸಲು ತಿರ್ಮಾನಿಸಲಾಗಿದ್ದು, ಈ ಅಭಿಯಾನವು ಬುಡಕಟ್ಟು ಸಮುದಾಯದವರಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಯೋಜನೆಗಳ ಪ್ರಯೋಜನೆ ಪಡೆಯಲು ಬೇಕಾಗುವ ದಾಖಲಾತಿಗಳನ್ನು ಒದಗಿಸುವ ಬಗ್ಗೆ ಹಾಗೂ ಆಂ–ಎಉಗಂ ಯೋಜನೆಯ ಕುರಿತು ಸಮುದಾಯದವರಿಗೆ ಅರಿವು ಮೂಡಿಸುವುದು ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿರುತ್ತದೆ.

ಕಾರಣ ಅಧಿಕಾರಿಗಳು ಈ ಅಭಿಯಾನವನ್ನು ತಾಲೂಕಾ ಮಟ್ಟದಲ್ಲಿ 196 ಗ್ರಾಮಗಳಲ್ಲಿ ದಿನಾಂಕ:15–06–2025 ರಿಂದ 30–06–2025 ರವರೆಗೆ ಆಯೋಜಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಬೀದರ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ವ್ಯಕ್ತಿ ವಿಕಾಸದೊಂದಿಗೆ ಸಾಮಾಜಿಕ ಪ್ರಜ್ಞೆ ಕೂಡ ಬೆಳೆಯುವುದು



(ವರದಿ. ಡಿ. ಕೆ. ಪ್ರಹ್ಲಾದ)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜೂ 13 ವ್ಯಕ್ತಿ ವಿಕಾಸದೊಂದಿಗೆ ಸಾಮಾಜಿಕ ಪ್ರಜ್ಞೆ ಕೂಡ ಬೆಳೆಯುವುದು ಎಂದು ಕಲಬುರ್ಗಿಯ ಕೃಷಿ ಮಹಾವಿದ್ಯಾಲಯದ ಡಾ. ಶಿವಶರಣಪ್ಪ ಬಿ. ಗೌಡಪ್ಪ ತಿಳಿಸಿದರು. ತಾಲೂಕಿನ ಮಂಠಾಳ ಗ್ರಾಮದಲ್ಲಿ ರಾಯಚೂರು ಕೃಷಿ ವಿಜ್ಞಾನಿಗಳ ವಿಶ್ವ ವಿದ್ಯಾಲಯ ಕಲಬುರ್ಗಿಯ ಕೃಷಿ ವಿದ್ಯಾಲಯ ವತಿಯಿಂದ ರಾಷ್ಟ್ರೀಯ ಸೇವಾ ಯೋಜನೆಯ ಘಟಕ 1 ಮತ್ತು 2 ರ ವಾರ್ಷಿಕ ವಿಶೇಷ ಶಿಬಿರದ 2025 ರ ಅಧ್ಯಕ್ಷತೆ ವಹಿಸಿ ಮಾತನಾಡಿ ಕೃಷಿ ಉತ್ಪನ್ನ ಕುರಿತು ಮಾಹಿತಿ ತರಬೇತಿ ಕೃಷಿ ಮಹಾವಿದ್ಯಾಲಯದಿಂದ ನೀಡಲಾಗುವುದು ಎಂದರು. ಕಲಬುರ್ಗಿಯ ವಾಣಿಜ್ಯ ತೆರಿಗೆ ಸಾಹಯಕರಾದ ಡಾ. ಮಹೇಶ್ ಪಾಟೀಲ ಸಹ ಜೀವನದ ಮೌಲ್ಯಾಧಾರಿತ ನುಡಿಗಳು ತಿಳಿಸಿದರು. ಶಿಬಿರದ ಉದ್ಘಾಟನೆಯನ್ನು ಮಠದ ಪೂಜ್ಯ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳು ನಿರ್ವಹಿಸಿದರು. ಯುವ ಮುಖಂಡರಾದ ಮಹಾದೇವ ಪಾಟೀಲ. ಪ್ರಾಚಾರ್ಯರಾದ ರವೀಂದ್ರ ಶಾಯಪ್ಪ. ಪುಷ್ಪರಾಜ ಹರಕೂಡೆ. ಭೀಮರಾವ ಲೊಡ್ಡೆ. ಸಾವಿತ್ರಿ ಗೌಡಪ್ಪ. ಡಾ. ಎಚ್. ಸಿ. ಸೌಮ್ಯ. ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ಯೋಜನೆ ಅಧಿಕಾರಿ ಡಾ. ರಾಜಶೇಖರ ಬಸನಾಯಕ ಪ್ರಸ್ತಾವಿಕ ಮಾತನಾಡಿದರು. ನಂತರ ಗುಂಪಿನ ವಿಧ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

## ಸಕಾಲದಲ್ಲಿ ಅರ್ಜಿ ವಿಲೇವಾರಿಯಾಗದಿದ್ದರೆ ದಂಡ ಗ್ಯಾರಂಟಿ–ಬಿ.ಫೌಜಿಯಾ ತರನ್ನುಮ್




ಕಲಬುರಗಿ,ಜೂ.13–ಸಾರ್ವಜನಿಕರ ಅರ್ಜಿ ತ್ವರಿತವಾಗಿ ಮತ್ತು ಕಾಲಮಿತಿಯಲ್ಲಿ ವಿಲೇವಾರಿ ಮಾಡಲು "ಸಕಾಲ್" ಯೋಜನೆ ಜಾರಿಗೊಳಿಸಿದ್ದು, ಇಲ್ಲಿಯೂ ಬಾಕಿ ಇಟ್ಟುಕೊಂಡರೆ ಮುಲಾಜಿಲ್ಲದೆ ಸಂಬಂಧಪಟ್ಟ ಅಧಿಕಾರಿ–ಸಿಬ್ಬಂದಿಗಳ ಸಂಬಳದಲ್ಲಿ ಕಡಿತ ಮಾಡಿ ದಂಡ ಪಾವತಿಗೆ ಕ್ರಮ ವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅಧಿಕಾರಿಗಳಿಗೆ ಎಚ್ಚರಿಕೆ ಖಡಕ್ ಸೂಚನೆ ನೀಡಿದರು.

ಬುಧವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಕಾಲ್, ಐ.ಪಿ.ಜಿ.ಆರ್.ಎಸ್, ಸಿ.ಸಿ.ಎಮ್.ಎಸ್., ಸಿ.ಎಂ.ಜನಸ್ಪಂದನ, ಕಲಬುರಗಿ ಕನೆಕ್ಟ್ ಅರ್ಜಿ ವಿಲೇವಾರಿ ಸಂಬಂಧ ಪ್ರಗತಿ ಪರಿಶೀಲನೆ ನಡೆಸಿದ ಅವರು, ಸಾರ್ವಜನಿಕರಿಗೆ ತ್ವರಿತವಾಗಿ ಸೇವೆ ಒದಗಿಸಲು "ಇಂದು ನಾಳೆ ಇನ್ನಿಲ್ಲ, ಹೇಳಿದ ದಿನ ತಪ್ಪೊಲ್ಲ" ಎಂಬ ಘೋಷವಾಕ್ಯದ ಕರ್ನಾಟಕ ಸಕಾಲ್ ಅಧಿನಿಯಮ–2011 ಜಾರಿಗೆ ತಂದಿದ್ದು, ಅಧಿಕಾರಿ–ಸಿಬ್ಬಂದಿಗಳು ಇದರ ಉದ್ದೇಶ ಅರಿತು ಕೆಲಸ ಮಾಡಬೇಕು ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಅವರ ಕನಸಿನ ಯೋಜನೆ ಇದಾಗಿದ್ದು, ಕೂಡಲೆ ಬಾಕಿ ಅರ್ಜಿ ವಿಲೇವಾರಿ ಮಾಡಬೇಕು. ಜಿಲ್ಲೆಯಲ್ಲಿ ಕಲಬುರಗಿ ಮಹಾನಗರ ಪಾಲಿಕೆಯಲ್ಲಿ 98 ಸೇರಿದಂತೆ ಇಂದಿನ ದಿನಕ್ಕೆ ವಿವಿಧ ಇಲಾಖೆಯಲ್ಲಿ ಒಟ್ಟಾರೆ 328 ಅರ್ಜಿ ವಿಲೇವಾರಿಗೆ ಬಾಕಿ ಇದ್ದು, ಸಂಬಂಧಪಟ್ಟ ಅಧಿಕಾರಿಗಳು ತಮ್ಮ ಇಲಾಖಾವಾರು ಲಾಗಿನ್ ನಲ್ಲಿ ಅರ್ಜಿ ವಿಲೇವಾರಿಗೊಳಿಸಿ ಶೂನಕ್ಕೆ ತನ್ನಿ ಎಂದರು.

ಸಕಾಲ್‌ನಲ್ಲಿ ಸಲ್ಲಿಕೆಯಾದ ಅರ್ಜಿಯನ್ನು 30 ದಿನದಲ್ಲಿ ವಿಲೇವಾರಿಗೆ ಸಮಯ ಇದೆ. ಈ ಅವಧಿ ಅರ್ಜಿ ವಿಲೇವಾರಿಗೆ ಸಾಕಾಗುತ್ತಿದೆ. ಕಾಲಮಿತಿಯಲ್ಲಿ ಸೇವೆ ನೀಡಲು ವಿಳಂಬವಾದಲ್ಲಿ ಸಂಬಂಧಪಟ್ಟ ಅಧಿಕಾರಿ–ಸಿಬ್ಬಂದಿಗಳ ವೇತನ ಬಡ್ತಿಗೂ ತಡೆ ಹಿಡಿಯಿರಿ ಎಂದ ಡಿ.ಸಿ. ಅವರು, ಕೆಲವೊಂದು ಇಲಾಖೆಯಲ್ಲಿ ತಾಂತ್ರಿಕ ಸಮಸ್ಯೆ ಕಾರಣ ಅರ್ಜಿ ವಿಲೇವಾರಿಗೆ ಸಮಸ್ಯೆಯಾಗುತ್ತಿರುವುದರಿಂದ ಸಕಾಲ್ ಮಿಷನ್ ನಿರ್ದೇಶಕರಿಗೆ ಪತ್ರ ಬರೆಯಬೇಕು ಎಂದರು.

ಐ.ಪಿ.ಜಿ.ಆರ್.ಎಸ್. ಬಾಕಿ ಅರ್ಜಿ ಶುಕ್ರವಾರದೊಳಗೆ ವಿಲೇವಾರಿಯಾಗದಿದ್ದಲ್ಲಿ, ಸಂಬಂಧಪಟ್ಟವರಿಗೆ ನೋಟಿಸ್ ಜಾರಿಗೊಳಿಸಿ ಎಂದು ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರಿಗೆ ಸೂಚಿಸಿದ ಡಿ.ಸಿ. ಅವರು, ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರ ಕನಸಿನ ಯೋಜನೆ "ಕಲಬುರಗಿ ಕನೆಕ್ಟ್" ನಲ್ಲಿ 95 ಅರ್ಜಿ ವಿಲೇವಾರಿಗೆ ಬಾಕಿ ಇದ್ದು, ಕೂಡಲೆ ವಿಲೇವಾರಿಗೊಳಿಸಿ ಎಂದರು.

ಕೋರ್ಟ್ ಕೇಸ್ ಮಾನಿಟರಿಂಗ್ ಸಿಸ್ಟಮ್ ನಲ್ಲಿ ಜಿಲ್ಲೆಯಾದ್ಯಂತ ವಿವಿಧ ಇಲಾಖೆಗೆ ಸಂಬಂಧಿಸಿದ 1,203 ಪ್ರಕರಣಗಳು ನ್ಯಾಯಲಯದಲ್ಲಿ ಬಾಕಿ ಇದ್ದು, ತ್ವರಿತವಾಗಿ ವಿಲೇವಾರಿಗೆ ಮುಂದಾಗಬೇಕು. ರಿಟ್ ಪಿಟೀಷನ್, ರಿಟ್ ಅಪೀಲ್ ಪ್ರಕರಣಗಳಲ್ಲಿ ಕೋರ್ಟ್ ನಲ್ಲಿ ಕೇಸ್ ದಾಖಲಾಗಿದ್ದ ಮಾಹಿತಿ ದೊರೆತ ಕೂಡಲೆ ಲಿಟಿಗೇಷನ್ ಕಂಡಕ್ಟಿಂಗ್ ಆಫೀಸರ್ ನೇಮಿಸಬೇಕು. ಸರ್ಕಾರಿ ವಕೀಲರನ್ನು ಭೇಟಿಯಾಗಿ ಇಲಾಖೆಯ ವಾದ ಮಂಡಿಸಬೇಕು. ಪ್ರಕರಣ ವಿಲೇವಾರಿ ನಂತರ ಕೋರ್ಟ್ ತೀರ್ಪಿನಂತೆ ಕ್ರಮ ವಹಿಸಲು ಇಲಾಖಾ ಮುಖ್ಯಸ್ಥರಿಗೆ ಮಾಹಿತಿ ನೀಡಬೇಕು ಎಂದರು.

ಸಭೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಎಸ್.ಪಿ. ಅಡ್ಡೂರು ಶ್ರೀನಿವಾಸಲು ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳಿದ್ದರು.

## ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಬೆಳಿಗ್ಗೆ ನಗರದ ತಹಸೀಲ್ದಾರರ ಕಚೇರಿಯಿಂದ ಶಾಸ್ತ್ರಿ ವೃತ್ತ, ಶುಭಾಷ ವೃತ್ತದ ಮಾರ್ಗವಾಗಿ ಸರಕಾರಿ ಪದವಿ ಮಹಾವಿದ್ಯಾಲಯದ ವರೆಗೆ ಹಮ್ಮಿಕೊಂಡಿದ್ದ ಜಾಗೃತಿ ಜಾಥಾಕ್ಕೆ ಚಾಲನೆ ನೀಡಲಾಯಿತು.

ಹಾಗೆಯೇ ನಗರದ ಜನನಿಬೀಡ ಪ್ರದೇಶಗಳಾದ ರೈಲ್ವೆ ನಿಲ್ದಾಣ, ಬಸ್ ನಿಲ್ದಾಣಗಲ್ಲಿ ಬಾಲ ಕಾರ್ಮಿಕ ಪದ್ಧತಿ ವಿರೋಧದ ಕುರಿತು ಜಾಗೃತಿಯನ್ನು ಮೂಡಿಸಲು ಸ್ಟಾಲ್ ಗಳನ್ನು ನಿರ್ಮಿಸಿ ಮತ್ತು ಸಾರ್ವಜನಿಕ ಪ್ರಕಟಣೆಗಳ ಮೂಲಕ ಜಾಗೃತಿ ಮೂಡಿಸಲಾಯಿತು.

ಬಾಲ ಕಾರ್ಮಿಕ ವಿರೋಧದ ಪ್ರಮಾಣ ವಚನವನ್ನು ಶಿಕ್ಷಣ ಇಲಾಖೆಯ ಉಪನಿರ್ದೇಶಕ ಚನ್ನಬಸಪ್ಪ ಮುಧೋಳ್ ಭೋದಿಸಿದರು.

ಪ್ರಾಸ್ತಾವಿಕನುಡಿಯನ್ನು ಕಾರ್ಮಿಕ ಅಧಿಕಾರಿ ಶ್ರೀ ಹರಿ ದೇಶಪಾಂಡೆ ರವರು ನೆರವೇರಿಸಿದರು,

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವೀರಣ್ಣಗೌಡ, ನಿರೂಪಣಾ ಅಧಿಕಾರಿ ಪ್ರೇಮ್ ಮೂರ್ತಿ, ಮಕ್ಕಳ ರಕ್ಷಣಾ ಅಧಿಕಾರಿ ನಿರ್ಮಲಾ ಸುರಪುರ, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ನಿರ್ದೇಶಕ ರಿಯಾಜ್ ಪಟೇಲ್ ವರ್ಕನಳ್ಳಿ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ರಾಜಕುಮಾರ, ಸೇರಿದಂತೆ ಸಂಘ, ಸಂಸ್ಥೆಯ ಮುಖ್ಯಸ್ಥರು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತರು, ಶಾಲಾ ಮತ್ತು ಕಾಲೇಜ್ ವಿದ್ಯಾರ್ಥಿಗಳು, ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಮಕ್ಕಳ ಕ್ಷೇತ್ರದಲ್ಲಿ ಸಾಧನೆಗೈದ ಸಂಘ, ಸಂಸ್ಥೆ, ಹಾಗೂ ವ್ಯಕ್ತಿಗಳನ್ನು ಮತ್ತು ಜಿಲ್ಲಾದ್ಯಂತ ಜಿಲ್ಲಾ ಬಾಲ ಕಾರ್ಮಿಕ ಪದ್ಧತಿ ವಿರೋಧದ ಕುರಿತು ಶಾಲಾ ವಿದ್ಯಾರ್ಥಿಗಳಿಂದ ಆಯೋಜಿಸಿದ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಉಪನ್ಯಾಸವನ್ನು ಗುರುಪ್ರಸಾದ್ ವೈದ್ಯ ನೀಡಿದರು, ಕಾರ್ಯಕ್ರಮವನ್ನು ಮಾಳಪ್ಪ ಯಾದವ್ ನಿರೂಪಿಸಿ ವಂದಿಸಿದರು.

# ಕ್ಯಾನ್ಸರ್ ಶಸ್ತ್ರ ಚಿಕಿತ್ಸೆಗೆ ಮಣ್ಣೂರ ಆಸ್ಪತ್ರೆ ಸಜ್ಜು



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜೂ.13:ಗುರುಬಾಯಿ ಎಂಬ 52 ವರ್ಷದ ಮಹಿಳೆಗೆ ಅಂಡಾಶಯದಕ್ಯಾನ್ಸರ್ ಆಗಿದ್ದು, ಹೊಟ್ಟೆಯಲ್ಲಿ 5 ಕಿಲ ಗಾತ್ರದ 25ಥ22 ಸೆ.ಮಿ ಅಳತೆಯ ಕ್ಯಾನ್ಸರ್ ಗಡ್ಡೆಯನ್ನು ಶಸ್ತ್ರಚಿಕಿತ್ಸೆ ಮಾಡುವ ಮೂಲಕ ಹೊರ ತೆಗೆಯುವ ಮೂಲಕ ಮಹಿಳೆಗೆ ಮರುಜೀವ ನೀಡಿದ್ದಾರೆ.

ಕಲಬುರಗಿ ನಗರದ ರಿಂಗ್ ರಸ್ತೆಯಲ್ಲಿರುವ ಮಣ್ಣೂರ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ನಡೆಸ ಸುದ್ದಿಗೋಷ್ಠಿಯಲ್ಲಿ ಅಸ್ಪತ್ರೆಯ ಮುಖ್ಯಡಾ. ಫಾರುಕ್ ಮಣ್ಣೂರ ಮಾತನಾಡಿ ಗುರುಬಾಯಿ ಎಂಬ ಮಹಿಳೆಗೆ ಕಳೆದ 4 ತಿಂಗಳಿನಿಂದ ದಿನದಿಂದ ದಿನಕ್ಕೆ ಹೊಟ್ಟೆ ಮುಂದಕ್ಕೆ ಬರುತ್ತಿತ್ತು ಹೊಟ್ಟೆಯ ಗಾತ್ರ ಕೂಡ ಹೆಚ್ಚಾಗುತ್ತಿತ್ತು, ಆದರೆ ಅವರು ಅದಕ್ಕೆ ನಿರ್ಲಕ್ಷ್ಯ ಮಾಡಿದರು, 2 ರಿಂದ 3 ದಿನಗಳ ವರೆಗೆ ಹೊಟ್ಟೆಯಲ್ಲಿ ನೊವು ಕಾಣಿಸಿಕೊಂಡಿತ್ತು, ಮಣ್ಣೂರ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಗೆ ಭೇಟಿ ನೀಡಿದಾಗ ಇಲ್ಲಿನ ತಜ್ಞ ವೈದ್ಯರು ಎಲ್ಲಾ ಅಯಾಮಗಳಲ್ಲಿ ತಪಾಸಣೆ ನಡೆಸಿ ಎಮ್.ಆರ್.ಐ ಸ್ಕ್ಯಾನ್ ಮಾಡಿಸಿದಾಗ ಅಂಡಾಂಶಾದಲ್ಲಿ ಕ್ಯಾನ್ಸರ ಆಗಿದ್ದು ಕಂಡುಬರುತ್ತದೆ ಮೊದಲನೆ ಹಂತದ ಕ್ಯಾನ್ಸರ್ ಆಗಿರುವುದು ಖಚಿತವಾಗಿರುತ್ತದೆ, ಆಸ್ಪತ್ರೆಯ ನೂರಿತ ವೈದ್ಯರ ತಂಡ ಶಸ್ತ್ರಚಿಕಿತ್ಸೆಗೆ ನಿರ್ಧರಿಸಿ ಸಮಯ ವ್ಯರ್ಥಮಾಡದೆ ಶಸ್ತ್ರ ಚಿಕಿತ್ಸೆ ಮಾಡುತ್ತಾರೆ, 5 ಕೆ.ಜಿ ತೂಕದ 25ಥ22 ಸೆ.ಮಿ ಅಳತೆ ಗಡ್ಡೆ ಆಗಿರುತ್ತದೆ, ಈ ಶಸ್ತ್ರ ಚಿಕಿತ್ಸೆ 2 ಅಥವಾ 3 ತಿಂಗಳ ವರೆಗೆ ನಿಲರ್ಕ್ಷ ಮಾಡಿದರೆ, ಕ್ಯಾನ್ಸರ್ ಹಂತ 3ನೇ ಹಂತಕ್ಕೆ ತಲುಪುತ್ತಿತ್ತು, ಹಾಗೂ ಜೀವಕ್ಕೆ ಹಾನಿ ಕೂಡ ಆಗುವ ಸಂಭವ ಇತ್ತು, ಎಂದರು.

ಸ್ತ್ರೀರೋಗ ಕ್ಯಾನ್ಸರ್ ತಜ್ಞ ವೈದ್ಯರಾದ ಡಾ. ಸುಮಯ್ಯ ಸನಾ ಅವರು ಮಾತನಾಡಿ ಶಸ್ತ್ರ ಚಿಕಿತ್ಸೆ ಮಾಡುವುದು ತುಂಬಾ ದೊಡ್ಡ ಸವಾಲಾಗಿತ್ತು ಯಾಕೆದರೆ ಹೊಟ್ಟೆಯಲ್ಲಿ ಮೀತಿ ಮೀರಿ ದೊಡ್ಡ ಗಾತ್ರದ ಕ್ಯಾನ್ಸರ್ ಗಡೆಆಗಿದ್ದು, ಶಸ್ತ್ರ ಚಿಕಿತ್ಸೆ ಮಾಡುವಾಗ ಗಡ್ಡೆಗೆ ಅನ್ನನಾಳ, ಮುತ್ರನಾಳ, ರಕ್ತನಾಳ ಸೇರಿದಂತೆ ದೇಹದ ಯಾವುದೆ ಒಂದು

ಅಂಗ ಅದಕ್ಕೆ ಮೆತ್ತಕೊಂಡರೆ ಆ ಭಾಗ ಕೂಡ ಕತ್ತರಿಸುವ ಸಂಭವ ಇರುತ್ತದೆ, ಜೊತೆಗೆ ಇವರ ಹಿಮೊಗ್ಲೋಬಿನ್ ಕೂಡ ಕಡಿಮೆ ಇತ್ತು ಅದಕಾರಣ ರಕ್ತ ಸ್ರಾವಾ ಆಗುವ ಸಂಭವ ಹಿಚ್ಚಿನ ಪ್ರಮಾಣದಲ್ಲಿತ್ತು, ಆದರೆ ನಮ್ಮ ನೂರಿತ ತಂಡ ಎಲ್ಲಾ ಸೂಕ್ಷ್ಮವಾಗಿ ಗಮನಿಸಿ ಸುಮಾರು 4 ಗಂಟೆಗೂ ಅಧಿಕಾ ಶಸ್ತ್ರ ಚಿಕಿತ್ಸೆ ಮಾಡಿ 5 ದಿನದಲ್ಲಿ ಆಸ್ಪತ್ರೆಯಿಂದ ಡಿಸ್ಚಾರ್ಜ ಮಾಡಿದ್ದಾರೆ. ಇತಂಹ ಲಕ್ಷಣಗಳು ಒಂದು ಲಕ್ಷ ಜನಸಂಖ್ಯೆಯಲ್ಲಿ 7 ಜನರಲ್ಲಿ ಕಂಡು ಬರುತ್ತದೆ ಎಂದು ತಿಳಿಸಿದ್ದರು.

ಬಹುತೇಕ ಮಹಿಳೆಯರು ಮಹಿಳೆಯರಿಯಾವುದೆ ಒಂದು ಗಡ್ಡ ಆದರೆ ನಿರ್ಲಕ್ಷ ಮಾಡುತ್ತಾರೆ, ಆದರೆ ಯಾರು ಕೂಡ ನಿರ್ಲಕ್ಷ್ಯ ಮಾಡಬಾರದು ನಿಮ್ಮ ಸಮಿಪದ ಅಸ್ಪತ್ರೆಗೆ ಭೇಟಿ ನೀಡಿ ತಪಾಸಣೆ ಮಾಡಬೇಕು ರೋಗ ಹರಡುವ ಮುನ್ನವೆ ರೋಗಕ್ಕೆ ನಿರ್ಮೂಲನೆ ಮಾಡಬಹುದು.

ಸುದ್ದಿಗೋಷ್ಠಿಯಲ್ಲಿ ಅರವಳಿಕೆ ತಜ್ಞರಾದ ಸತೀಷ ಶರಣಪ್ಪ, ನ್ಯಾ.ಜೋಶಿಸ್ಸ ಡಾ. ಚೀನತ್ ಮೇಡಂ, ಡಾ.ಅಸ್ಮಾಯಿಲ್ ಚಾಂದ, ವಿಕಿ ಪವಾರ್ ಸೇರಿದಂತೆ ಆಸ್ಪತ್ರೆಯ ವೈದ್ಯರು ಉಪಸ್ಥಿತರಿದ್ದರು.

# ಅಹ್ಮದಾಬಾದ ವಿಮಾನ ದುರಂತದಲ್ಲಿ ನೊಂದ ಜೀವಗಳಿಗೆ ಸಂತಾಪ :ಮೊನೇಶ್ ಗುಡ್ಡೆಡಗಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜೂ.13:ಗುಜರಾತಿನ ಅಹ್ಮದಾಬಾದ್ ನಗರದಲ್ಲಿ ಸಂಭವಿಸಿದ ವಿಮಾನ ಅಪಘಾತದಲ್ಲಿ ಪ್ರಯಾಣಿಕರು, ವಿಮಾನ ಸಿಬ್ಬಂದಿ ಸೇರಿದಂತೆ 240ಕ್ಕೂ ಅಧಿಕ ಮಂದಿ ಸಾವಿಗೀಡಾದ ಸುದ್ದಿ ಕೇಳಿ ಅತೀವ ದುಃಖವಾಯಿತು. ಮೃತರ ಆತ್ಮಕ್ಕೆ ಚಿರಶಾಂತಿ ದೊರಕಲಿ, ಅವರ ಕುಟುಂಬವರ್ಗ ಮತ್ತು ಬಂಧುಮಿತ್ರರಿಗೆ ಈ ನೋವನ್ನು ಭರಿಸುವ ಶಕ್ತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಮೊನೇಶ ಗುಡ್ಡೆಡಗಿ ತಿಳಿಸಿದ್ದಾರೆ.

ಈ ದುರ್ಘಟನೆಯಲ್ಲಿ ಗಾಯಗೊಂಡು ಚಿಕಿತ್ಸೆ ಪಡೆಯುತ್ತಿರುವ ವಿದ್ಯಾರ್ಥಿಗಳು ಸೇರಿದಂತೆ ಎಲ್ಲ ಗಾಯಾಳುಗಳು ಆದಷ್ಟು ಶೀಘ್ರ ಗುಣಮುಖರಾಗಲಿ ಎಂದು ಹಾರೈಸುತ್ತೇನೆ.

ತಮ್ಮವರನ್ನು ಕಳೆದುಕೊಂಡ ಜನರ ನೋವು – ಸಂಕಟ ಕಂಡು ಮನಸ್ಸು ಮಮ್ಮಲ ಮರುಗುತ್ತಿದೆ. ಈ ನೋವಿನ ಘಳಿಗೆಯಲ್ಲಿ ಇಡೀ ದೇಶ ಅವರ ಜೊತೆಗಿದೆ.

ಮೃತರ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡುವ ಜೊತೆಗೆ ಉನ್ನತ ಮಟ್ಟದ ತನಿಖೆ ನಡೆಸಿ, ಘಟನೆಗೆ ಕಾರಣಗಳನ್ನು ಪತ್ತೆಮಾಡಿ, ಮತ್ತೆಂದೂ ಇಂತಹ ಅವಘಡಗಳು ಸಂಭವಿಸದಂತೆ ಅಗತ್ಯ ಕ್ರಮ ಕೈಗೊಳ್ಳುವ ಕೆಲಸವನ್ನು ಕೇಂದ್ರ ಸರ್ಕಾರ ಆದ್ಯತೆ ಮೇರೆಗೆ ಮಾಡಬೇಕು ಎಂದರು.

# ಡೇವಿಡ್ ಸಿಮಿಯೋನ್ ಸಾಮಾಜಿಕ ಕಳಕಳಿ ಮಾದರಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 13 : ವಿಧಾನ ಪರಿಷತ್ ಮಾಜಿ ಉಪ ಸಭಾಪತಿ ಡೇವಿಡ್ ಸಿಮಿಯೋನ್ ಅವರ ಸಾಮಾಜಿಕ ಕಳಕಳಿ ಎಲ್ಲರಿಗೂ ಮಾದರಿ ಎಂದು ಜೆ.ಟಿ. ಸೀಮಂಡ್ಸ್ ಕನ್ನಡ ಸಾಹಿತ್ಯ ಸಂಘದ ಸದಸ್ಯ ಜೈಕರ ರತ್ನಪ್ಪ ಹೇಳಿದರು.

ಜೆ.ಟಿ. ಸೀಮಂಡ್ಸ್ ಕನ್ನಡ ಸಾಹಿತ್ಯ ಸಂಘದ ವತಿಯಿಂದ ನಗರದ ಮಂಗಲಪೇಟೆ ವೃತ್ತದ ಸಮೀಪ ಡೇವಿಡ್ ಸಿಮಿಯೋನ್ ಅವರಿಗೆ ಹಮ್ಮಿಕೊಂಡಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ಅವರು ಮಾತನಾಡಿದರು.

ಕೆಳ ವರ್ಗ ಹಾಗೂ ಹಿಂದುಳಿದ ವರ್ಗಗಳ ಬಗ್ಗೆ ಅಪಾರ ಕಾಳಜಿ ಹೊಂದಿದ್ದರು. ಶ್ರೇಷ್ಠ ಚಿಂತಕ, ಮುತ್ಸದ್ದಿ ರಾಜಕಾರಣಿಯಾಗಿದ್ದರು. ವಿಧಾನ ಪರಿಷತ್ ಉಪ ಸಭಾಪತಿಯಾಗಿ ಅವರ ಸಲ್ಲಿಸಿದ ಸೇವೆ ಅಮೋಘವಾದದ್ದು ಎಂದು ಬಣ್ಣಿಸಿದರು.

ಕ್ರೈಸ್ತ ಸಮುದಾಯಕ್ಕೆ ಇನ್ನೂ ಅವರ ನಾಯಕತ್ವ ಹಾಗೂ ಮಾರ್ಗದರ್ಶನದ ಅವಶ್ಯಕತೆ ಇದ್ದಾಗಲೇ ಅವರು ಅಗಲಿರುವುದು ಅತೀವ ದುಃಖ ಉಂಟು ಮಾಡಿದೆ. ಅವರ ನಿಧನದಿಂದ ಕ್ರೈಸ್ತ ಸಮುದಾಯ ಹಾಗೂ ನಾಡಿಗೆ ತುಂಬಲಾರದ ನಷ್ಟವಾಗಿದೆ ಎಂದು ಹೇಳಿದರು. ದೇವರು ಅವರ ಆತ್ಮ ಹಾಗೂ ಕುಟುಂಬ ವರ್ಗಕ್ಕೆ ದುಃಖ ಸಹಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸಿದರು. ಸಂಘದ ಅಧ್ಯಕ್ಷ ಬಿ.ಕೆ. ಸುಂದರರಾಜ, ಪದಾಧಿಕಾರಿಗಳಾದ ಡಾ. ಧನರಾಜ ತುಡಮೆ, ಟಿ.ಎಂ. ಮಚ್ಚೆ, ಸುನೀಲ್ ಮಾಳಗೆ, ಯೇಶಪ್ಪ ಮೇತ್ರೆ, ಶಿರೋಮಣಿ ತಾರೆ, ಶಿರೋಮಣಿ ಡಾಕುಳಗಿ, ಟಿ.ಜೆ. ಹಾದಿಮನಿ, ಶರಣಪ್ಪ ಸಿಂಗಾರೆ, ಟಿ.ಡಿ. ಜಾನ್, ಡೇವಿಡ್ ಸೋಲಪುರ, ಮಾರುತಿರಾವ್ ನ್ಯಾಮತಾಬಾದ್, ರಾಬರ್ಟ್ ಡೇವಿಡ್, ಜೆ. ಸೈಮನ್ ಪಾಸ್ಟರ್, ಶಾಂತಕುಮಾರ ಪಾಸ್ಟರ್, ಬೆಂಜಮಿನ್ ಅಷ್ಟೂರ, ಮಾರುತಿ ಮಾಸ್ಟರ್ ಮತ್ತಿತರರು ಇದ್ದರು.

# ವತ್ಸಲಾ ಎಚ್.ಎಂ. ರೇವಣ್ಣಗೆ ಶ್ರದ್ಧಾಂಜಲಿ



ಬೀದರ. ಜೂ. 13 : ಮಾಜಿ ಸಚಿವರೂ ಹಾಗೂ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಎಚ್.ಎಂ. ರೇವಣ್ಣ ಅವರ ಪತ್ನಿ ವತ್ಸಲಾ ಅವರಿಗೆ ವಿವಿಧ ಸಂಘ– ಸಂಸ್ಥೆಗಳ ವತಿಯಿಂದ ನಗರದಲ್ಲಿ ಶುಕ್ರವಾರ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಶ್ರೀ ಸಾಯಿ ಆದರ್ಶ ಪಬ್ಲಿಕ್ ಶಾಲೆಯಲ್ಲಿ ಮೃತರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು. ಅವರ ಆತ್ಮಕ್ಕೆ ಶಾಂತಿ ಕೋರಿ ಎರಡು ನಿಮಿಷಗಳ ಮೌನ ಆಚರಿಸಲಾಯಿತು. ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಮೃತರಾವ್ ಚಿಮಕೋಡೆ, ಕಲಬುರಗಿ– ಬೀದರ್–ಯಾದಗಿರಿ ಹಾಲು ಒಕ್ಕೂಟದ ಮಾಜಿ ಅಧ್ಯಕ್ಷ, ಹಾಲಿ ನಿರ್ದೇಶಕ ಮಲ್ಲಿಕಾರ್ಜುನ ಬಿರಾದಾರ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಬಾಬುರಾವ್ ಮಲ್ಕಾಪುರೆ, ವಿವಿಧ ಸಂಘ ಸಂಸ್ಥೆಗಳ ಪ್ರಮುಖರಾದ ಸಚಿನ್ ಮಲ್ಕಾಪುರ, ಸಂಜೀವಕುಮಾರ ಅತಿವಾಳೆ, ತುಳಸಿರಾಮ ಉಚ್ಚೆ, ಪುಂಡಲೀಕ ಇಟಕಂಪಳ್ಳಿ, ಕಲ್ಯಾಣರಾವ್ ಅಡಸಾರೆ, ಪ್ರಶಾಂತ ಶರಗಾರ, ಗಣಪತಿ ಕಮತಾಣ, ಬಾಲಾಜಿ ಕೊಳಾರ, ಲಾಲಪ್ಪ ಕೊಳಾರ, ಸಂಜು ಕಮತಾಣ, ಸಂತೋಷಕುಮಾರ ಜೋಳದಾಪಕೆ, ಲೋಕೇಶ ಮೇತ್ರೆ ಮರ್ಜಾಪುರ, ಬಾಬು ಹೊಕ್ರಾಣೆ, ನಾಗರಾಜ, ಮೊಗಲಪ್ಪ, ಅಮೀತ್ ಸೋಲಪುರ, ಕುಶಾಲ್ ಮರಕಲ್, ಕುಮಾರ ನಿಜಾಂಪುರ ಮತ್ತಿತರರು ಇದ್ದರು.

# ಗುರು ನಾನಕ ಶಾಲೆಯಲ್ಲಿ ಪೈಲೆಟ್ ಪೂಜಾಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 13 : ಗುರು ನಾನಕ ಶಾಲೆಯ ಹಳೆ ವಿದ್ಯಾರ್ಥಿ 2015 ರ ಬ್ಯಾಚ್‌ನ ಪೂಜಾ ಸದಾಂಗಿ ಅವರಿಗೆ ಇಂದು ಶುಕ್ರವಾರ ದಿನಾಂಕ 13.06.2025 ರಂದು ಸಂಸ್ಥೆಯ ಉಪಾಧ್ಯಕ್ಷೆ ಡಾ॥ ರೇಷ್ಮಾ ಕೌರ್ ಅವರು ಶುಭ ಹಾರೈಸಿ ಸನ್ಮಾನಿಸಿದರು.

ಅವರು ಮುಂದುವರೆದು ಮಾತನಾಡುತ್ತ ಪೂಜಾ ಸದಾಂಗಿ ಬೀದರ ಜಿಲ್ಲೆಗೆ ಮೊದಲ ಮಹಿಳಾ ಪೈಲೆಟ್ ಆಗಿ ಶಾಲೆ ಹಾಗೂ ಜಿಲ್ಲೆಗೆ ಕೀರ್ತಿ ತಂದಿದ್ದಾರೆ, ಇನ್ನೊಂದೆಯೂ ಹೆಚ್ಚಿನ ಎತ್ತರಕ್ಕೆ ಬೆಳೆಯಿರಿ ಎಂದು ಹೇಳಿದರು. ಪೂಜಾ ಅವರು ನಮ್ಮ ಶಾಲೆಯಲ್ಲಿ ನರ್ಸರಿ ತರಗತಿಯಿಂದ ಹತ್ತನೇ ತರಗತಿಗೆ ಓದಿದ್ದರು. ನಮ್ಮ ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ ನೀಡುತ್ತಿದ್ದೇವೆ. ಶಾಲೆಯಲ್ಲಿ ಕಲಿತ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಐಪಿಎಸ್, ಐಎಎಸ್ ಮತ್ತು ಇತರರೆ ಕ್ಷೇತ್ರದಲ್ಲಿ ಒಳ್ಳೆಯ ಹೆಸರು ಮಾಡುತ್ತಿರುವುದು ಗಮನಾರ್ಹ ಎಂದು ನುಡಿದರು.

ವಿದ್ಯಾರ್ಥಿಗಳು ಯಾವಾಗಲು ಕಷ್ಟಪಟ್ಟು ಓದಬೇಕು, ಎಲ್ಲಾ ರೀತಿಯ ಸವಾಲುಗಳನ್ನು ಸ್ವಿಕರಿಸಿ ಅದಕ್ಕೆ ತಕ್ಕ ಉತ್ತರವನ್ನು ಕಂಡುಹಿಡಿಯಬೇಕು, ಜೀವನದಲ್ಲಿ ಯಾವುದು ಸುಲಭವಾಗಿ ಸಿಗುವುದಿಲ್ಲ. ಪ್ರಮಾಣಿಕ ಮತ್ತು ಕಠಿಣ ಪರಿಶ್ರಮಪಟ್ಟರೆ ಜೀವನ ಸ್ವಾರ್ಥಕವಾಗುತ್ತದೆ ಎಂದು ನುಡಿದರು.

ಈ ಸಂದರ್ಭದಲ್ಲಿ ಪೈಲೆಟ್ ಪೂಜಾ ತಮ್ಮ ಅಭಿಪ್ರಾಯ ಹಂಚಿಕೊಳ್ಳುತ್ತ ಹಳೆ ಶಿಕ್ಷಕರ ವೃಂದದವರನ್ನು ನೆನಪಿಸಿಕೊಳ್ಳುತ್ತ ಶಿಕ್ಷಕರು ಕೊಟ್ಟ ಮಾರ್ಗದರ್ಶನ ಮತ್ತು ಬುನಾದಿಪಾಯ ಚೆನ್ನಾಗಿ ಹಾಕಿಕೊಟ್ಟಿತ್ತು. ಇದರ ಜೊತೆಗೆ ಪೋಷಕರ, ಶಿಕ್ಷಕರ ಹಾಗೂ ತನ್ನ ಕಠಿಣ ಪರಿಶ್ರಮ ಕಾರಣವಾಗಿದೆ. ತಮ್ಮ ಈ ಸಾಧನೆಗೆ ಸನ್ಮಾನಿಸಿ ಗೌರವಿಸುತ್ತಿರುವುದು ನನಗೆ ಮತ್ತಷ್ಟು ಪ್ರೇರಣೆ ನೀಡಿದಂತಾಗಿದೆ. ಈ ಶಾಲೆಯಲ್ಲಿ ಶಿಕ್ಷಕರು ನೀಡುತ್ತಿರುವ ಗುಣಮಟ್ಟದ ಶಿಕ್ಷಣವೆ ಇದಕ್ಕೆ ಸಾಕ್ಷಿಯಾಗಿದೆ. ಯಾವುದರಲ್ಲಿ ನಿಮಗೆ ಆಸಕ್ತಿ ಇರುತ್ತದೆಯೋ ಅದನ್ನು ಆಯ್ಕೆಮಾಡಿಕೊಂಡು ಮುನ್ನಡೆದರೆ ಯಶಸ್ಸು ಖಂಡಿತ ಸಿಗುತ್ತದೆ. ಗಂಡು ಹೆಣ್ಣು ಎಂಬ ಭೇದಭಾವ ಮರೆದು ಈಗ ಎಲ್ಲ ಕ್ಷೇತ್ರಗಳಲ್ಲಿ ಹೆಣ್ಣು ಮಕ್ಕಳು ಮುಂದೆಯಿದ್ದಾರೆ. ನಾನು ಹೆಣ್ಣು ಮಗಳು ಎಂಬ ಕಾರಣದಿಂದ ಏನೂ ಆಗಲ್ಲ ಎಂಬ ಭಾವನೆ ದೂರವಾಗಿಸಿ ಗುರಿ ಇಟ್ಟುಕೊಂಡು ಮುನ್ನಡೆದರೆ ಏನೂ ಬೇಕಾದರೂ ಸಾಧನೆ ಮಾಡಬಹುದು ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

# ಜುಲೈ.12 ರಂದು ಜಿಲ್ಲೆಯಲ್ಲಿ ಬೃಹತ್ ರಾಷ್ಟ್ರೀಯ ಲೋಕ ಆದಾಲತ್-ನ್ಯಾ.ಪ್ರಕಾಶ ಬನಸೋಡೆ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂ.13 : ಗೌರವಾನ್ವಿತ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಜುಲೈ.12 ರಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬೀದರ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಬೃಹತ್ ಲೋಕ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಬನಸೋಡೆ ಅವರು ತಿಳಿಸಿದರು.

ಅವರು ಶುಕ್ರವಾರದಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಭಾಂಗಣದಲ್ಲಿ ಜುಲೈ.12 ರಂದು ನಡೆಯುವ ಬೃಹತ್ ಲೋಕ ಅದಾಲತ್‌ನ ಪೂರ್ವಸಿದ್ಧತೆ ಕುರಿತು ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಪ್ರಸ್ತುತ ಚಾಲ್ತಿಯಲ್ಲಿರುವ ಆಸ್ತಿಪಾಲು ವಿಭಾಗ ಜೀವನಾಂಶ, ಚೆಕ್ ಬೌನ್ಸ, ವಿದ್ಯುತ್ ಪ್ರಕರಣಗಳು ಕಂದಾಯ ಅಪರಾಧಿಕ ಪ್ರಕರಣಗಳಲ್ಲಿ ರಾಜಿ ಮಾಡಿಕೊಳ್ಳುವಂತಹ ಪ್ರಕರಣಗಳು, ಕಾರ್ಮಿಕರ



ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು, ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜೀಸಂಧಾನದ ಮೂಲಕ ಇತ್ಯರ್ಥ ಮಾಡಲು ಅವಕಾಶ ಇರುತ್ತದೆ ಎಂದರು.

ಈ ಹಿಂದೆ ದಿನಾಂಕ 08.03.2025 ರಂದು ನಡೆದ ರಾಷ್ಟ್ರೀಯ ಲೋಕ ಅದಾಲತನಲ್ಲಿ ಜಿಲ್ಲೆಯಾದ್ಯಾಂತ ಒಟ್ಟು 52,812 ಪ್ರಕರಣಗಳನ್ನು ಲೋಕ ಆದಲಾತನಲ್ಲಿ ಇತ್ಯರ್ಥಗೊಳಿಸಲಾಗಿದ್ದು ಇದರಲ್ಲಿ 10.044 ನ್ಯಾಯಾಲಯದಲ್ಲಿನ ಪೆಂಡಿಂಗ್ ಪ್ರಕರಣಗಳು, 42.768 ವ್ಯಾಜ್ಯಪೂರ್ವ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ.

ಈಬಾರಿ ಲೋಕ ಅದಾಲತನಲ್ಲಿ ನ್ಯಾಯಾಲಯದಲ್ಲಿ ಬಾಕಿ ಪೇಂಡಿಂಗ ಇರುವ ಪ್ರಕರಣಗಳನ್ನು ಹೆಚ್ಚು ಹೆಚ್ಚು ಇತ್ಯಾರ್ಥಗೊಳಿಸಲು ಯೋಜನೆರೂಪಿಸಲಾಗಿದ್ದು, ಜಿಲ್ಲೆಯಲ್ಲಿ ಒಟ್ಟು 29,122 ಪ್ರಕರಣಗಳು ಪೆಂಡಿಂಗ್ ಇದ್ದು ಹೆಚ್ಚು ಪ್ರಕರಣಗಳನ್ನು ರಾಜಿ ಮಾಡುವ ಗುರಿ ಹೊಂದಿದ್ದೇವೆ ಹಾಗೂ ಎಲ್ಲಾ ಪೂರ್ವತಯಾರಿ ಮಾಡಿಕೊಂಡಿದ್ದೇವೆ. ಪ್ರಕರಣಳಲ್ಲಿ ರಾಜಿ ಮಾಡಿಕೊಳ್ಳುವುದರಿಂದ ಕಕ್ಷಿದಾರನಿಗೆ ನ್ಯಾಯಲಯ ಶುಲ್ಕ ವಾಪಸ್ ಸಿಗಲಿದೆ ಮೇಲ್ಮನವಿ ಮಾಡಲು ಅವಕಾಶ ಇರುವುದಿಲ್ಲ ಇಬ್ಬರೂ ಪಕ್ಷಗಾರರು ತಮ್ಮ ದ್ವೇಷ ಮರೆತು ಸುಮಧುರ ಬಾಂಧವ್ಯ ಹೊಂದುವ ಅವಕಾಶ ಇರುತ್ತದೆ ಹಾಗೆಯಾವುದೇ ಖರ್ಚು ವೆಚ್ಚ ಇಲ್ಲದೆ ಶೀಘ್ರವಾಗಿ ಪ್ರಕರಣಗಳು ಇತ್ಯರ್ಥವಾಗುತ್ತವೆ ಎಂದು ಅವರು ತಿಳಿಸಿದರು.

# ಧೈರ್ಯ ಮತ್ತು ದಿಟ್ಟತನದಿಂದ ಬಾಲ್ಯ ವಿವಾಹದಿಂದ ತಪ್ಪಿಸಿಕೊಂಡ ವಿದ್ಯಾರ್ಥಿನಿ..!



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 13 : ಇಷ್ಟವಿಲ್ಲದಿದ್ದರೂ ಯುವಕನೊಂದಿಗೆ ನನ್ನ ವಿವಾಹವನ್ನು ಕುಟುಂಬದವರು ನಿಶ್ಚಯ ಮಾಡಿದ್ದಾರೆ. ಇದರಿಂದ ನನ್ನನ್ನು ಪಾರು ಮಾಡಬೇಕು ಎಂದು 17 ವರ್ಷ ಬಾಲಕಿಯೊಬ್ಬಳು ಮಕ್ಕಳ ಸಹಾಯವಾಣಿ 1098ಕ್ಕೆ ಕರೆ ಮಾಡಿ ಮದುವೆ ನಿಲ್ಲಿಸಲು ಮನವಿ ಮಾಡಿರುವ ಘಟನೆ ಬೀದರ್‌ನಲ್ಲಿ ಬೆಳಕಿಗೆ ಬಂದಿದೆ.

ಪಿಯುಸಿ ಮೊದಲ ವರ್ಷದಲ್ಲಿ ಓದುತ್ತಿದ್ದೇನೆ. ಇಷ್ಟವಿಲ್ಲದಿದ್ದರೂ ಜೂನ್ 15ರಂದು ಹುಮನಾಬಾದಿನ ಯುವಕನೊಂದಿಗೆ ನನ್ನ ವಿವಾಹವನ್ನು ಕುಟುಂಬದವರು ನಿಶ್ಚಯ ಮಾಡಿದ್ದಾರೆ. ಇದರಿಂದ ನನ್ನನ್ನು ಪಾರು ಮಾಡಬೇಕು' ಎಂದು ಮನವಿ ಮಾಡಿದ್ದು,

ತಕ್ಷಣ ಬಾಲಕಿ ಮನೆಗೆ ಬೇಟಿ ನೀಡಿದ ಅಧಿಕಾರಿಗಳ ತಂಡ ಪೋಷಕರಿಗೆ ಮನವರಿಕೆ ಮಾಡಿ ಬಾಲಕಿ ಸಮ್ಮುಖದಲ್ಲಿ ಸಂಭಂದಿಕರು ಹಾಗೂ ಮದುವೆ ನಿಶ್ಚಯವಾದ ಯವಕನ ಪೋಷಕರನ್ನು ಕರೆಸಿಕೊಂಡು ಎಲ್ಲರ ಸಮ್ಮುಖದಲ್ಲಿ ಮುಚ್ಚಳಿಕ ಬರೆಸಿಕೊಂಡು ಎಚ್ಚರಿಕೆ ನೀಡಿದ್ದಾರೆ.

ಹುಮನಾಬಾದ್ ತಹಶೀಲ್ದಾರ್ ಅಂಜುಂ ತಬಸುಮ್, ಸಿಡಿಪಿಒ, ಮಹಿಳಾ ಪಿಎಸ್ಐ ಸೇರಿದಂತೆ ಇತರೆ ಅಧಿಕಾರಿಗಳೊಂದಿಗೆ ತಹಶೀಲ್ದಾರ್ ಬಾಲಕಿಯ ಮನೆಗೆ ಭೇಟಿ ನೀಡಿದ್ದು, ಅಧಿಕಾರಿಗಳ ಕಾರ್ಯಕ್ಕೆ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯರಾದ ಶಶಿಧರ ಕೊಸಂಭೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಸರ್ಕಾರಿ ಗೌರವಗಳೊಂದಿಗೆ ಯೋಧನ ಅಂತ್ಯಕ್ರಿಯೆ







ಮಲ್ಲಮ್ಮ ನುಡಿ ವಾರ್ತೆ

ಜುಮಾಲಾಪುರ್ ತಾಂಡಾ : ಬಾಗಲಕೋಟ ' ಕೇರೋಡಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟ ವೆಂಕಟೇಶ್ .ಎಂ. ರಾಠೋಡ

ಅಂತ್ಯಕ್ರಿಯೆ ಸಕಲ ಸರ್ಕಾರಿ ಗೌರವಗಳೊಂದಿಗೆ ಸ್ವಗ್ರಾಮ ಜುಮಾಲಾಪುರ್ ತಾಂಡದಲ್ಲಿ ಶುಕ್ರವಾರ ನೆರವೇರಿತು.

ಬಾಗಲಕೋಟೆ ಕೇರೋಡಿ ಆಸ್ಪತ್ರೆಯಲ್ಲಿ ಬಿಳಿರಕ್ತ ಕಣಗಳು ಕಡಿಮೆ ಆಗಿರೋದರಿನ ಯೋಧ ಮೃತಪಟ್ಟಿದ್ದರು.

ಮೃತರ ಪಾರ್ಥಿವ ಶರೀರವು ಬಾಗಲಕೋಟ ಆಸ್ಪತ್ರೆಯಿಂದ ಗುರುವಾರ ಮಧ್ಯರಾತ್ರಿ ಬಾಗಲಕೋಟದಿಂದ ಬಂದು ಶುಕ್ರವಾರ ಬೆಳಿಗ್ಗೆ ಜುಮಾಲಾಪುರ್ ತಾಂಡಕ್ಕೆ ತರಲಾಯಿತು. ಅಲ್ಲಿಂದ ರಸ್ತೆ ಮೂಲಕ ಆಂಬುಲೆನ್ಸ್ ವಾಹನದ ಮೂಲಕ ತರಲಾಯಿತು.

ನಾರಾಯಣಪುರದಿಂದ ಸುಮಾರ 15 ಕಿ.ಮೀ ದೂರವಿರುವ ಯೋಧನ ಸ್ವಗ್ರಾಮ.ಜುಮಾಲಾಪುರ್ ತಾಂಡವರೆಗೆ ಪಾರ್ಥಿವ ಶರೀರದ ಮೆರವಣಿಗೆ ಮಾಡಲಾಯಿತು.

ಮೆರವಣಿಗೆ ಉದ್ದಕ್ಕೂ ವೆಂಕಟೇಶ ಅಮರ ರಹೇ, ಬೋಲೊ ಭಾರತ್ ಮಾತಾಕಿ ಜೈ' ಘೋಷಣೆಗಳು ಮೊಳಗಿದವು. ಮೆರವಣಿಗೆಯಲ್ಲಿ ಮಾಜಿ ಸೈನಿಕರು, ಯುವಕರು, ಗ್ರಾಮಸ್ಥರು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

ಮೃತ ಯೋಧನ ಪಾರ್ಥಿವ ಶರೀರ ಕಂಡು ಕುಟುಂಬಸ್ಥರು ಆಕ್ರಂದನ ಮುಗಿಲು ಮುಟ್ಟಿತ್ತು. ಯೋಧನ ಅಗಲಿಕೆಗೆ ಗ್ರಾಮಸ್ಥರು ಕಂಬಣಿ ಮಿಡಿದರು.

ಸ್ವಗ್ರಾಮದ ಹೊರವಲಯದಲ್ಲಿ ಸಾರ್ವಜನಿಕರಿಗೆ ಯೋಧನ ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು.

ಹುಣಸಗಿ ತಶೀಲದಾರರು ಹುಸೇನಾ.ಎ. ಸರ್ಕಾವಾಸ್, ಕೊಡೇಕಲ್ ಉಪ ತಶೀಲದಾರರು ಕಾಲಪ್ಪ ಜಂಜಿಗಡ್ಡಿ. ಗ್ರಾಮ ಆಡಳಿತ ಅಧಿಕಾರಿ ಪರಶುರಾಮ, ಹುಣಸಗಿ ಪೊಲೀಸ್ ಸಿ.ಪಿ.ಐ ರವಿಕುಮಾರ್ , ಕೊಡೇಕಲ್ ಪಿ.ಎಸ್.ಐ ಅಯ್ಯಣ್ಣ ನವರು ಪೊಲೀಸ್ ಬಂದೋಬಸ್ತಾ ನೀಡಿದರು ಜೊತೆಯಲ್ಲಿ ಮೃತ ಯೋಧನಿಗೆ ಅಂತಿಮ ನಮನ ಸಲ್ಲಿಸಿದರು. ಸಕಲ ಸರ್ಕಾರಿ ಗೌರವದೊಂದಿಗೆ ಅಂತ್ಯಸಂಸ್ಕಾರ ಮಾಡಲಾಯಿತು.

ಸಕಲ ಸರ್ಕಾರಿ ಗೌರವಗಳೊಂದಿಗೆ ಮೃತ ಯೋಧ ವೆಂಕಟೇಶ ಎಂ ರಾಠೋಡ ಅವರ ಅಂತ್ಯಕ್ರಿಯೆ ನೆರವೇರಿತು.

# ಗುರುಮಿಠಕಲ್ ಸರ್ಕಾರಿ ಆಸ್ಪತ್ರೆಯನ್ನು ಮೇಲದರ್ಜೆಗೆರಿಸಲು ಮನವಿ



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್: ದಿ.13. ಇಂದು ಯಾದಗಿರಿಯಲ್ಲಿ ಜರುಗಲಿರುವ ಆರೋಗ್ಯ ಆವಿಷ್ಕಾರ ಕಾರ್ಯಕ್ರಮದ ಪೂರ್ವ ಸಿದ್ಧತೆ ಪ್ರಯುಕ್ತ ಇಂದು ಹೈದರಾಬಾದ್ ವಿಮಾನ ನಿಲ್ದಾಣದಿಂದ ಯಾದಗಿರಿ ಹೋಗುವಾಗ ಮಾರ್ಗಮಧ್ಯದಲ್ಲಿ ಗುರುಮಠಕಲ್ ಪ್ರವಾಸಿ ಮಂದಿರಕ್ಕೆ ದಿನೇಶ್ ಗುಂಡೂರಾವ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಭೇಟಿ ನೀಡಿದರು.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ಮಂಡಳಿಯ 'ಆರೋಗ್ಯ ಆವಿಷ್ಕಾರ' ಯೋಜನೆಯಡಿ ಆರೋಗ್ಯ ಇಲಾಖೆಯ ವಿವಿಧ ಕಾಮಗಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಸಚಿವರು ಸುಮಾರು 440.68 ಕೋಟಿ ವೆಚ್ಚದ ಯೋಜನೆಗೆ ಚಾಲನೆ ನೀಡಲಿದ್ದು ಈ ಕಾರ್ಯಕ್ರಮದ

ಪೂರ್ವ ಸಿದ್ಧತೆಗಾಗಿ ಹೋಗುವ ಸಂದರ್ಭದಲ್ಲಿ ಸ್ಥಳಿಯ ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಭೇಟಿಯಾದರು

ಗುರುಮಠಕಲ್ ಆರೋಗ್ಯ ಸಮುದಾಯದ ವೈದ್ಯಾಧಿಕಾರಿಗಳು ಹಾಗೂ ಜಿಲ್ಲಾ ಮತ್ತು ತಾಲೂಕ ವೈದ್ಯಾಧಿಕಾರಿಗಳು ಹೊಸ ತಾಲೂಕು ಆಗಿರುವ ಗುರುಮಠಕಲ್ ಪಟ್ಟಣದ ಆಸ್ಪತ್ರೆಯನ್ನು ತಾಲೂಕ ಆಸ್ಪತ್ರೆ ಎಂದು ಘೋಷಣೆ ಮಾಡಿ ಹೆಚ್ಚುವರಿಯಾಗಿ ವೈದ್ಯರನ್ನು ಮತ್ತು ನೂರು ಹಾಸಿಗೆಯುಳ್ಳ ಆಸ್ಪತ್ರೆಯಾಗಿ ಪರಿವರ್ತಿಸಲು ಮನವಿ ನೀಡಿದರು.

ಕಾಂಗ್ರೆಸ್ ಪಕ್ಷದ ವಿವಿಧ ಮುಖಂಡರು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ಸಾರ್ವಜನಿಕರು ಭೇಟಿಯಾದರು.

# ಎತ್ತುಗಳು ರೈತರ ಜೀವನಾಡಿ:ರುದ್ರಮಣಿ ಖ್ಯಾಲಪ್



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಎತ್ತುಗಳು ರೈತರ ಜೀವನಾಡಿಯಾಗಿವೆ ಎಂದು ಯುವ ಮುಖಂಡ

ರುದ್ರಮಣಿ ಖ್ಯಾಲಪ್ ತಿಳಿಸಿದರು. ತಾಲ್ಲೂಕಿನ ಬೋರಂಪಳ್ಳಿ ಗ್ರಾಮದಲ್ಲಿ ಕಾರ ಹುಣ್ಣಿಮೆ ನಿಮಿತ್ಯ ಇತ್ತುಗಳ ಮೆರವಣಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಕಾರ ಹುಣ್ಣಿಮೆ ದಿನದಂದು ಎತ್ತುಗಳಿಗೆ ಸಿಂಗಾರ ಮಾಡಿ ಹಬ್ಬ ಆಚರಿಸಿ ರೈತರು ಸಂಭ್ರಮದಿಂದ ಇತ್ತುಗಳ ಮೆರವಣಿಗೆ ಮಾಡುತ್ತಾರೆ. ರೈತರು ತಮ್ಮ ಎತ್ತು,ಹಸುಗಳಿಗೆ ಹಳ್ಳದಲ್ಲಿ ಮಾಡಿಸಿ ವಿವಿಧ ಬಗೆಯ ಅಲಂಕಾರ ಮಾಡುತ್ತಾರೆ. ರೈತರ ಜೀವನಾಡಿಯಾಗಿರುವ ಎತ್ತುಗಳ ತಲೆಗೆ ಹೂವಿನ ಗೊಂಡೆ,ಕೊರಳಿಗೆ ಗೆಜ್ಜೆ,ಟೊಂಕಕ್ಕೆ ಕಪ್ಪುದಾರ,ಕೋಡಿಗೆ ಬಣ್ಣ,ದೇಹಕ್ಕೆ ಕೆಂಪು, ಹಳದಿ ಬಣ್ಣ ಹಚ್ಚಿ ಶೃಂಗಾರಗೊಳಿಸುತ್ತಾರೆ ಎಂದು ಹೇಳಿದರು.

ಬಳಿಕ ಗ್ರಾಮದ ರಸ್ತೆಗಳಲ್ಲಿ ಇತ್ತುಗಳ ಮೆರವಣಿಗೆ ಮಾಡಿ ರೈತರು,ಊರಿನ ಮುಖಂಡರು ಸಂಭ್ರಮಿಸಿದರು.ಸಂಜೆ ಸಮಯದಲ್ಲಿ ರೈತರು ತಮ್ಮ ನೆಚ್ಚಿನ ಎತ್ತುಗಳಿಂದ ಕರಿ ಹರಿಯುವ ಸಂದರ್ಭದಲ್ಲಿ ಯುವಕರು ಕುಣಿದು ಕುಪ್ಪಳಿಸಿದರು. ಈ ಸಂದರ್ಭದಲ್ಲಿ ಶಿವಕುಮಾರ ಅಣ್ಣಾರಾವ, ಖಾಲಪ್ಪ,ಸುರೇಶ ವೀರಣ್ಣ ದೇವಣಿ, ಶಿವಲಿಂಗಪ್ಪ ಎರಬಾಗ,ಶರಣಪ್ಪ ಜನವಾಡ, ವೀರೇಶ ಜನವಾಡ,ಅಪ್ಪಾರಾವ ಬಿರಾದಾರ, ಮಲ್ಲಿಕಾರ್ಜುನ ಬಿರಾದಾರ,ವೀರೇಶ ಚೆಟ್ಟಿ, ಬಸವರಾಜ ಹಾರಕೂಡ,ಶರಣಪ್ಪ ಖ್ಯಾಲಪ್,ಮಲ್ಲಿಕಾರ್ಜುನ ಪ್ರಕಾಶ ಖ್ಯಾಲಪ್,ಪ್ರದೀಪ ಬಿರಾದಾರ ಸೇರಿ ರೈತರು,ಯುವಕು ಗಣ್ಯರು ಭಾಗಿಯಾಗಿದ್ದರು.

# ಸೋಂಪುರ ಗ್ರಾಮದಲ್ಲಿ ನೂತನ ಪ್ರೌಢಶಾಲೆಗೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಕುಕನೂರ ತಾಲೂಕಿನ ಸೋಂಪುರ ಗ್ರಾಮದಲ್ಲಿ ಉನ್ನತಿಕರಿಸಿದ ನೂತನ ಪ್ರೌಢಶಾಲೆಗೆ ಶ್ರೀ ಶಾರದಾಂಬೆಯ ಭಾವಚಿತ್ರಕ್ಕೆ ಪೂಜೆ ಮಾಡುವುದರ ಮೂಲಕ ಶಾಲಾ ಸದರಣ ಸಮಿತಿ ಅಧ್ಯಕ್ಷ ಶರಣಪ್ಪ ಗಟ್ಟಿರೆಡ್ಡಿಹಾಳ ಚಾಲನೆ ನೀಡಿದರು.

ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಗುಲ್ಬರ್ಗ ವಿಧಾನಸಭಾ ಕ್ಷೇತ್ರಕ್ಕೆ ನೂತನವಾಗಿ ನಾಲ್ಕು ಪ್ರೌಢಶಾಲೆಗಳು ಮಂಜೂರಾಗಿದ್ದು ಅದರಲ್ಲಿ ಸೋಂಪುರ ಗ್ರಾಮದ ಉನ್ನತಿಕರಿಸಿದ ಸರ್ಕಾರಿ ಪ್ರೌಢಶಾಲೆಗೆ ಶುಕ್ರವಾರ ಚಾಲನೆ ನೀಡಲಾಯಿತು. ಪ್ರಾರಂಭಿಕ ಹಂತವಾಗಿ ಎಂಟನೇ ತರಗತಿ ವಿದ್ಯಾರ್ಥಿಗಳಿಗೆ ನೋಂದಣಿ ಮಾಡಿಕೊಂಡು ಪ್ರಸಕ್ತ ಸಾಲಿನಲ್ಲಿ ಎಂಟನೇ ತರಗತಿ ಪ್ರಾರಂಭಗೊಳಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಮದ ಪಂಚಾಯತ್ ಸದಸ್ಯ ಜಮೀರ್ ಮಂಗಳೂರು ಮಾತನಾಡುತ್ತ ಗ್ರಾಮದ ಮಕ್ಕಳು ಉತ್ತಮ ಗುಣಮಟ್ಟದ ಪ್ರೌಢಶಾಲಾ ವಿದ್ಯಾಭ್ಯಾಸಕ್ಕೆ ಬೇರೆ ಹೋಗಬಾರದು ಎಂಬ ಉದ್ದೇಶದಿಂದ ತಾಲೂಕಿನಲ್ಲಿ ಶಾಸಕರು ನೂತನವಾಗಿ ನಾಲ್ಕು ಪ್ರೌಢಶಾಲೆಗಳನ್ನು ಮಂಜೂರು ಮಾಡಿದ್ದು ನಮ್ಮ ಗ್ರಾಮದಲ್ಲೂ ಸಹ ಉನ್ನತೀಕರಿಸಿದ ಪ್ರೌಢಶಾಲೆಗೆ ಅನುಮೋದನೆ ದೊರೆತಿದ್ದು ಗ್ರಾಮದ ಪ್ರಮುಖರಿಂದ ನೂತನ ಪ್ರೌಢಶಾಲೆಗೆ ಚಾಲನೆ ನೀಡಲಾಗಿದ್ದು ಗ್ರಾಮದ ವಿದ್ಯಾರ್ಥಿಗಳು ಇದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಪ್ರಭಾರಿ ಮುಖ್ಯೋಪಾಧ್ಯಾಯ ಹನುಮಂತಪ್ಪ ಜಂತ್ಲಿ, ಗ್ರಾಮದ ನಿವೃತ್ತ ಶಿಕ್ಷಕರಾದ ಆಯ್ ಕೆ ಶಾಂತಗೆರಿ ಭಾಸ್ಕರ್ ಪತ್ತಾರ್,ಗ್ರಾಮದ ಮುಖಂಡರಾದ ಹೋಳಿಯಪ್ಪ ಹಲ್ಲಿಕೇರ್,ಯಲ್ಲರದ್ದೆಪ್ಪ ಹಲ್ಯಾಳ್, ಹನುಮಪ್ಪ ಹರಿಜನ, ಶ್ರೀಶೈಲ ಕುರಿ, ಜಗದೀಶ್ ತೊಂದಿಗಳ, ಲಕ್ಷ್ಮಣ್ ನಾಯ್ಕರ್ ಹಾಜರಿದ್ದರು

# ಶರಣರ ಆದರ್ಶ ಅಳವಡಿಸಿಕೊಳ್ಳಲು ಸಲಹೆ


ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಭಾರತದ ಪರಂಪರೆಯಲ್ಲಿ ಸಂತರ ಶರಣರ ಹಾಗೂ ಮಹಾತ್ಮರ ಜೀವನ ಸಕಲರಿಗೂ ಆದರ್ಶವಾಗಿದೆ ಅವರು ತೋರಿದ ಮಾರ್ಗದಲ್ಲಿಯೇ ಬದುಕಿನ ಸಾರ್ಥಕತೆ ಅಡಗಿದೆ ಎಂದು ನಾಡಿನ ಖ್ಯಾತ ಪ್ರವಚನಕಾರರಾದ ಹಿಕ್ಕನಗುತ್ತಿ ಲಿಂಗಾಯತ ಮಹಾಮಠದ ಪೂಜ್ಯಶ್ರೀ ಪ್ರಭುಲಿಂಗ ಶರಣರು ಹೇಳಿದರು. ಪಟ್ಟಣದ ರಾಜವಾಡೆ ಆವರಣದಲ್ಲಿ ವೀರರಾಣಿ ಕಿತ್ತೂರು ಚೆನ್ನಮ್ಮ ಪುತ್ಥಳಿ ನಿರ್ಮಾಣ ಸಮಿತಿ ವತಿಯಿಂದ ಪುತ್ಥಳಿ ಅನಾವರಣ ದ್ವಿತೀಯ ವಾರ್ಷಿಕೋತ್ಸವದ ಅಂಗವಾಗಿ ಹಮ್ಮಿಕೊಂಡ "ಚೆನ್ನಮ್ಮಾಜಿ ಜೀವನ ಚರಿತ್ರೆ" ಮಹಾ ಪ್ರವಚನ ಕಾರ್ಯಕ್ರಮಕ್ಕೆ ಗುರುವಾರ ಚಾಲನೆ ನೀಡಿ ಅವರು ಆಶೀರ್ವಚನ ನೀಡಿದರು. ಕಿತ್ತೂರು ಚೆನ್ನಮ್ಮ ಕೇವಲ ವೀರ, ಶೂರ, ಧೀರ ಮಹಿಳೆ ಮಾತ್ರ ಆಗಿರಲಿಲ್ಲ ಅವಳು ಭಕ್ತಿವಂತೆ, ನ್ಯಾಯವಂತೆ, ಮಹಾ ತ್ಯಾಗಮಯಿ ಆಗಿದ್ದು ಬಡವರ ಕಣ್ಣೀರು ಒರೆಯಿಸಿ ರಾಜ್ಯಕ್ಕಾಗಿ ತನ್ನ ಪ್ರಾಣವನ್ನೇ ನೀಡಿದಳು. ಅವಳ ಇಡೀ ಜೀವನವನ್ನು ತಿಳಿದುಕೊಳ್ಳುವುದು ಅಗತ್ಯವಾಗಿದೆ ಆದ್ದರಿಂದ ಅವಳ ಜೀವನ ಚರಿತ್ರೆಯನ್ನು ಸಮಗ್ರವಾಗಿ ತಿಳಿಸಿಕೊಡಲು ಇಲ್ಲಿ ಇಂದಿನಿಂದ ಜೂನ್ 22 ರವರೆಗೆ 10 ದಿನಗಳ ಕಾಲ ಪ್ರತಿ ದಿನ ಸಂಜೆ 7ರಿಂದ 9ರ ವರೆಗೆ ಪ್ರವಚನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಇದರ ಸದುಪಯೋಗ ಮಾಡಿಕೊಳ್ಳಿ ಎಂದರು.

ಕಾರ್ಯಕ್ರಮದ ಆರಂಭದಲ್ಲಿ ಚೆನ್ನಮ್ಮಾಜಿ ಜೀವನ ಚರಿತ್ರೆ ಗ್ರಂಥ ಹಾಗೂ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಲಾಯಿತು. ಪ್ರವಚನ ಉದ್ಘಾಟನಾ ಸಮಾರಂಭದಲ್ಲಿ ವೀರರಾಣಿ ಶ್ರೀ ಕಿತ್ತೂರು ಚೆನ್ನಮ್ಮನವರ ಪುತ್ಥಳಿ ನಿರ್ಮಾಣ ಸೇವಾ ಸಮಿತಿ ಗೌರವ ಅಧ್ಯಕ್ಷ ಚಂದ್ರಶೇಖರ ಪಾಟೀಲ,ಅಧ್ಯಕ್ಷೆ ನೀಲಮ್ಮ ಎಸ್.ಪಾಟೀಲ, ಉಪಾಧ್ಯಕ್ಷ ಕಲ್ಲಪ್ಪ ಪಾಟೀಲ, ಪ್ರಧಾನ ಕಾರ್ಯದರ್ಶಿ ಮಲ್ಲನಗೌಡ ಕೋಟಿ, ಕಾರ್ಯದರ್ಶಿ ಭೀಮನಗೌಡ ಪಾಟೀಲ, ಗಣ್ಯರಾದ ಚಂದ್ರಶೇಖರ ಮಠಪತಿ, ಬಸವರಾಜ ನಾಗನೂರ, ಸಿದ್ದು ಸಾಲೋಂಕೆ, ದಿವೇಂದ್ರ ಗೊಟಗುಣಕಿ, ಮಲ್ಲು ಬಿರಾದಾರ, ಬಸ್ಸು ಗುಂಡುಕನಾಳ, ನೇತಾಜಿ ಪವಾರ,ಸಿದ್ದಣ್ಣ ಗುಗ್ರಿ, ಲಕ್ಷ್ಮೀಬಾಯಿ ಚಳೇಕರ್, ಪಾರ್ವತಿ ಮಠಪತಿ, ಸಮಿತಿಯ ಪದಾಧಿಕಾರಿಗಳು ಸಮಾಜದ ಗಣ್ಯರು ಹಿರಿಯರು ಹಾಗೂ ಮಹಿಳೆಯರು ಇದ್ದರು. ಶ್ರೀ ಖಾಸ್ಗತೇಶ್ವರ ಸಂಗೀತ ಶಾಲೆಯ ಮುಖ್ಯಸ್ಥ ದಿಲೀಪಸಿಂಗ್ ಹಜೇರಿ ಹಾಗೂ ಸಂಗಡಿಗರು ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು.

ವೀರರಾಣಿ ಕಿತ್ತೂರ ಚೆನ್ನಮ್ಮಳ ಪುತ್ಥಳಿ ಅನಾವರಣದ ದ್ವಿತೀಯ ವಾರ್ಷಿಕೋತ್ಸವದ ಅಂಗವಾಗಿ ಜೂನ್ 12ರಿಂದ 22ರ ವರೆಗೆ ನಡೆಯಲಿರುವ "ಚೆನ್ನಮ್ಮಳ ಜೀವನ ಚರಿತ್ರೆ" ಪ್ರವಚನದ ಸದುಪಯೋಗ ಮಾಡಿಕೊಳ್ಳಿ. ಪೂಜ್ಯ ಪ್ರಭುಲಿಂಗ ಶರಣರು ಪ್ರವಚನಕಾರರು.

## ಇಂದು ಭಾನಾಪುರದಲ್ಲಿ ನಿವೃತ್ತ ಶಿಕ್ಷಕ ಸೋಮಶೇಖರ್ ಹರ್ತಿ ಅವರ ಅಭಿನಂದನಾ ಸಮಾರಂಭ.



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಕುಕನೂರು ತಾಲ್ಲೂಕಿನ ಭಾನಾಪುರದ ಸರಕಾರಿ ಪ್ರೌಢ ಶಾಲೆಯಲ್ಲಿ ಸಮಾಜ ವಿಜ್ಞಾನ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತರಾದ ಸೋಮಶೇಖರ್ ಹರ್ತಿ ಅವರ ವಯೋನಿವೃತ್ತಿಯ ಅಭಿನಂದನಾ ಸಮಾರಂಭವನ್ನು ಸರಕಾರಿ ಪ್ರೌಢ ಶಾಲೆ ಭಾನಾಪುರದಲ್ಲಿ ಹಮ್ಮಿಕೊಳ್ಳಲಾಗಿದೆ.

ಸೋಮಶೇಖರ್ ಹರ್ತಿಯವರು ಪ್ರಾಥಮಿಕ ಶಿಕ್ಷಕರಿಂದ ಬಡ್ತಿಪಡೆದು ಪ್ರೌಢ ಶಾಲಾ ಶಿಕ್ಷಕರಾಗಿಯೂ ಸಿ.ಆರ್.ಪಿ ಮತ್ತು ಇ.ಸಿ.ಓ ಆಗಿ ಕೂಡ ಕರ್ತವ್ಯ ನಿರ್ವಹಿಸಿದ್ದಾರೆ. ಸರಕಾರಿ ಪ್ರೌಢಶಾಲಾ ಸಹಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷರಾಗಿ, ಭಾರತ ಸೇವಾದಳದ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದಾರೆ. ಶಾಲಾ ಶಿಕ್ಷಕರ ಪಾಲಿನ ಧ್ವನಿಯಾಗಿ ಸಂಘಟನೆ ಮೂಲಕ ಶೈಕ್ಷಣಿಕ ಪ್ರಗತಿಗೆ ಕಾರಣರಾಗಿದ್ದು ಮೇ 31 ರಂದು ಭಾನಾಪುರ ಶಾಲಾಯಲ್ಲಿ ವಯೋನಿವೃತ್ತಿಯಾಗಿದ್ದಾರೆ.

ಇಂದು ಅಭಿನಂದನಾ ಬಿಳ್ಕೊಡುಗೆ ಸಮಾರಂಭವನ್ನು ಹಮ್ಮಿಕೊಂಡಿದ್ದು ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ಶ್ರೀ ಬಸವರಾಜ ಹಿಟ್ನಾಳ್, ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ನಾಗರಾಜ್ ಜುಮ್ಮಣ್ಣನವರ

ಮಾಜಿ ವಿಧಾನ ಪರಿಷತ್ತು ಸದಸ್ಯರಾದ ಮಟ್ಟೂರ ಶರಣಪ್ಪ ಶ್ರೀ ವಿಠ್ಠಲ್ ಎಮ್ ಅಧ್ಯಕ್ಷರು ಪ್ರಭಾರಿ ಕರ್ನಾಟಕ ರಾಜ್ಯ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘ ಜಿಲ್ಲಾ ಘಟಕ ಕೊಪ್ಪಳ, ಮಹೇಶ ಸಬರದ ಅಧ್ಯಕ್ಷರು ಸರಕಾರಿ ನೌಕರರ ಸಂಘ ಕುಕನೂರ,

ಶ್ರೀಶೈಲ ಬಿರಾದಾರ್ ಉಪನಿರ್ದೇಶಕರು ಶಿಕ್ಷಣ ಇಲಾಖೆ ಡಿ.ಡಿ.ಪಿ.ಐ, ಸೋಮಶೇಖರಗೌಡ ಬಿ.ಇ.ಓ ಯಲಬುರ್ಗಾ ಮತ್ತು ಮುಖ್ಯೋಪಾಧ್ಯಾಯರು ಶಿಕ್ಷಕರು ಹಳೆಯ ವಿದ್ಯಾರ್ಥಿಗಳು ಗ್ರಾಮದ ಮುಖಂಡರು ಹಿರಿಯರು ಉಪಸ್ಥಿತಿ ಇರಲಿದ್ದಾರೆ.

## ಕರೂರು: ಡೆಂಗ್ಯು ನಿಯಂತ್ರಣ ಕುರಿತು ಶಿಕ್ಷಕರಿಗೆ ತರಬೇತಿ

# ಶಾಲಾ ಆವರಣ ಸ್ವಚ್ಛವಾಗಿಟ್ಟುಕೊಳ್ಳಲು ಡಿಹೆಚ್‌ಒ ಡಾ.ಯಲ್ಲಾ ರಮೇಶ್ ಬಾಬು ಸಲಹೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.13–ರೋಗ ಲಕ್ಷಣಗಳಾಧರಿಸಿ ಚಿಕಿತ್ಸೆ ನೀಡಲ್ಪಡುವ ಡೆಂಗ್ಯು ರೋಗ ನಿಯಂತ್ರಣಕ್ಕೆ ಶಿಕ್ಷಕರ ಪಾತ್ರವು ಮುಖ್ಯವಾಗಿದ್ದು, ತಮ್ಮ ಶಾಲೆ ಆವರಣಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಶಾಲೆಗಳ ಆರಂಭವಾದ ಹಿನ್ನಲೆಯಲ್ಲಿ ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಜಿಲ್ಲೆಯಾದ್ಯಂತ ಶಾಲಾ ಶಿಕ್ಷಕರುಗಳಿಗೆ ಡೆಂಗ್ಯು ನಿಯಂತ್ರಣ ಕುರಿತು ತರಬೇತಿ ನೀಡಲಾಗುತ್ತಿದ್ದು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಆಶ್ರಯದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮೂಲಕ ಕರೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ 41 ಶಾಲೆಗಳ ವಿಜ್ಞಾನ ನೋಡಲ್ ಶಿಕ್ಷಕರಿಗೆ ಶುಕ್ರವಾರ ಹಮ್ಮಿಕೊಂಡಿದ್ದ ತರಬೇತಿಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಈ ಬಾರಿ ಮುಂಚಿತವಾಗಿಯೇ ಮಳೆಗಾಲ ಆರಂಭಗೊಂಡಿದೆ. ಅದೇರೀತಿಯಾಗಿ ಶಾಲೆಗಳು ಸಹ ಪ್ರಾರಂಭವಾಗಿದ್ದು, ಈ ಹಿನ್ನಲೆಯಲ್ಲಿ ಶಾಲಾ ಆವರಣಗಳಲ್ಲಿ ಮಳೆ ನೀರು ನಿಲ್ಲದಂತೆ ನೋಡಿಕೊಳ್ಳಬೇಕು ಎಂದರು.

ಎಲ್ಲಾ ಶಾಲೆಗಳಲ್ಲಿಯ ನೀರು ಸಂಗ್ರಹಕ ಸಿಂಟೆಕ್ಸ್‌ಗಳನ್ನು ಶುಚಿಗೊಳಿಸಿ, ಸರಿಯಾಗಿ ಮುಚ್ಚಬೇಕು ಹಾಗೂ ಖಾಸಗಿ ವಸತಿ ಶಾಲೆಗಳಲ್ಲಿ ಬಸ್‌ಗಳ ಟೈರ್‌ಗಳನ್ನು ಸೂಕ್ತ ವಿಲೇವಾರಿ ಮಾಡಬೇಕು.ಶಾಲೆಗಳಲ್ಲಿ ಆರೋಗ್ಯ ಇಲಾಖೆಯಿಂದ ಸಿದ್ಧಪಡಿಸಿರುವ ವಿಡಿಯೋಗಳನ್ನು ಸ್ಮಾರ್ಟ್ ಕ್ಲಾಸ್ ಮೂಲಕ ಪ್ರದರ್ಶಿಸಿ ಹೆಚ್ಚಿನ ಜಾಗೃತಿಗೆ ಕೈ ಜೋಡಿಸಬೇಕು ಎಂದರು.

ನಿಂತ ನೀರಿನಲ್ಲಿ ಸೊಳ್ಳೆ ಉತ್ಪತ್ತಿಯಾಗುವುದರ ಮೂಲಕ ಸೊಳ್ಳೆಯ ಕಚ್ಚುವಿಕೆಯಿಂದ ಹರಡುವ ಚಿಕುನ್‌ಗುನ್ಯಾ, ಮಲೇರಿಯಾ,ಆನೇಕಾಲು ರೋಗ, ಮೆದುಳು ಜ್ವರ ಮುಂತಾದವುಗಳು ಕಂಡುಬರುವ ಸಾಧ್ಯತೆ ಇರುತ್ತದೆ. ಈ ಹಿನ್ನಲೆಯಲ್ಲಿ ಶಾಲೆಗಳಿಗೆ ಆಗಮಿಸುವ ವೈದ್ಯಕೀಯ ತಂಡ ನೀಡುವ ಸಲಹೆಗಳನ್ನು ತಪ್ಪದೇ ಅನುಸರಿಸಿ ರೋಗ ತಡೆಗೆ ಸಹಕರಿಸಬೇಕು ಎಂದು ತಿಳಿಸಿದರು.

ನಿರಂತರವಾಗಿ ನೀರು ನಿಲ್ಲುವ ಸ್ಥಳಗಳಲ್ಲಿ ಸುಟ್ಟ ಆಯಿಲ್ ಹಾಕಲು ಮತ್ತು ಮಕ್ಕಳು ಉದ್ದ ತೋಳಿನ ಶರ್ಟ್ ಹಾಗೂ ಪಾದದವರೆಗೆ ರಕ್ಷಿಸುವ ಪ್ಯಾಂಟ್ ಧರಿಸುವಂತೆ ಸೂಚಿಸಬೇಕು ಎಂದರು.

*ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ರಕ್ತ ಪರೀಕ್ಷೆಗೆ ವ್ಯವಸ್ಥೆ:*

ಜಿಲ್ಲೆಯ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ರಕ್ತ ಪರೀಕ್ಷೆ ಮೂಲಕ ಮಲೇರಿಯಾ, ಡೆಂಗ್ಯು ರೋಗ ಪತ್ತೆ ಹಚ್ಚುವ ಹಾಗೂ ಪ್ಲೇಟ್‌ಲೇಟ್ಸ್, ಸಿಬಿಸಿ, ಹೆಚ್‌ಬಿ ಮುಂತಾದವುಗಳ ಪರೀಕ್ಷೆ ಹಾಗೂ ಬೆಳಗಿನ ಅವಧಿಯಲ್ಲಿ ಉಪಹಾರ ಪೂರ್ವ ರಕ್ತಪರೀಕ್ಷೆ ಮಾಡಿಸಲು ಸೂಕ್ತ ವ್ಯವಸ್ಥೆ ಕಲ್ಪಿಸಿದ್ದು, ಸಾರ್ವಜನಿಕರಿಗೆ ಇದರ ಸದುಪಯೋಗಕ್ಕಾಗಿ ವ್ಯಾಪಕ ಪ್ರಚಾರ ನೀಡುವಂತೆ ವಿನಂತಿಸಿದರು.

ಈ ಸಂದರ್ಭದಲ್ಲಿ ಆಡಳಿತ ವೈದ್ಯಾಧಿಕಾರಿ ಡಾ.ಸುನೀಲ್, ಡಾ.ಬಾಲಾಜಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಮಹಮ್ಮದ್ ಖಾಸಿಂ, ಆರೋಗ್ಯ ನಿರೀಕ್ಷಣಾಧಿಕಾರಿ ವೆಂಕಪ್ಪ ಸೇರಿದಂತೆ ಶಾಲಾ ಗುರುಗಳು, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು, ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ರಾಯಚೂರ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಖಾಲಿ ಹುದ್ದೆಗಳ ಭರ್ತಿಗೆ ಕ್ರಮವಹಿಸಲು ನಿರ್ದೇಶನ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು: ಪ್ರಾಧ್ಯಾಪಕರು, ಸಹ ಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು ಸೇರಿ ಇನ್ನಿತರ ಸಿಬ್ಬಂದಿಯನ್ನು ಕಾಲಕಾಲಕ್ಕೆ ಭರ್ತಿ ನಡೆಸಿ ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯದ ಕಾರ್ಯ ಸಾರ್ಥವನ್ನು ಬಲಪಡಿಸಬೇಕು ಎಂದು ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿಯ ಅಧ್ಯಕ್ಷರು ಆಗಿರುವ ವಿಧಾನ ಪರಿಷತ್ ಶಾಸಕರಾದ ಟಿ.ಎ.ಶರವಣ ಅವರು ನಿರ್ದೇಶನ ನೀಡಿದರು.

ಜೂನ್ 11ರಂದು ವಿಶ್ವ ವಿದ್ಯಾಲಯಕ್ಕೆ ಭೇಟಿ ನೀಡಿ, ಕೃಷಿ ಇಲಾಖೆಯ ಭರವಸೆ ಸಂಖ್ಯೆ 8191ಕ್ಕೆ ಸಂಬಂಧಿಸಿದಂತೆ, ಕೃಷಿ ವಿವಿ ಸಭಾಂಗಣದಲ್ಲಿ ಸಭೆ ನಡೆಸಿ ಅವರು ಪರಿಶೀಲನೆ ನಡೆಸಿ ಮಾತನಾಡಿದರು.

ರಾಜ್ಯಕೃಷಿವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಬೋಧಕ ಹಾಗೂ ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮಗಳ ಬಗ್ಗೆ ವಿಧಾನ ಪರಿಷತ್ ಶಾಸಕರಾದ ಎಸ್.ವಿ.ಸಂಕನೂರ ಅವರು 2021ರಲ್ಲಿ ವಿಧಾನ ಪರಿಷತ್ತಿನಲ್ಲಿ ಪ್ರಸ್ತಾಪಿಸಿದ್ದರು. ಆ ವೇಳೆ ಕೃಷಿ ಸಚಿವರು ಪ್ರತಿಕ್ರಿಯಿಸಿ, ರಾಜ್ಯದಲ್ಲಿ ನಾಲ್ಕು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳಲ್ಲಿನ ಕೃಷಿ ವಿಜ್ಞಾನ ಕೇಂದ್ರಗಳು/ಕೃಷಿ ಸಂಶೋಧಾನ ಕೇಂದ್ರಗಳಲ್ಲಿ ಐಸಿಎಆರ್‌ನಿಂದ ಶೇ.100ರಷ್ಟು ಅನುದಾನಿತ ಕೆವಿಕೆಯಲ್ಲಿ ಖಾಲಿ ಇರುವ 49 ಬೋಧಕರ ಹಾಗೂ 83 ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡುವಂತೆ ರಾಯಚೂರ ಸೇರಿದಂತೆ ವಿವಿಧ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳಿಗೆ ನಿರ್ದೇಶಿಸಲಾಗಿದೆ ಎಂದು ಭರವಸೆ ನೀಡಿದ್ದರು. ಈ ಬಗ್ಗೆ ಏನು ಕ್ರಮ ಜರುಗಿಸಲಾಗಿದೆ ಎಂದು ಅಧ್ಯಕ್ಷರು ಪ್ರಶ್ನಿಸಿದರು.

ವಿವಿಧ ಕೃಷಿ ವಿಜ್ಞಾನಗಳ ಕೇಂದ್ರಗಳಲ್ಲಿ ಖಾಲಿ ಇದ್ದ 7 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಈಗಾಗಲೇ ನೇಮಕಾತಿ ಮಾಡಿಕೊಳ್ಳಲಾಗಿರುತ್ತದೆ.1ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರ ಹುದ್ದೆಯನ್ನು ಸಹ ನೇಮಕಾತಿ ಮಾಡಿದೆ. ಮುಂದುವರೆದು 18 ಬೋಧಕೇತರ ಹುದ್ದೆಗಳಿಗೆ ನೇಮಕಾತಿ ಅಧಿಸೂಚನೆಯ ಆದೇಶ ಹೊರಡಿಸಲಾಗಿದೆ. ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ವಿಶ್ವ ವಿದ್ಯಾಲಯದ ಅಂತರ್ಜಾಲದಲ್ಲಿ ಭಿತ್ತರಿಸಲಾಗಿದೆ. ಈ ಹುದ್ದೆಗಳನ್ನು ಬೇಗನೇ ನೇಮಕಾತಿ ಮಾಡಿಕೊಳ್ಳಲಾಗುವುದು ಎಂದು ಭರವಸೆ ಸಂಖ್ಯೆ 8191ಕ್ಕೆ ಈಗಾಗಲೇ ಅನುಪಾಲನಾ ವರದಿ ನೀಡಲಾಗಿದೆ ಎಂದು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಎಂ. ಹನುಮಂತಪ್ಪ ಅವರು ಸಭೆಗೆ ಮಾಹಿತಿ ನೀಡಿದರು.

ರಾಜ್ಯದಲ್ಲಿ ನೂತನವಾಗಿ ಕೃಷಿ ಎಂಜಿನಿಯರಿಂಗ್ ನಿರ್ದೇಶನಾಲಯ ಸ್ಥಾಪಿಸುವ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದ್ದು ಸರ್ಕಾರದಲ್ಲಿ ಪರಿಶೀಲನೆಯ ಹಂತದಲ್ಲಿದೆ ಎಂಬುದಾಗಿ ಭರವಸೆ ಸಂಖ್ಯೆ 8872ಕ್ಕೆ ರಾಯಚೂರ ಕೃಷಿ ವಿವಿಯಿಂದ ಅನುಪಾಲನಾ ವರದಿ ಸಲ್ಲಿಸಲಾಗಿದೆ ಎಂದು ಕುಲಪತಿಗಳು ಮಾಹಿತಿ ನೀಡಿದರು.

ರಾಯಚೂರ ಕೃಷಿ ವಿಶ್ವವಿದ್ಯಾಲಯ ರಾಯಚೂರ ನಗರದ ಹೃದಯಭಾಗದಲ್ಲಿದೆ. ಇದು ಇಡೀ ನಗರಕ್ಕೆ ಹೆಮ್ಮೆಯ ತಾಣ ಅನಿಸಿದೆ. ಓದುವುದಕ್ಕೆ ಅಷ್ಟೇ ಅಲ್ಲ; ನಗರದ ಅನೇಕ ನಿವಾಸಿಗಳ ವಾಯುವಿಹಾರದ ತಾಣವಾಗಿದೆ. ಇದನ್ನು ಕಾಪಾಡಬೇಕು. ಸುಮಾರು ವರ್ಷಗಳಿಂದ ಇಲ್ಲಿ ಸೇವೆ ಸಲ್ಲಿಸಿದವರು ತಮಗೆ ಸಹಾಯಕ ಪ್ರಾಧ್ಯಾಪಕರನ್ನಾಗಿ, ಸಹ ಪ್ರಾಧ್ಯಾಪಕರನ್ನಾಗ ನೇಮಿಸಿಕೊಂಡಿಲ್ಲ ಎಂದು ಕೋರ್ಟಗೆ ಹೋದವರೊಂದಿಗೆ ಮಾತನಾಡಿ ಅವರ ಮನವೊಲಿಸಿ ಅವಕಾಶವಿದ್ದಲ್ಲಿ ಅವರನ್ನು ನೇಮಿಸಿಕೊಳ್ಳಲು ಪುನಃ ಪರಿಶೀಲಿಸಬೇಕು. ಪೂರ್ಣ ಪ್ರಮಾಣದಲ್ಲಿ ನೌಕರರು ಸಿಬ್ಬಂದಿ ಇದ್ದಾಗಲೇ ಉತ್ತಮ ಫಲಿತಾಂಶ ಪಡೆಯಲು ಸಾಧ್ಯವಾಗುತ್ತದೆ. ವಿಶ್ವವಿದ್ಯಾಲಯ ಉಳಿಯುತ್ತದೆ. ಹಣಕಾಸಿನ ನೆರವು ಬೇಕಿದ್ದಲ್ಲಿ ತಿಳಿಸಬೇಕು ಎಂದು ಇದೆ ವೇಳೆ ವಿಧಾನ ಪರಿಷತ್ ಶಾಸಕರಾದ ತಿಪ್ಪಣ್ಣಪ್ಪಕಮಕನೂರ,ಮಂಜುನಾಥ ಭಂಡಾರಿ ಹಾಗೂ ಕೆ.ಎಸ್.ನವೀನ್ ಅವರು ಸಲಹೆ ಮಾಡಿದರು.

ಸಭೆಯಲ್ಲಿ ಸಮಿತಿಯ ಸದಸ್ಯರಾದ ಹಾಗೂ ವಿಧಾನ ಪರಿಷತ್ ಶಾಸಕರಾದ ನಿರಾಣಿ ಹನುಮಂತಪ್ಪ ರುದ್ರಪ್ಪ, ಪ್ರತಾಪ ಸಿಂಹ ನಾಯಕ ಕೆ., ಕರ್ನಾಟಕ ವಿಧಾನ ಪರಿಷತ್ ಕಾರ್ಯದರ್ಶಿ ಕೆ.ಆರ್.ಮಹಾಲಕ್ಷ್ಮಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯದ ಕುಲಸಚಿವರಾದ ಡಾ.ಕೆ.ಆರ್.ದುರ್ಗೇಶ್, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹರೀಶ್ ಜಿ, ಜಂಟಿ ಕೃಷಿ ನಿರ್ದೇಶಕರಾದ ಜಯಪ್ರಕಾಶ ಟಿ.ಸಿ ಹಾಗೂ ಇನ್ನಿತರರು ಇದ್ದರು.

# ಧರ್ತಿ ಆಬ ಜನಜಾತೀಯ ಗ್ರಾಮ ಅಭಿಯಾನ: ಬಳ್ಳಾರಿ ಜಿಲ್ಲೆಯ 59 ಗ್ರಾಮಗಳು ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.13–ಕೇಂದ್ರ ಸರ್ಕಾರದ ಬುಡಕಟ್ಟು ವ್ಯವಹಾರಗಳ ಮಂತ್ರಾಲಯ ಇವರ ಆದೇಶದಂತೆ ಧರ್ತಿ ಆಬ ಜನಜಾತೀಯ ಗ್ರಾಮ ಅಭಿಯಾನ ಯೋಜನೆಯಡಿ ಪಂಗಡ ಜನಾಂಗದವರು ಹೆಚ್ಚಾಗಿರುವ ಬಳ್ಳಾರಿ ಜಿಲ್ಲೆಯ 5 ತಾಲ್ಲೂಕುಗಳಿಂದ ಒಟ್ಟು 59 ಗ್ರಾಮಗಳನ್ನು ಆಯ್ಕೆಮಾಡಿದ್ದು, ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಕ್ರಿಯಾ ಯೋಜನೆ ರೂಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ಆಯ್ಕೆಯಾದ ಗ್ರಾಮಗಳಲ್ಲಿ ಮೂಲಭೂಯ ಸೌಕರ್ಯಗಳಾದ ರಸ್ತೆ, ಕುಡಿಯುವ ನೀರು, ಆರೋಗ್ಯ,ದೂರವಾಣಿಸಂಪರ್ಕ, ವಿದ್ಯುತ್ಚ್ಛಕ್ತಿ,ವಸತಿನಿರ್ಮಾಣ, ಅಂಗನವಾಡಿಕೇಂದ್ರಗಳ ಸ್ಥಾಪನೆ, ಆರೋಗ್ಯ ಕಾರ್ಡ್, ಜಾತಿ ಪ್ರಮಾಣ ಪತ್ರ, ಅರಣ್ಯ ಹಕ್ಕು ಯೋಜನೆಯಡಿ ಅರ್ಹರಿಗೆ ಹಕ್ಕುಪತ್ರ ಒದಗಿಸಲಾಗುವುದು.

ಅದೇರೀತಿಯಾಗಿ ಬುಡಕಟ್ಟು ಯುವಕರಿಗೆ ಕೌಶಲ್ಯಾಭಿವೃದ್ಧಿ ಯೋಜನೆಯಡಿ ತರಬೇತಿ ನೀಡುವ ಮೂಲಕ ಯುವಕ-ಯುವತಿಯರಿಗೆ ಉದ್ಯೋಗ ಕಲ್ಪಿಸುವುದು ಹಾಗೂ ಇತರೆ ಸೌಲಭ್ಯಗಳನ್ನು ಒದಗಿಸುವ ಮೂಲಕ ಗ್ರಾಮಗಳನ್ನು ಉನ್ನತೀಕರಿಸಲು ಈ ಯೋಜನೆಯು ಸಹಾಯಕವಾಗಿದೆ ಎಂದು ತಿಳಿಸಿದ್ದಾರೆ.

2024–25 ರಿಂದ 2025–26 ನೇ ಸಾಲಿಗೆ ಧರ್ತಿ ಆಬ ಜನಜಾತೀಯ ಗ್ರಾಮ ಅಭಿಯಾನ ಯೋಜನೆಯಡಿ ವಿವಿಧ 17 ಇಲಾಖೆಗಳ ಸಹಯೋಗದಲ್ಲಿ ಜಿಲ್ಲೆಯ 59 ಗ್ರಾಮಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕ್ರಿಯಾಯೋಜನೆ ಸಿದ್ಧಪಡಿಸಲಾಗುವುದು.

ಈ ಯೋಜನೆಗೆ ಒಳಪಟ್ಟ 59 ಗ್ರಾಮದ ಬುಡಕಟ್ಟು ಜನರು ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಅಭಿವೃದ್ಧಿ ಹೊಂದಲು ಈ ಯೋಜನೆಯ ಸದುಪಯೋಗಪಡೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

# ಸಮಗ್ರ ಶಿಕ್ಷಣ ಅಭಿಯಾನ: ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.13–ಸಮಗ್ರ ಶಿಕ್ಷಣ –ಕರ್ನಾಟಕ ಬಳ್ಳಾರಿ ಸಮನ್ವಯ ಶಿಕ್ಷಣ ವಿಭಾಗದಡಿ 2025–26ನೇ ಶೈಕ್ಷಣಿಕ ಸಾಲಿಗೆ ಖಾಲಿ ಇರುವ ಬಿಐಇಆರ್‌ಟಿ ಪ್ರಾಥಮಿಕ ವಿವಿಧ ತಾತ್ಕಾಲಿಕ ಹುದ್ದೆಗಳಿಗೆ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಮಗ್ರ ಶಿಕ್ಷಣ ಅಭಿಯಾನದ ಉಪನಿರ್ದೇಶಕರು ತಿಳಿಸಿದ್ದಾರೆ.

ಪ್ರಾಥಮಿಕ (1 ರಿಂದ 5) ಡಿ.ಇಡಿ ವಿಶೇಷ ಶಿಕ್ಷಣ (ಆರ್‌ಸಿಐ ಸಿಆರ್‌ಆರ್ ಸಂಖ್ಯೆಯೊಂದಿಗೆ), ಪ್ರೌಢ (6 ರಿಂದ 8) ಬಿ.ಇಡಿ ವಿಶೇಷಶಿಕ್ಷಣ(ಆರ್‌ಸಿಐಸಿಆರ್‌ಆರ್ ಸಂಖ್ಯೆಯೊಂದಿಗೆ) ಮತ್ತು ಪ್ರೌಢ (9 ರಿಂದ 12) ಬಿ.ಇಡಿ ವಿಶೇಷ ಶಿಕ್ಷಣ(ಆರ್‌ಸಿಐ ಸಿಆರ್‌ಆರ್ ಸಂಖ್ಯೆಯೊಂದಿಗೆ) ಹುದ್ದೆಗಳಿಗೆ ತಾತ್ಕಾಲಿಕವಾಗಿ ನೇರಗುತ್ತಿಗೆ ಅಡಿ ಅರ್ಜಿ ಆಹ್ವಾನಿಸಲಾಗಿದೆ. ಈ ಹಿಂದೆ ಈ ಇಲಾಖೆಯಲ್ಲಿ ಬಿಐಇಆರ್‌ಟಿಯಾಗಿ ಕಾರ್ಯನಿರ್ವಹಿಸಿರುವ ಅಭ್ಯರ್ಥಿಗಳಿಗೆ ಸೇವಾ ಜೇಷ್ಠತೆಯನ್ನು ಪರಿಗಣಿಸಿ ಆಯ್ಕೆ ಮಾಡಲಾಗುವುದು.

ಅರ್ಜಿಗಳನ್ನು ಜೂ.17ರೊಳಗಾಗಿ ಉಪನಿರ್ದೇಶಕರು ಮತ್ತು ಪದನಿ ಮಿತ್ತ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು, ಸಮಗ್ರ ಶಿಕ್ಷಣ – ಕರ್ನಾಟಕ, ಕೋ-ಟೆ, ಬಳ್ಳಾರಿ ಇವರಿಗೆ ಅರ್ಜಿ ಸಲ್ಲಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೃಷಿ ಇಲಾಖೆ: ವಿವಿಧ ಬೆಳೆಗಳಿಗೆ ವಿಮೆ ನೋಂದಣಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.13–ಪ್ರಸಕ್ತ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆಯಡಿ ಮುಂಗಾರು ಹಂಗಾಮಿನ ಬೆಳೆಗಳ ಬೆಳೆ ವಿಮೆಗೆ ನೋಂದಾಯಿಸಲು ಬೆಳೆ ಸಾಲ ಪಡೆದ ಹಾಗೂ ಬೆಳೆ ಸಾಲ ಪಡೆಯದ ರೈತರು ತಮ್ಮ ಬೆಳೆಗಳಿಗೆ ಬ್ಯಾಂಕುಗಳಲ್ಲಿ ವಿಮೆಗೆ ನೋಂದಾಯಿಸಿಕೊಳ್ಳಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಮುಂಗಾರು ಹಂಗಾಮಿನ ಗ್ರಾಮ ಪಂಚಾಯಿತಿ ಮಟ್ಟದ ಬೆಳೆಗಳಾದ ಭತ್ತ, ಮುಸುಕಿನ ಜೋಳ ಹಾಗೂ ಹೋಬಳಿ ಮಟ್ಟದ ಮುಂಗಾರು ಹಂಗಾಮಿನ ಬೆಳೆಗಳಾದ ಜೋಳ, ರಾಗಿ, ಸಜ್ಜೆ, ನವಣೆ, ತೊಗರಿ, ಹುರುಳಿ, ಸೂರ್ಯಕಾಂತಿ, ಎಳ್ಳು, ಹತ್ತಿ, ನೆಲಗಡಲೆ, ಈರುಳ್ಳಿ, ಭತ್ತ, ಕೆಂಪು ಮೆಣಸಿನಕಾಯಿ ಜಿಲ್ಲೆಯ ಬೆಳೆಗಳಾಗಿವೆ.

ವಿವಿಧ ಬೆಳೆಗಳ ಬೆಳೆ ವಿಮೆಗೆ ಕೊನೆಯ ದಿನ: ಎಳ್ಳು–ಜುಲೈ 15 ಕೊನೆಯ ದಿನ. ಮುಸುಕಿನ ಜೋಳ, ಜೋಳ, ಸೂರ್ಯಕಾಂತಿ, ತೊಗರಿ, ಹತ್ತಿ, ಕೆಂಪು ಮೆಣಸಿನಕಾಯಿ, ಈರುಳ್ಳಿ ಬೆಳೆಗಳಿಗೆ ಜುಲೈ 31 ಕೊನೆಯ ದಿನ.

ಭತ್ತ, ತೊಗರಿ, ರಾಗಿ, ನವಣೆ, ಹುರುಳಿ, ನೆಲಗಡಲೆ, ಸಜ್ಜೆ ಬೆಳೆಗಳಿಗೆ ಆಗಸ್ಟ್ 16 ರ ವರೆಗೆ ಅವಕಾಶ ಕಲ್ಪಿಸಲಾಗಿದೆ.

ನೋಂದಾಯಿಸಿಕೊಳ್ಳಲು ಸ್ಥಳೀಯ ಬ್ಯಾಂಕ್‌ಗಳು ಅಥವಾ ಸಾರ್ವಜನಿಕ ಸೇವಾ ಕೇಂದ್ರ ಅಥವಾ ಗ್ರಾಮ ಒನ್ ಸೇವಾ ಕೇಂದ್ರಗಳಿಗೆ ಸಂಪರ್ಕಿಸಬಹುದು.

ಬೆಳೆ ಸಾಲ ಪಡೆದ ರೈತರು ಇಚ್ಛೆ ಪಡೆಯದೇ ಇದ್ದಲ್ಲಿ ತಮ್ಮ ವ್ಯಾಪ್ತಿಯ ಬ್ಯಾಂಕಿನ ವ್ಯವಸ್ಥಾಪಕರಿಗೆ ಬೆಳೆ ನೊಂದಣಿ ಅಂತಿಮ ದಿನಾಂಕಕ್ಕಿಂತ 7 ದಿನಗಳ ಮುಂಚಿತವಾಗಿ ಲಿಖಿತವಾಗಿ ಮುಚ್ಚಳಿಕೆ ಪತ್ರವನ್ನು ನೀಡಿದ್ದಲ್ಲಿ ಅಂತಹ ರೈತರನ್ನು ಬೆಳೆ ವಿಮೆ ಯೋಜನೆಯಿಂದ ಕೈಬಿಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿನಿರ್ದೇಶಕರ ಕಚೇರಿ ಅಥವಾ ಜಂಟಿ ಕೃಷಿನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಪತ್ಕಾಲದ ರಕ್ಷಕನನ್ನು ಸದಾ ಸ್ಮರಿಸಿ ರಾಜಯೋಗಿನಿ ಬಿ.ಕೆ. ಜಯಂತಿ ಅಕ್ಕ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯಲಬುರ್ಗಾ ಜೀವನದಲ್ಲಿ ಬರುವ ವಿಪತ್ತನ್ನು ಪರಿಹರಿಸಿಕೊಳ್ಳಲು ಆಪತ್ಕಾಲದ ರಕ್ಷಕನನ್ನು ಸದಾ ಸ್ಮರಿಸಬೇಕೆಂದು ಬ್ರಹ್ಮಕುಮಾರಿ ವಿಶ್ವವಿದ್ಯಾಲಯದ ಗದಗ ವಿಭಾಗೀಯ ಸಂಚಾಲಕರಾದ ರಾಜಯೋಗಿನಿ ಬ್ರ.ಕು. ಜಯಂತಿ ಅಕ್ಕನವರು ಹೇಳಿದರು.


ಪಟ್ಟಣದ ಈಶ್ವರಿ ವಿಶ್ವವಿದ್ಯಾಲಯದ ಆಯೋಜಿಸಿದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಪ್ರತಿನಿತ್ಯ ಬಾಬನ ಸ್ಮರಣೆಯ ಮಾಡುವದರಿಂದ ಒಳ್ಳೆ ವಿಚಾರಗಳು ಬರುವದರಿಂದ ನಕರಾತ್ಮಕತೆ-ಯು ನಮ್ಮಿಂದ ದೂರಾಗುವವು ಹಾಗೆಯೆ ಜೀವನದಲ್ಲಿ ಸನ್ನಡತೆ –ಸಂಸ್ಕಾರ ಬೆಳೆಸಿಕೊಂಡಾಗ ಯಾವುದೆ ಅಸುರಿ ಶಕ್ತಿಯು ನಮ್ಮನ್ನು ಪ್ರವೇಶಿಸುವದಿಲ್ಲ ಆ ಕಾರಣಕ್ಕಾಗಿ ಸತ್ಸಂಗ–ಸತ್ಕರ್ಮಗಳ ಸಂಗದಲ್ಲಿ ನಾವು ಇರಬೇಕಾಗಿದೆ . ಯಾವ ಬೀಜ ಬಿತ್ತುತ್ತೆವೆಯೋ ಅದರ ಫಲ ನಮಗೆ ದೊರಕುತ್ತದೆ . ಒಮ್ಮೆ ಹುಟ್ಟಿದ ಜನ್ಮ ಮತ್ತೆ ಬರುವದಿಲ್ಲ ನಾವು ಎಷ್ಟು ದಿನ ಬದುಕಿದ್ದೆವೆ ಎನ್ನುವದು ಮುಖ್ಯವಲ್ಲ ಬದುಕಿನ ಅವಧಿಯಲ್ಲಿ ನಾವು ಹೇಗೆ ಇದ್ದೇವು ಎನ್ನುವದು ಮುಖ್ಯವಾಗುತ್ತದೆ .

ಮಾನವಜನ್ಮ ದೊಡ್ಡದು ಅದನನ್ನು ಸಾರ್ಥಕ ಪಡಿಸಿಕೊಳ್ಳೊಣ ದಾಸವರೇಣ್ಯರು ಹೇಳಿದ ಮಾತನ್ನು ಪರಿಪಾಲಿಸಿರಿ ಎಂದು ಕರೆ ನೀಡಿದರು .

ಸ್ಥಳೀಯ ಸಂಚಾಲಕಿ ಬ್ರ.ಕು. ಗೀತಾ ಅಕ್ಕಾ –ಗದುಗಿನ ಅಕ್ಕಂದಿರಾದ ಶ್ವೇತಾ ಅಕ್ಕ ಇನ್ನೀತರರು ಉಪಸ್ಥಿತರಿದ್ದರು

ಈ ಸಂದರ್ಭದಲ್ಲಿ ಸಿದ್ದಯ್ಯ ಕಣ್ಣೂರು – ಚಂದ್ರು ಮಸಬಹಂಚಿನಾಳ – ನಿಂಗಪ್ಪ ಯರಾಶಿ–ಫಕೀರಪ್ಪ ಗಾಣಗೇರ –ರುದ್ರಗೌಡ ಗೋಣಿ –ರವಿ ಸಂಶಿ –ವೀರಣ್ಣ ನಿಂಗೋಜಿ ಹಾಗೂ ನೂರಾರು ಅಕ್ಕಂದಿರು ಉಪಸ್ಥಿತರಿದ್ದರು. ಕಾರ್ಯಕ್ರಮ ಮುಗಿದ ನಂತರ ಎಲ್ಲರೂ ಬ್ರಹ್ಮ ಭೋಜವನ್ನು ಸವಿದರು.

# ರೈತರು ವೈಜ್ಞಾನಿಕ ಕೃಷಿ ಪದ್ಧತಿ ಅಳವಡಿಸಿಕೊಂಡು ಹೆಚ್ಚಿನ ಇಳುವರಿ ಪಡೆಯಿರಿ: ಡಿಸಿ ಪ್ರಶಾಂತ ಕುಮಾರ್ ಮಿಶ್ರಾ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.13–ರೈತರು ಮಣ್ಣಿನ ಫಲವತ್ತತೆ ಆಧರಿಸಿ ವೈಜ್ಞಾನಿಕ ಬೆಳೆ ಪದ್ಧತಿ ಅನುಸರಿಸಿ ಹೆಚ್ಚಿನ ಇಳುವರಿ ಪಡೆಯಲು ಆಧುನಿಕ ಕೃಷಿ ನಡೆಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಜಿಲ್ಲಾ ಕಾಟನ್ ಅಸೋಸಿಯೇಷನ್, ಕರ್ನಾಟಕ ರಾಜ್ಯ ಕೃಷಿ ಪರಿಕರಗಳ ಮಾರಾಟಗಾರರ ಸಂಘದ ಜಿಲ್ಲಾ ಘಟಕ, ಎಪಿಎಂಸಿ ವರ್ತಕರ ಸಂಘ ಮತ್ತು ಹತ್ತಿ ಬೆಳೆಯುವ ರೈತರ ಸಮೂಹ ಇವರ ಸಂಯುಕ್ತಾಶ್ರಯದಲ್ಲಿ ಬಳ್ಳಾರಿ ಚೇಂಬರ್ ಆಫ್ ಕಾಮರ್ಸ್ ಉಚಿತ ಆಸ್ಪತ್ರೆಯ ಮುಂಭಾಗದಲ್ಲಿ ಶುಕ್ರವಾರ ಏರ್ಪಡಿಸಿದ್ದ 'ರೈತರ ಮೇಳ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದೂರದೃಷ್ಟಿಯ ರೈತರ ಮೇಳ ಹಮ್ಮಿಕೊಂಡಿರುವುದು ಶ್ಲಾಘನೀಯ. ರೈತರು ಇಂತಹ ಕಾರ್ಯಕ್ರಮಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಯಶವಂತರಾಜ್ ನಾಗಿರೆಡ್ಡಿ ಪ್ರಾಸ್ತಾವಿಕವಾಗಿ ಮಾತನಾಡಿ, ರೈತರಿಲ್ಲದೇ – ಕೃಷಿ ಇಲ್ಲದೇ ಕೈಗಾರಿಕೆಗಳು ಮತ್ತು ಉದ್ಯಮಗಳಿಲ್ಲ. ಹಾಗಾಗಿ ದೇಶದ ಬೆನ್ನೆಲುಬಾಗಿರುವ ರೈತರನ್ನು ಮತ್ತು ಕೃಷಿಯನ್ನು ನಮ್ಮ ಸಂಸ್ಥೆಯು ಪ್ರೋತ್ಸಾಹಿಸುತ್ತಿದೆ. ಇದರ ಭಾಗವಾಗಿ ರೈತಣ್ಣ ಊಟ, ರೈತಣ್ಣ ಕ್ಲಿನಿಕ್, ರೈತಣ್ಣ ಹಾಸಿಗೆ ಹಾಗೂ ರೈತರ–ಕೃಷಿಕರ ಪರವಾದ ಅನೇಕ ಕಾರ್ಯಕ್ರಮಗಳನ್ನು ನಿರಂತರವಾಗಿ ಹಮ್ಮಿಕೊಳ್ಳುತ್ತಿದೆ ಎಂದು ಹೇಳಿದರು.

ಕೃಷಿ ಇಲಾಖೆಯ ಜಂಟಿನಿರ್ದೇಶಕ ಕೆ.ಎಂ.ಸೋಮಸುಂದರ್, ತೆ-ೂೕಟಗಾರಿಕೆ ಇಲಾಖೆಯ ಉಪ ನಿರ್ದೇಶಕ ಸಂತೋಷ್ ಸಪ್ಪಂಡಿ ಅವರು ರೈತರು ವೈಜ್ಞಾನಿಕವಾಗಿ ಪ್ರಮಾಣೀಕೃತ ಬೀಜಗಳನ್ನು ಆಯ್ಕೆ ಮಾಡಿಕೊಂಡು, ವೈಜ್ಞಾನಿಕ ಪದ್ಧತಿಯಲ್ಲಿ ಬೆಳೆಗಳನ್ನು ಬೆಳೆಯುವ ಮೂಲಕ ಹೆಚ್ಚಿನ ಇಳುವರಿಯನ್ನು ಪಡೆಯಬೇಕು ಎಂದು ವಿವರಿಸಿ, ಸರ್ಕಾರದ ವಿವಿಧ ಯೋಜನೆಗಳ ಕುರಿತು ಮಾಹಿತಿ ನೀಡಿದರು.

ಸಂಪನ್ಮೂಲ ವ್ಯಕ್ತಿಗಳಾಗಿದ್ದ ರಾಯಚೂರು ಕೆವಿಕೆಯ ಡಾ.ಭೀಮಣ್ಣ ಮತ್ತು ಹೈದರಾಬಾದ್‌ನ ಡಾ. ವೆಂಕಟೇಶ್ ಕುಲಕರ್ಣಿ ಅವರು, ಮಣ್ಣಿನ ಫಲವತ್ತತೆ, ಬೀಜಗಳ ಆಯ್ಕೆ, ವೈಜ್ಞಾನಿಕವಾಗಿ ಬೀಜ ಬಿತ್ತನೆ, ನೀರುಣಿಸುವಿಕೆ, ಆಧುನಿಕ ತಂತ್ರಜ್ಞಾನಗಳ ಬಳಕೆ, ಯಂತ್ರಗಳ ಬಳಕೆ, ಸಂಪ್ರದಾಯಿಕ ಪದ್ಧತಿಯ ಕೃಷಿ ಇನ್ನಿತರೆಗಳ ಕುರಿತು ಸಮಗ್ರವಾಗಿ ಉಪನ್ಯಾಸ ನೀಡಿ, ರೈತರಿಂದ ಅಪಾರ ಮೆಚ್ಚುಗೆ ಪಡೆದರು. ಈ ಸಂದರ್ಭದಲ್ಲಿ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಸಿ.ಶ್ರೀನಿವಾಸರಾವ್, ಬಳ್ಳಾರಿ ಎಪಿಎಂಸಿ ಅಧ್ಯಕ್ಷ ಕಟ್ಟೇಮನಿ ನಾಗೇಂದ್ರ, ಕಾರ್ಯದರ್ಶಿ ಶ್ರೀಹರಿ, ಬಳ್ಳಾರಿ ಜಿಲ್ಲಾ ಕಾಟನ್ ಅಸೋಸಿಯೇಷನ್ ಅಧ್ಯಕ್ಷ ದಂಡಿನ ತಿಪ್ಪೇಸ್ವಾಮಿ, ಬಿಡಿಸಿಸಿಐನ ಹಿರಿಯ ಉಪಾಧ್ಯಕ್ಷ ಅವ್ವಾರು ಮಂಜುನಾಥ್, ಕರ್ನಾಟಕ ರಾಜ್ಯ ಕೃಷಿ ಪರಿಕರಗಳ ಮಾರಾಟಗಾರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಎಚ್.ತಿಮ್ಮನಗೌಡ, ಬಿಡಿಸಿಸಿಐನ ನಿಕಟಪೂರ್ವ ಅಧ್ಯಕ್ಷ ಬಿ. ಮಹಾರುದ್ರಗೌಡ, ಹಗರಿ ಕೃಷಿ ವಿಶ್ವವಿದ್ಯಾಲಯದ ನಿರ್ದೇಶಕ ಡಾ.ರವಿಶಂಕರ್, ಕೃಷಿ ಮಾರಾಟಗಾರರ ನೌಕರರ ಸಂಘದ ಅಧ್ಯಕ್ಷರ ಚೌವ್ಹಾಣ್, ಎಪಿಎಂಸಿ ದಲ್ಲಾಳಿ ವರ್ತಕರ ಸಂಘದ ಅಧ್ಯಕ್ಷ ಅಂದ್ರಾಳ್ ಚಿದಾನಂದಪ್ಪ, ಡಾ.ಶ್ರೀನಿವಾಸರೆಡ್ಡಿ, ಸಂಸ್ಥೆಯ ಗೌರವ ಕಾರ್ಯದರ್ಶಿ ಕೆ.ಸಿ.ಸುರೇಶಬಾಬು ಸೇರಿದಂತೆ ಬಳ್ಳಾರಿ, ಚಿತ್ರದುರ್ಗ, ವಿಜಯನಗರ ಮತ್ತು ಆಂಧ್ರಪ್ರದೇಶದ ಸಾವಿರಾರು ರೈತರು ಭಾಗವಹಿಸಿದ್ದರು.

ರೈತರಿಗೆ ಕೃಷಿ ಮತ್ತು ಕೃಷಿಗೆ ಪೂರಕವಾದ ವಿವಿಧ ಯೋಜನೆಗಳ ಮತ್ತು ಉತ್ಪನ್ನಗಳ ಕುರಿತು ಮಾಹಿತಿ ನೀಡಲು 40 ಕ್ಕೂ ಹೆಚ್ಚಿನ ಮಳಿಗೆಗಳನ್ನು ಅಳವಡಿಸಿ, ಮಾಹಿತಿ ನೀಡಲಾಯಿತು.

# ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ: ಪ್ರೋತ್ಸಾಹಧನಕ್ಕಾಗಿ ಅರ್ಜಿ ಅಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.13–ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಪ್ರಸ್ತಕ ಸಾಲಿನಲ್ಲಿ ವಿಕಲಚೇತನ ವ್ಯಕ್ತಿಗಳ ಆರ್ರೈ-ಕೆದಾರರಿಗೆ ಪ್ರೋತ್ಸಾಹಧನ ನೀಡಲು ಉದ್ದೇಶಿಸಲಾಗುತ್ತಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಸೆರೆಬ್ರಲ್ ಪಾಲ್ಸಿ, ಮಸ್ಕುಲರ್ ಡಿಸ್ಟ್ರೋಫಿ, ಪಾರ್ಕಿನ್ ಸನ್ಸ್, ಮಲ್ಟಿಪಲ್ ಸ್ಕ್ಲೋರೋಸಿಸ್, ಆಟಿಸಂ, ಬೌದ್ಧಿಕ ವಿಕಲತೆ ಮತ್ತು ಬಹುವಿಧ ಅಂಗವಿಕಲತೆ (ಶ್ರವಣ ದೋಷ ಹೊಂದಿದ ದೃಷ್ಟಿ ದೋಷವುಳ್ಳ) ಕಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಗಳ ಆರ್ರೈ-ಕೆದಾರರಿಗೆ ಮಾಹೆಯಾನ 1,000 ರೂ.ಪ್ರೋತ್ಸಾಹಧನ ನೀಡಲಾಗುತ್ತದೆ. ಜಿಲ್ಲೆಯ ಅರ್ಹ ವಿಕಲಚೇತನರು ಅರ್ಜಿ ಸಲ್ಲಿಸಬಹುದು.

ಇದರ ಪ್ರಯೋಜನ ಪಡೆಯಲು 07 ವಿಧಗಳ ವಿಕಲಚೇತನರು ಕಡ್ಡಾಯವಾಗಿ ವೈದ್ಯಕೀಯ ಪ್ರಮಾಣ ಪತ್ರ, ವಿಕಲಚೇತನರ ವಿಶಿಷ್ಠ ಗುರುತಿನ ಚೀಟಿ(ಯು.ಡಿ.ಐ.ಡಿ) ಆರೈಕೆದಾರರ ಬ್ಯಾಂಕ್ ಖಾತೆ ಪುಸ್ತಕದ ಪ್ರತಿ ಹಾಗೂ ಇತ್ತೀಚಿನ ಆದಾಯ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಮತ್ತು ಮತದಾರರ ಗುರುತಿನ ಚೀಟಿ, ನಿವಾಸಿ ದೃಢೀಕರಣ ಪತ್ರ ಹಾಗೂ ಇತ್ತೀಚಿನ ಭಾವಚಿತ್ರದೊಂದಿಗೆ ಅರ್ಜಿ ಸಲ್ಲಿಸಬೇಕು.

ಅರ್ಜಿ ನಮೂನೆಗಳನ್ನು www.dwdsc.kar.nic.in ವೆಬ್‌ಸೈಟ್‌ನಿಂದ ನೇರವಾಗಿ ಡೌನ್‌ಲೋಡ್ ಮಾಡಿಕೊಳ್ಳಬಹುದು ಅಥವಾ ತಾಲ್ಲೂಕು ಪಂಚಾಯತ್‌ಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿದೊದ್ದೇಶ ಪುನರ್ವಸತಿ ಕಾರ್ಯಕರ್ತರಿಂದ /ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ ನಗರ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ನಗರ ಪುನರ್ವಸತಿ ಕಾರ್ಯಕರ್ತರಿಗೆ ಸಲ್ಲಿಸಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಅಥವಾ ದೂ.08392–267886 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂ.27 ರಂದು ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.13–ಕಾರ್ಮಿಕರ ಭವಿಷ್ಯ ಸಂಸ್ಥೆ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಭವಿಷ್ಯ ನಿಧಿ ನಿಮ್ಮ ಹತ್ತಿರಕ್ಕೆ ಎಂಬ ಅಂಶದಡಿ 'ನಿಧಿ ಆಪ್ಕೆ ನಿಕಟ್' ಕಾರ್ಯಕ್ರಮವನ್ನು ಜೂ.27 ರಂದು ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆಯವರೆಗೆ ತೋರಣಗಲ್‌ನ ಜೆ.ಎಸ್.ಡಬ್ಲ್ಯೂ ಸಿಮೆಂಟ್ಸ್ ಕಾರ್ಖಾನೆಯ ಹಾಲ್‌ನಲ್ಲಿ ಆಯೋಜಿಸಲಾಗಿದೆ ಎಂದು ಪ್ರಾದೇಶಿಕ ಭವಿಷ್ಯ ನಿಧಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಆಯುಕ್ತ ಟಿ.ಎನ್.ನಂದನ್ ಸಿಂಗ್ ಅವರು ತಿಳಿಸಿದ್ದಾರೆ.

ಕಾರ್ಮಿಕರ, ಪಿಂಚಣಿದಾರರ ಮತ್ತು ಉದ್ಯೋಗದಾತರರ ಕುಂದು ಕೊರತೆ ಪರಿಹಾರ, ಮಾಹಿತಿ ವಿನಿಮಯ ಮಾಡಿಕೊಳ್ಳಬಹುದು. ಉದ್ಯೋಗದಾತರ ಕರ್ತವ್ಯ ಮತ್ತು ಜವಾಬ್ದಾರಿಗಳ ಕುರಿತು ಅರಿವು, ಕಾರ್ಮಿಕರಿಗೆ, ಉದ್ಯೋಗದಾತರಿಗೆ, ಪ್ರಧಾನ ಉದ್ಯೋಗದಾತರಿಗೆ ಮತ್ತು ಗುತ್ತಿಗೆದಾರರಿಗೆ ಲಭ್ಯವಿರುವ ಆನ್‌ಲೈನ್ ಸೇವೆಗಳ ಮಾಹಿತಿ, ಹೊಸ ಉಪಕ್ರಮಗಳು ಹಾಗೂ ಸುಧಾರಣೆ ಕ್ರಮಗಳ ಕುರಿತು ಮಾಹಿತಿ ಒದಗಿಸುವ ಕಾರ್ಯಕ್ರಮವಾಗಿದೆ.

ಕಾರ್ಮಿಕರು, ಪಿಂಚಣಿದಾರರು, ಉದ್ಯೋಗದಾತರು ಜೂ.27 ರಂದು ನಡೆಯುವ ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಳ್ಳಾರಿ: ಜೂನ್ 21 ರಂದು ಅಂತರಾಷ್ಟ್ರೀಯ ಯೋಗ ದಿನಾಚರಣೆ

# ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜಿಸುವಂತೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ನಿರ್ದೇಶನ





ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.13–ಜಿಲ್ಲಾ ಕೇಂದ್ರದಲ್ಲಿ ಜೂನ್ 21 ರಂದು ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸಲು ಬೇಕಾದ ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಏರ್ಪಡಿಸಿದ್ದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜೂ.21 ರಂದು ನಗರದ ಶೆಟ್ರ ಗುರುಶಾಂತಪ್ಪ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ನಡೆಸಲು ನಿರ್ಧರಿಸಲಾಗಿದ್ದು, ಅರ್ಥಪೂರ್ಣವಾಗಿ ಆಚರಿಸುವ ನಿಟ್ಟಿನಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳ ಒಳಗೊಡಿ ಸಮಿತಿ ರಚಿಸಿ, ಜವಾಬ್ದಾರಿಗಳನ್ನು ವಹಿಸಿಕೊಂಡು ಸಮರ್ಪಕವಾಗಿ ನಿರ್ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮಳೆಗಾಲ ಹಿನ್ನಲೆಯಲ್ಲಿ ಮುಂಜಾಗರೂಕರಾಗಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮಕ್ಕೆ ಅಡ್ಡಿಯಾಗದಂತೆ ಪರ್ಯಾಯ ವ್ಯವಸ್ಥೆಗೆ ಕಾರ್ಯಪ್ರವೃತ್ತರಾಗಿರಬೇಕು ಎಂದು ತಿಳಿಸಿದರು.

ಅಂದು ಬೆಳಿಗ್ಗೆ 07 ರಿಂದ ಯೋಗ ಕಾರ್ಯಕ್ರಮ ಜರುಗಲಿದ್ದು, ನಂತರ ಯೋಗ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಬಳಿಕ ಯೋಗಾಸನ ಮಾಡಲು ನಿರ್ದೇಶನ ಮಾಡಲಾಗುವುದು. ವೇದಿಕೆ ಸಿದ್ಧತೆಗೆ ಪರಿಶೀಲನೆ ಮಾಡಿಕೊಳ್ಳಬೇಕು ಎಂದು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾ ಮಟ್ಟದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಹೆಚ್ಚಿನ ಜನ ಆಗಮಿಸುವಂತೆ ಪ್ರಚಾರ ಕೈಗೊಳ್ಳಬೇಕು. ಪತಂಜಲಿ ಯೋಗ ಕೇಂದ್ರ, ಆರ್ಟ್ ಆಫ್ ಲಿವಿಂಗ್ ಸೇರಿದಂತೆ ಯೋಗ ಕೇಂದ್ರಗಳು ಅಗತ್ಯವಾಗಿ ಸಹಕಾರ ನೀಡಬೇಕು ಎಂದರು.

ಶಾಲಾ–ಕಾಲೇಜು ವಿದ್ಯಾರ್ಥಿಗಳು ಹಾಗೂ ಹಾಸ್ಟೆಲ್‌ಗಳಲ್ಲಿರುವ ವಿದ್ಯಾರ್ಥಿಗಳು ಯೋಗಾಸನ ಕಾರ್ಯಕ್ರಮದಲ್ಲಿ ಭಾಗವಹಿಸುವ ನಿಟ್ಟಿನಲ್ಲಿ ಕ್ರಮವಹಿಸಲು ಶಿಕ್ಷಣ ಇಲಾಖೆಯ ಅಧಿಕಾರಿಗಳು ಹಾಗೂ ಸಮಾಜಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಯೋಗ ದಿನಾಚರಣೆ ಕಾರ್ಯಕ್ರಮಕ್ಕೆ ಆಗಮಿಸುವವರಿಗೆ ಲಘು ಉಪಹಾರ ಮತ್ತು ನೀರಿನ ವ್ಯವಸ್ಥೆ, ಯೋಗಾಸನ ಮಾಡಲು ಗ್ರೀನ್ ಮ್ಯಾಟ್ ವ್ಯವಸ್ಥೆ ಮತ್ತು ವೇದಿಕೆ ಹಾಗೂ ಧ್ವನಿವರ್ಧಕ ವ್ಯವಸ್ಥೆ ಹಾಗೂ ಆವರಣದೊಳಗೆ ಸಂಪೂರ್ಣ ಸ್ವಚ್ಛತೆ ಕಾಪಾಡುವ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ನುರಿತ ಯೋಗ ಶಿಕ್ಷಕರನ್ನು ನಿಯೋಜಿಸಬೇಕು. ಆರೋಗ್ಯ ಇಲಾಖೆಯಿಂದ ಅಗತ್ಯ ಚಿಕಿತ್ಸಾ ವ್ಯವಸ್ಥೆ ಸೇರಿದಂತೆ ಇನ್ನಿತರ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು. ಯಾವುದೇ ಅಹಿತಕರ ಘಟನೆಗಳು ನಡೆ-ಯದಂತೆ ನೋಡಿಕೊಳ್ಳಲು ಪೊಲೀಸ್ ಬಂದೋಬಸ್ತ್ ಒದಗಿಸಬೇಕು. ಒಟ್ಟಾರೆ ಕಾರ್ಯಕ್ರಮ ಶಿಸ್ತುಬದ್ಧವಾಗಿ ಯಾವುದೇ ಲೋಪ ಆಗದಂತೆ ನೋಡಿಕೊಳ್ಳಬೇಕು ಎಂದರು.

ಯೋಗ ದಿನಾಚರಣೆ ಅಂಗವಾಗಿ ಯೋಗದ ಮಹತ್ವ ಸಾರುವ ಉದ್ದೇಶದಿಂದ ಬಳ್ಳಾರಿಯಲ್ಲಿ ಪೂರ್ವಭಾವಿ ಯೋಗ ಶಿಬಿರ ಕೈಗೊಳ್ಳಬೇಕು. ಅಂದು ನಡೆಯುವ ಕಾರ್ಯಕ್ರಮಕ್ಕೆ ಎಲ್ಲ ಇಲಾಖೆಗಳ ಅಧಿಕಾರಿಗಳು ಕಡ್ಡಾಯವಾಗಿ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಬೇಕೆಂದು ಹೇಳಿದರು.

ಯೋಗ ತರಬೇತಿಯು ಕೇವಲ ಒಂದು ದಿನಕ್ಕೆ ಸೀಮಿತವಾಗಬಾರದು. ಯೋಗವನ್ನು ಮಾಡುವುದರಿಂದ ವ್ಯಕ್ತಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಸದೃಡನಾಗುತ್ತಾನೆ. ಪ್ರತಿದಿನ ಯೋಗ ಮಾಡಲು ರೂಢಿಸಿಕೊಳ್ಳಬೇಕು ಎಂದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ.ಎಂ.ವಿರುಪಾಕ್ಷ ಅವರು ಮಾತನಾಡಿ, ಈ ವರ್ಷದ ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ ಎಂಬ ಘೋಷವಾಕ್ಯದೊಂದಿಗೆ ಕಾರ್ಯಕ್ರಮ ಆಚರಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕರಾದ ಸಕೀನಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್ ಕುಮಾರ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ದಿವಾಕರ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಜಿಲ್ಲೆಯ ವಿವಿಧ ಯೋಗ ಕೇಂದ್ರದ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಐ.ಟಿ.ಐ ಪ್ರವೇಶಾತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.13–ವಿಜಯನಗರ ಜಿಲ್ಲೆ ಕೂಡ್ಲಿಗಿ ತಾಲ್ಲೂಕಿನ ಗುಡೆಕೋಟೆ ಗ್ರಾಮದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ 2025–26 ನೇ ಸಾಲಿನ ಐ.ಟಿ.ಐ ಪ್ರವೇಶಾತಿಗೆ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಸರ್ಕಾರಿ ಕೈಗಾರಿಕಾ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

ಆಸಕ್ತ 10 ನೇ ತರಗತಿ ಉತ್ತೀರ್ಣರಾದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ವಿದ್ಯುತ್ಕರ್ಮಿ ಹಾಗೂ ಜೋಡಣೆ ವಿಭಾಗಗಳಲ್ಲಿ 40 ತರಬೇತಿದಾರರು ಸೇರಲು ಅವಕಾಶವಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಮೊ.9945278492 ಅಥವಾ ಗುಡೆಕೋಟೆಯ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗೆ ಭೇಟಿ ನೀಡಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಓಆರ್‌ಎಸ್, ಝಿಂಕ್ ಮಾತ್ರೆ ವಿತರಣೆ 16 ರಿಂದ ಅತಿಸಾರ ಭೇದಿ ತಡೆಗೆ ಆಂದೋಲನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.13–ಜಿಲ್ಲೆಯಲ್ಲಿ ಐದು ವರ್ಷದೊಳಗಿನ ಮಕ್ಕಳಲ್ಲಿ ಕಂಡುಬರುವ ಅತಿಸಾರ ಭೇದಿ ತಡೆಗೆ ಜೂನ್ 16 ರಿಂದ ಜುಲೈ 31 ವರೆಗೆ ಆಂದೋಲನ ಹಮ್ಮಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅತಿಸಾರಭೇದಿ ಮತ್ತು ದಡಾರ ಮತ್ತು ರುಬೆಲ್ಲ ನಿರ್ಮೂಲನೆ ಕುರಿತು ಜರುಗಿದ ಅಂತರ ಇಲಾಖಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಹುಟ್ಟಿದ ಮಗುವಿನಿಂದ ಹಿಡಿದು 5 ವರ್ಷದೊಳಗಿನ ಮಕ್ಕಳಲ್ಲಿ ಅತಿಸಾರ ಭೇದಿ ಕಂಡುಬರುತ್ತಿದ್ದು, ಯಾವುದೇ ಮಕ್ಕಳು ಇದರಿಂದ ಮರಣ ಹೊಂದದಂತೆ ಪರಿಣಾಮಕಾರಿ ಚಿಕಿತ್ಸೆಗೆ ಓಆರ್‌ಎಸ್ ಮತ್ತು ಝಿಂಕ್ ಮಾತ್ರೆ ವಿತರಣೆಗೆ ಕ್ರಮವಹಿಸಲು ಸೂಚನೆ ನೀಡಿದರು.

ಜಿಲ್ಲೆಯಲ್ಲಿ 5 ವರ್ಷದೊಳಗಿನ ಎಲ್ಲ ಮಕ್ಕಳಿಗೆ ಪರಿಣಾಮಕಾರಿ ಚಿಕಿತ್ಸೆಗೆ ಓಆರ್‌ಎಸ್ ಮತ್ತು ಝಿಂಕ್ ಮಾತ್ರೆ ವಿತರಣೆ ಮಾಡಲಾಗುತ್ತಿದ್ದು, ಜಿಲ್ಲೆಯಲ್ಲಿ ಲಭ್ಯವಿರುವ 83185 ಓಆರ್‌ಎಸ್ ಮತ್ತು 652380 ಝಿಂಕ್ ಮಾತ್ರೆಗಳನ್ನು ಜಿಲ್ಲೆಯ ಆಯಾ ತಾಲೂಕಿನ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರ ಮೂಲಕ ವಿತರಣೆಗೆ ಕ್ರಮವಹಿಸಬೇಕು. ಇದರ ಜೊತೆಗೆ ಕುಡಿಯುವ ನೀರು ಶುಚಿತ್ವ ಇರಬೇಕು. ಆಹಾರ ಸೇವನೆ ಮುಂಚೆ ಕೈಗಳನ್ನು ಸುಚಿಗೊಳಿಸಿಕೊಳ್ಳುವುದು ಮುಖ್ಯವಾಗಿದೆ. ಈ ಬಗ್ಗೆ ಹೆಚ್ಚಿನ ಪ್ರಮಾಣದಲ್ಲಿ ಶಾಲೆ, ಅಂಗನವಾಡಿ ಜನ ಸಮುದಾಯದಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ತಿಳಿಸಿದರು.

ಈ ಕಾರ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ, ಶಿಕ್ಷಣ, ನೀರು ಮತ್ತು ನೈರ್ಮಲ್ಯ, ಎನ್‌ಜಿಓಗಳು ಪಾಲ್ಗೊಳ್ಳಬೇಕು. ಓ.ಆರ್.ಎಸ್ ಮತ್ತು ಝಿಂಕ್ ಮಾತ್ರಗಳು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಉಚಿತವಾಗಿ ದೊರೆಯಲಿದ್ದು, ಝಿಂಕ್ ಮಾತ್ರೆಗಳನ್ನು 14 ದಿನಗಳವರೆಗೆ ಪ್ರತಿದಿನ 1 ರಂತೆ ನೀಡುವುದರಿಂದ ಶಕ್ತಿಯನ್ನು ಹೆಚ್ಚಿಸುತ್ತದೆ. ಎರಡು ತಿಂಗಳಗಳವರೆಗೆ ಅತಿಸಾರ ಭೇದಿಯಿಂದ ಕಾಪಾಡುತ್ತದೆ ಎಂದು ತಿಳಿಸಿದರು.

ವಿಶ್ವ ಆರೋಗ್ಯ ಸಂಸ್ಥೆಯ ಸರ್ವೇಲೆನ್ಸ್ ಅಧಿಕಾರಿ ಮುಕುಂದ ಗಲಗಲಿ ದಡಾರ ಮತ್ತು ರುಬೆಲ್ಲಾ ನಿರ್ಮೂಲನೆ ಕುರಿತು ಮಾತನಾಡಿ, ಎಂ.ಆರ್–1 ಮತ್ತು ಎಂ.ಆರ್–2 ಲಸಿಕಾ ವಂಚಿತ ಮಕ್ಕಳನ್ನು ಹುಡುಕಿ, ಅವರಿಗೆ ದಡಾರ ಮತ್ತು ರುಬೆಲ್ಲಾ ಲಸಿಕೆಯನ್ನು ಹಾಕಲಾಗುತ್ತದೆ. ಜ್ವರ ಮತ್ತು ಗಂಧೆ ಪ್ರಕರಣಗಳು ವರದಿಯಾಗಿದ್ದು, ಎಲ್ಲ ತಾಲೂಕಿನ ಪ್ರಕರಣಗಳ ವರದಿ ಮಾಡಲು ತಾಲೂಕಾ ಮಟ್ಟದ ಅಧಿಕರಿಗಳಿಗೆ ಸೂಚನೆ ನೀಡಿದರು. ಜಿಲ್ಲೆಯಲ್ಲಿ 46 ಸಂಶಯಾತ್ಮಕ ಪ್ರಕರಣಗಳಲ್ಲಿ 4 ಪ್ರಕರಣಗಳು ದೃಡಪಟ್ಟಿವೆ. ದೃಡಪಟ್ಟ ಪ್ರದೇಶಗಳಲ್ಲಿ ವಿಶೇಷ ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ದಯಾನಂದ ಕರೆಣ್ಣವರ, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಕುಸುಮಾ ಮಾಗಿ, ಜಿಲ್ಲಾ ಆಯುಷ ಅಧಿಕಾರಿ ಡಾ.ಶೇಖರಯ್ಯ ಮಠ ಸೇರಿದಂತೆ ಆಯಾ ತಾಲೂಕಿನ ವೈದ್ಯಾಧಿಕಾರಿಗಳು ಉಪಸ್ಥಿರಿದ್ದರು.

ರಸ್ತೆ ಸುರಕ್ಷತಾ ಸಮಿತಿ ಸಭೆ

# ಸಂಚಾರಿ ನಿಯಮ ಪಾಲಿಸದಿದ್ದಲ್ಲಿ ನೋಟಿಸ್ :ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.13–ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನೀಡಿರುವ ಮಾಹಿತಿಯಂತೆ ನಗರದ ಒಟ್ಟು 22 ಸ್ಥಳಗಳಲ್ಲಿ ಈಗಾಗಲೇ ಎಎನ್‌ಪಿಆರ್ ಕ್ಯಾಮರಾ ಅಳವಡಿಸಲಾಗಿದ್ದು, ಇನ್ನು ಮುಂದೆ ಹೆಲ್ಮೆಟ್ ಧರಿಸದೇ, ಮೊಬೈಲ್ ಬಳಸುತ್ತ ವಾಹನ ಚಾಲನೆ, ಟ್ರಿಪಲ್ ರೈಡಿಂಗ್ ಸೇರಿದಂತೆ ಇನ್ನಿತರ ಸಂಚಾರಿ ನಿಯಮ ಪಾಲಿಸದಿದ್ದಲ್ಲಿ ನೇರವಾಗಿ ಅಂತವರ ಮನೆಗಳಿಗೆ ದಂಡ ಕಟ್ಟುವಂತೆ ನೋಟಿಸ್ ಕಳುಹಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹೇಳಿದರು. ಜಿಲ್ಲಾಧಿಕಾರಿ ಕಛೇರಿ ಸಭಾಂಗಣದಲ್ಲಿ ನಡೆದ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಯಾವುದೇ ರೀತಿಯ ರಸ್ತೆ ಅಪಘಾತಗಳಾದರೂ, ಅದಕ್ಕೆ ನಾವು, ನೀವುಗಳೆಲ್ಲ ಸೇರಿ ಸಮಾನರಾಗಿ ಕಾರಣರಾಗುತ್ತೇವೆ. ಆದ್ದರಿಂದ ರಸ್ತೆ ಸುರಕ್ಷತೆಗೆ ಅಧಿಕಾರಿಗಳು ಹೆಚ್ಚಿನ ಗಮನಹರಿಸಬೇಕು. ಅಲ್ಲದೇ ಶಾಲಾ ಸಮಯಕ್ಕನುಗುಣವಾಗಿ ಬೆಳಿಗ್ಗೆ ಮತ್ತು ಸಂಜೆ ಬಸ್ ಸೌಲಭ್ಯ ಹೆಚ್ಚಿಸುವಂತೆ, ಹೆಚ್ಚಿನ ವಿದ್ಯಾರ್ಥಿಗಳ ಸಂಚಾರದ ಮಾರ್ಗಕ್ಕೆ ಬಸ್ ಸೌಲಭ್ಯ ಒದಗಿಸಬೇಕು ಮತ್ತು ಶಾಲಾ ಕಾಲೇಜುಗಳಲ್ಲಿ ರಸ್ತೆ ಸುರಕ್ಷತೆ, ಸಂಚಾರಿ ನಿಯಮಗಳ ಬಗ್ಗೆ ಜಾಗೃತಿ ಮೂಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಮರನಾಥ್ ರೆಡ್ಡಿ ಮಾತನಾಡಿ, ಜಿಲ್ಲೆಯಲ್ಲಿ ಸುಮಾರು 5878 ಕಿ.ಮೀ ರಸ್ತೆ ಇದ್ದು, ಸುಮಾರು 5 ಲಕ್ಷಕ್ಕೂ ಹೆಚ್ಚಿನ ವಾಹನಗಳು ಸಂಚರಿಸುತ್ತಿವೆ.

ಈ ಹಿನ್ನಲೆಯಲ್ಲಿ ಹೆಚ್ಚಿನ ಮಟ್ಟದ' ಎಚ್ಚರಿಕೆ ಕ್ರಮಗಳನ್ನು ವಹಿಸಿದ್ದರೂ ಕೂಡ ಕಳೆದ ವರ್ಷಕ್ಕಿಂತ ಹೆಚ್ಚಿನ ಅಪಘಾತಗಳು ಈ ವರ್ಷ ಸಂಭವಿಸಿದ್ದು, ಅದರಲ್ಲೂ ಪ್ರತಿಶತ 95 ದ್ವಿಚಕ್ರ ವಾಹನಗಳೇ ಅಪಘಾತಕ್ಕಿಡಾಗಿರುವುದು ಕಂಡುಬಂದಿದೆ. ಈ ಅಪಘಾತಗಳಿಗೆಲ್ಲ ಸಂಚಾರಿ ನಿಯಮ ಸರಿಯಾಗಿ ಪಾಲನೆ ಮಾಡದಿರುವುದೇ ಪ್ರಮುಖ ಕಾರಣವಾಗಿದೆ. ಜಿಲ್ಲೆಯಲ್ಲಿ ಅಪಘಾತ ಪ್ರಮಾಣ ಇಳಿಕೆ ಮಾಡುವ ಉದ್ದೇಶದಿಂದ ಪದೇ ಪದೇ ಅಪಘಾತಗಳಾಗುತ್ತಿರುವ ಜಿಲ್ಲೆಯ ಒಟ್ಟು 21 ಪ್ರಮುಖ ಸ್ಥಳಗಳನ್ನು ಬ್ಲಾಕ್ ಸ್ಪಾಟ್‌ಗಳೆಂದು ಗುರುತಿಸಿಕೊಂಡಿದ್ದು ಅವುಗಳನ್ನು ವೈಜ್ಞಾನಿಕವಾಗಿ ಸರಿಪಡಿಸಬೇಕಾಗಿರುತ್ತದೆ ಎಂದರು. ಹಿಟ್ ಆಂಡ್ ರನ್ ಅಪಘಾತ ಪ್ರಕರಣಗಳಲ್ಲಿ ನೊಂದವರಿಗೆ ಪರಿಹಾರ ಒದಗಿಸುವ ಕೆಲಸವನ್ನು ಜಿಲ್ಲಾಡಳಿತದ ಸಹಕಾರದೊಂದಿಗೆ ಪೋಲೀಸ್ ಇಲಾಖೆ ಮಾಡುತ್ತಿದ್ದು, ರಾಜ್ಯದಲ್ಲೇ ಪ್ರಥಮ ಎಂಬುದು ಅತ್ಯಂತ ಶ್ಲಾಘನೀಯ ವಿಷಯವಾಗಿದೆ. ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಮೃತ ಮತ್ತು ಗಾಯಾಳು ಸೇರಿ ಒಟ್ಟು 191 ಪ್ರಕರಣಗಳು ದಾಖಲಾಗಿದ್ದು, 66 ಮಾರಣಾಂತಿಕ ಅಪಘಾತ ಮತ್ತು 31 ಮಾರಣಾಂತಿಕ ವಲ್ಲದ ಪ್ರಕರಣಗಳಲ್ಲಿ ಪರಿಹಾರಕ್ಕಾಗಿ ಜಿಐಬಿ ಕೌನ್ಸಿಲ್‌ಗೆ ಅರ್ಜಿ ಸಲ್ಲಿಸಲಾಗಿತ್ತು. ಮೃತರಿಗೆ ತಲಾ 2 ಲಕ್ಷ ಮತ್ತು ಗಾಯಾಳುಗಳಿಗೆ ತಲಾ 50 ಸಾವಿರದಂತೆ ಒಟ್ಟು 71 ಪ್ರಕರಣಗಳ ಸಂತ್ರಸ್ತರಿಗೆ ಪರಿಹಾರ ಧನ ಈಗಾಗಲೇ ಮಂಜೂರಾಗಿದೆ ಎಂದು ಹೇಳಿದರು. ಸಭೆಯಲ್ಲಿ ಅರಣ್ಯ ಸಂರಕ್ಷಣಾಧಿಕಾರಿ ರೂಟ್ರನ್ ಪಿ, ಬಾಗಲಕೋಟೆ ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ಲೋಕೋಪಯೋಗಿ ಇಲಾಖೆ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ನಾರಾಯಣ ಕುಲಕರ್ಣಿ, ಶಿಕ್ಷಣ ಇಲಾಖೆ ಡಿಡಿಪಿಐ ಹೆಚ್.ಜಿ.ಮಿರ್ಜಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಾನೂನು ವನದಲ್ಲಿ ಗಿಡ ನೆಟ್ಟ ನ್ಯಾ.ವಿಜಯ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.13–ನವನಗರದ ಜಿಲ್ಲಾ ಸಶಸ್ತ್ರ ಮೀಸಲು ಪಡೆ ಆವರಣದಲ್ಲಿ ಕಾನೂನು ವನ ನಿರ್ಮಾಣ ಮಾಡಲಾಗುತ್ತಿದ್ದು, ಆ ವನದಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎನ್.ವ್ಹಿ.ವಿಜಯ ಗಿಡ ನೆಟ್ಟು ಅದಕ್ಕೆ ನೀರುಣಿಸುವ ಮೂಲಕ ಚಾಲನೆ ನೀಡಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಮತ್ತು ಅರಣ್ಯ ಇಲಾಖೆ ಸಹಯೋಗದಲ್ಲಿ ನಿರ್ಮಾಣ ಮಾಡಲಾದ ಕಾನೂನು ವನದಲ್ಲಿ ನೀಮ್, ನೆರಳೆ, ಬಿಲ್ವಾ, ಸ್ಪತೆ–ೂಡಿಯಾ, ಗೋಣಿ, ಶ್ರೀಗಂಧ, ಆಕಾಶ ಮಲ್ಲಿಗೆ, ಪಂಗಾಮಿಯಾ, ಪಿನ್ನಾಮಿಯಾ, ಪಿನ್ನಾಟಾ ಹಾಗೂ ಶ್ರೀಗಂಧ ಸೇರಿದಂತೆ ವಿವಿಧ ಮರಗಳನ್ನು ಬೆಳೆಸುವ ಉದ್ದೇಶ ಹೊಂದಲಾಗಿದೆ.

ಈ ವನದಲ್ಲಿ ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ರುಥ್ರೇನ್ ಪಿ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಸೇರಿದಂತೆ ಇತರ ಅಧಿಕಾರಿಗಳು ಒಂದೊಂದು ವಿಧದ ಗಿಡಗಳನ್ನು ನೆಟ್ಟು ನೀರುಣಿಸಿದರು.

ಕಾರ್ಯಕ್ರಮದಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಸಿ.ಜಿ.ಮಿರ್ಜಿ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ರೂಪಾ ವಿ.ಕೆ ಉಪಸ್ಥಿತರಿದ್ದರು.

# ಜೂ.16 ಪ್ರಧಾನ ಅಂಚೆ ಕಚೇರಿ ವಹಿವಾಟು ಇಲ್ಲ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.13–ಐಟಿ 2.0 ಅಡಿಯಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸುತ್ತಿರುವ ಹಿನ್ನೆಲೆಯಲ್ಲಿ ಬಾಗಲಕೋಟೆ ಪ್ರಧಾನ ಅಂಚೆ ಕಚೇರಿ ಮತ್ತು ಅದರ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪ ಅಂಚೆ ಕಚೇರಿಗಳಲ್ಲಿ ಜೂನ್ 16 ರಂದು ಯಾವುದೇ ರೀತಿಯ ವಹಿವಾಟು ಇರುವದಿಲ್ಲವೆಂದು ಬಾಗಲಕೋಟೆ ಅಂಚೆ ವಿಭಾಗದ ಅಂಚೆ ಅಧೀಕ್ಷಕ ಎಚ್.ಬಿ.ಹಸಬಿ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟಣೆಯಲ್ಲಿ ಈ ವಿಷಯ ತಿಳಿಸಿರುವ ಅವರು, ಅಮೀನಗಡ, ಬಾದಾಮಿ ಎಕ್ಸಟೇಶನ್, ಬಾದಾಮಿ ಎಂ.ಡಿ.ಜಿ, ಬಾಗಲಕೋಟೆ ಅಲೋಕುದ್ಯೋಗ, ಬಾಗಲಕೋಟೆ ಬಿ.ಎಚ್.ಎಸ್, ಬಾಗಲಕೋಟೆ ಜಿಲ್ಲಾಡಳಿತ ಕಾಂಪ್ಲೆಕ್ಸ್, ಬಾಗಲಕೋಟೆ ಎಚ್.ಓ, ನವನಗರ, ಬಾಗಲಕೋಟೆ ಯು.ಎಚ್.ಎಸ್ ಬೇಲೂರ, ಬೇವೂರ, ಗದ್ದನಕೇರಿ ಕ್ರಾಸ್, ಗುಡೂರ, ಗುಳೇದಗುಡ್ಡ, ಹುನಗುಂದ ಬಜಾರ, ಹುನಗುಂದ, ಇಳಕಲ್ಲ, ಇಳಕಲ್ಲ ಅಲಾಂಪೂರ ಪೇಟ, ಕಮತಗಿ, ಕಟಗೇರಿ, ಕೆ–ರೂರ, ಕೂಡಲಸಂಗಮ, ಕುಳಗೇರಿ ಕ್ರಾಸ್, ರಾಂಪೂರ, ಶಿರೂರ ಮತ್ತು ಸುಳೇಭಾವಿ ಅಂಚೆ ಕಚೇರಿಗಳು ಜೂನ್ 16 ರಂದು ಯಾವುದೇ ವಹಿವಾಟು ನಡೆಸುವುದಿಲ್ಲವೆಂದು ತಿಳಿಸಿದ್ದಾರೆ.

ಜಮಖಂಡಿ ಪ್ರಧಾನ ಅಂಚೆ ಕಚೇರಿ ಮತ್ತು ಅದರ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪ ಅಂಚೆ ಕಚೇರಿಗಳು ಎಂದಿನಂತೆ ಕಾರ್ಯನಿರ್ವಹಿಸುತ್ತವೆ. ಗ್ರಾಹಕರು ಸಹಕರಿಸಬೇಕೆಂದು ಮನವಿ ಮಾಡಿದ್ದಾರೆ.

# ಬಾಲ ಪುರಸ್ಕಾರ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.13–ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ, ಭಾರತ ಸರ್ಕಾರದ ವತಿಯಿಂದ 2025ನೇ ಸಾಲಿನ ರಾಷ್ಟ್ರೀಯ ಪ್ರಧಾನಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗಾಗಿ ರಾಷ್ಟ್ರಾದ್ಯಂತ ಅರ್ಜಿಗಳನ್ನು ಆಹ್ವಾನಿಸಿದ್ದು, ಗ್ರಾಮ ಪಂಚಾಯತಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಹೆಚ್ಚಿನ ಪ್ರಚಾರ ಮಾಡುವ ಸಂಬಂಧ ಜುಲೈ.31 ರೊಳಗೆ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸುವಂತೆ ಮಕ್ಕಳ ರಕ್ಷಣಾ ನಿರ್ದೇಶನಾಲಯ ನಿರ್ದೇಶಕರು ತಿಳಿಸಿದ್ದಾರೆ.

ಆದ್ದರಿಂದ ಬಾಗಲಕೋಟೆ ಜಿಲ್ಲೆಯಲ್ಲಿ ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ ಹಾಗೂ ಕ್ರೀಡೆ, ಸಮಾಜ ಸೇವೆ, ತಂತ್ರಜ್ಞಾನ, ಪರಿಸರ ಸಂರಕ್ಷಣೆ, ಕಲೆ ಮತ್ತು ಸಂಸ್ಕೃತಿ ಮತ್ತು ನೂತನ ಆವಿಷ್ಕಾರಗಳನ್ನು ಮಾಡಿ, ಉತ್ತಮ ಸಾಧನೆ ಮಾಡಿದ ಮಕ್ಕಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ತಿಳಿಸಿದೆ. ಮುಂದುವರೆದು ಜುಲೈ.31ಕ್ಕೆ ಅನ್ವಯವಾಗುವಂತೆ 5ವರ್ಷ ಮೇಲ್ಪಟ್ಟ ಹಾಗೂ 18 ವರ್ಷದೊಳಗಿರುವ ಸಾಧನೆ ಮಾಡಿರುವ ಮಕ್ಕಳು ರಾಷ್ಟ್ರೀಯ ಪ್ರಧಾನಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿ 2025ಕ್ಕೆ ಅರ್ಜಿಯನ್ನು ಸಲ್ಲಿಸಲು ಅರ್ಹರಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ ჿಣಣಠಿ://ಚಿತಿಚಿಡಿಜ.ರಿಠಡಿ.ಟಿ ಸಂಪರ್ಕಿಸಲು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಬಾಗಲಕೋಟೆ ಇವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಶಾಲೆ, ಅಂಗನವಾಡಿಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಿ–ಕುರೇರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.13–ಜಿಲ್ಲೆಯ ಬಾದಾಮಿ ಹಾಗೂ ಗುಳೇದಗುಡ್ಡ ತಾಲೂಕಿನ ವಿವಿಧ ಶಾಲೆ ಮತ್ತು ಅಂಗನವಾಡಿ ಕೇಂದ್ರಗಳಿಗೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಭೇಟಿ ನೀಡಿ ಮೂಲಭೂತ ಸೌಲಭ್ಯಗಳನ್ನು ಪರಿಶೀಲಿಸಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡುವಂತೆ ಸೂಚನೆ ನೀಡಿದರು.

ಬಾದಾಮಿ ತಾಲೂಕಿನ ಮಾಲಗಿ ಗ್ರಾಮದಲ್ಲಿ ಅಂಗನವಾಡಿ ಕಟ್ಟಡ ಕಾಮಗಾರಿ, ಉಗಲವಾಟ ಗ್ರಾಮದ ಬದು ನೀರು ನಿರ್ವಹಣೆ ಕಾಮಗಾರಿ, ಕುಳಗೇರಿ ಕ್ರಾಸ್‌ನಲ್ಲಿ ಎಂ.ಆರ್.ಎಫ್ ಹಾಗೂ ಘನತಾಜ್ಯ ನಿರ್ವಹಣೆ ಕಾಮಗಾರಿ ಹಾಗೂ ಗುಳೇದಗುಡ್ಡ ತಾಲೂಕಿನ ತೋಗುಣಸಿ ಗ್ರಾಮದ ನೀರು ಸಂಸ್ಕರಣಾ ಘಟಕದ ಕಾಮಗಾರಿಯನ್ನು ವೀಕ್ಷಣೆ ಮಾಡಿ ಕಾಮಗಾರಿ ಗುಣಮಟ್ಟದಿಂದ ಕೂಡಿರಬೇಕು. ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಸೂಚನೆ ನೀಡಿದರು.

ಆಡಗಲ್ಲ ಸರಕಾರಿ ಪ್ರೌಢಶಾಲೆಯ ಕಂಪೌಂಡ್ ಕಾಮಗಾರಿಯನ್ನು ಪರಿಶೀಲಿಸಿದರು. ಕುಳಗೇರಿ ಕ್ರಾಸ್‌ನಲ್ಲಿರುವ ನವೋದಯ ಶಾಲೆ ಮತ್ತು ಆಡಗಲ್ಲ ಸರಕಾರಿ ಪ್ರೌಢಶಾಲೆಗೆ ಭೇಟಿ ನೀಡಿ ಮಕ್ಕಳ ಕಲಿಕೆಯ ಬಗ್ಗೆ ಪರೀಕ್ಷೆ ಮಾಡಿದರು. ಮಕ್ಕಳ ಬುದ್ದಿಮಟ್ಟವನ್ನು ಪ್ರತ್ಯೇಕವಾಗಿ ಗಮನಿಸಿ ಬೋಧನೆ ಮಾಡಲು ಶಿಕ್ಷಕರಿಗೆ ಸೂಚಿಸಿದರು. ನಂತರ ಮಕ್ಕಳೊಂದಿಗೆ ಸಂವಾದ ನಡೆಸಿ ಕುಂದು ಕೊರತೆಗಳನ್ನು ಆಲಿಸಿದರು. ಅಲ್ಲದೇ ಬಿಸಿ ಊಟದ ಕೋಣೆಗೆ ತೆರಳಿ ಆಹಾರದ ಗುಣಮಟ್ಟವನ್ನು ಪರಿಶೀಲಿಸಿದರು. ದಾಸ್ತಾನು ಕೋಣೆಗೆ ತೆರಳಿ ಆಹಾರ ಧಾನ್ಯಗಳ ಪರಿಶುದ್ದತೆಯನ್ನು ಗಮನಿಸಿದರು.

ಬಾದಾಮಿ ತಾಪಂ ಕಾಯಾನಿರ್ವಾಹಕ ಅಧಿಕಾರಿ ಸುರೇಶ ಕೊಕ್ಕರೆ, ಗುಳೇದಗುಡ್ಡ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಿಕಾರ್ಜುನ ಬಡಿಗೇರ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರ ಆಕಾಶ ವಂದೆ, ಪಂಚಾಯತರಾಜ್ ಇಂಜಿನೀಯರಿಂಗ್ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಅಶೋಕ ತೋಪಲಕಟ್ಟಿ ಸೇರಿದಂತೆ ಇತರರು ಇದ್ದರು.

# ಬಾಲ ಕಾರ್ಮಿಕ ಪದ್ಧತಿ ವಿರೋಧಿ ಜಾಗೃತಿ ಜಾಥಾ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.13–ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ನಿಮಿತ್ಯ ನಗರದ ಬಿ.ವಿ.ವಿ ಸಂಘದ ಸಜ್ಜಲಶ್ರೀ ನರ್ಸಿಂಗ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಜಾಗೃತಿ ಜಾಥಾ ನಡೆಸಿದರು. ಮಹಾವಿದ್ಯಾಲಯದ ಚಿಕ್ಕಮಕ್ಕಳ ಆರೋಗ್ಯ ಶುಶ್ರೂಷಾ ವಿಭಾಗದಿಂದ ಹಮ್ಮಿಕೊಂಡ ಈ ಜಾಗೃತಿ ಜಾಥಾ ಜಿಲ್ಲಾಡಳಿತ ಭವನದಿಂದ ಎಲ್.ಆಯ್.ಸಿ. ಸರ್ಕಲ್‌ವರೆಗೆ ನಡೆಯಿತು.

ನಂತರ ಪ್ರಾಚಾರ್ಯ ಡಾ.ದಿಲೀಪ ನಾಟೇಕರ ಮಾತನಾಡಿ, ಬಾಲ ಕಾರ್ಮಿಕ ಪದ್ಧತಿ ಒಂದು ಸಂಕೀರ್ಣ ಸಮಸ್ಯೆಯಾಗಿದ್ದು, ಅದನ್ನು ಪರಿಹರಿಸಲು ಸಾಮೂಹಿಕ ಪ್ರಯತ್ನದ ಅಗತ್ಯವಿದೆ. ಮಕ್ಕಳ ಹಕ್ಕುಗಳನ್ನು ರಕ್ಷಿಸುವ ನೀತಿಗಳನ್ನು ಉತ್ತೇಜಿಸಲು ನಾವು ಒಟ್ಟಾಗಿ ಕೆಲಸ ಮಾಡಬೇಕೆಂದರು.

ಮಹಾವಿದ್ಯಾಲಯದ ಚಿಕ್ಕಮಕ್ಕಳ ಆರೋಗ್ಯ ಶುಶ್ರೂಷಾ ವಿಭಾಗದ ಪ್ರಾಧ್ಯಾಪಕ ಡಾ. ಪ್ರಶಾಂತ ಕುಲಕರ್ಣಿ, ಸಹ ಪ್ರಾಧ್ಯಾಪಕ ಸಂತೋಷ ಸಜ್ಜನ ಹಾಗೂ ಉಪನ್ಯಾಸಕರಾದ ಶ್ರೀದೇವಿ ತೇಲಿ, ರೇಣುಕಾ ಜಾಲಿಹಾಳ, ರಾಜಶೇಖರ ಕಾಬನೂರ ಉಪಸ್ಥಿತರಿದ್ದರು.

# ಪ್ರಧಾನಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯ ಸದುಪಯೋಗ ಪಡೆಯಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ,ಜೂನ್.13––2025–26 ನೇ ಸಾಲಿನ ಮುಂಗಾರು ಹಂಗಾಮಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯನ್ನು ಅನುಷ್ಠಾನಗೊಳಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಅನುಮೋದನೆಯನ್ನು ನೀಡಲಾಗಿದೆ. ಈ ಯೋಜನೆಯಡಿ ಬೆಳೆ ವಿಮಾ ಯೋಜನೆ ರೈತ ಸಮುದಾಯಕ್ಕೆ ಉಪಯುಕ್ತವಾದ ಯೋಜನೆಯಾಗಿರುವುದರಿಂದ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಈ ಯೋಜನೆಯಲ್ಲಿ ಭಾಗವಹಿಸಿ ಲಾಭ ಪಡೆಯಬಹುದಾಗಿದೆ ಎಂದು ಬೀದರ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಯೋಜನೆಗೆ ಒಳಪಡುವ ವಿವಿಧ ಬೆಳೆಗಳಿಗೆ ಸಾಲ ಪಡೆಯುವ ಮತ್ತು ಬೆಳೆ ಸಾಲ ಪಡೆಯದ ರೈತರು ಪಾಲ್ಗೊಳ್ಳಲು ಕೊನೆಯ ದಿನಾಂಕ: 31–07–2025 ಹಾಗೂ ಸೂರ್ಯಕಾಂತಿ (ಮ.ಆ) ಬೆಳೆಗೆ ದಿನಾಂಕ:16–08–2025 ಆಗಿರುತ್ತದೆ.

ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯನ್ನು ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಮುಖ್ಯ ಬೆಳೆಗಳಿಗೆ ಗ್ರಾಮ ಪಂಚಾಯತಿ/ನಗರ ಸ್ಥಳೀಯ ಸಂಸ್ಥೆ ಮಟ್ಟದಲ್ಲಿ ತೆ–ೂಗರಿ (ಮಳೆಯಾಶ್ರಿತ(ಮ.ಆ)) ಹಾಗೂ ಸೋಯಾಅವರೆ (ಮ.ಆ) ಬೆಳೆಗಳು ಮತ್ತು ಇತರೆ ಬೆಳೆಗಳಾದ ಹೆಸರು (ಮ.ಆ), ಸೂರ್ಯಕಾಂತಿ (ಮ.ಆ), ಉದ್ದು (ಮ.ಆ), ಮುಸುಕಿನ ಜೋಳ (ಮ.ಆ), ಶೇಂಗಾ (ಮ.ಆ), ಜೋಳ (ಮ.ಆ), ಎಳ್ಳು (ಮ.ಆ), ಸಜ್ಜೆ (ಮ.ಆ), ಸೋಯಾಅವರೆ (ನೀರಾವರಿ(ನೀ)), ಭತ್ತ (ನೀ & ಮ.ಆ), ಹತ್ತಿ (ಮ.ಆ) ಬೆಳೆಗಳನ್ನು ವಿವಿಧ ತಾಲ್ಲೂಕಿಗೆ ನಿಗದಿಪಡಿಸಿ, ಹೋಬಳಿ ಮಟ್ಟಕ್ಕೆ ಅನುಷ್ಠಾನಗೊಳಿಸಲು "ಯೂನಿವರ್ಸಲ್ ಸೋಂಪೊ ಜನರಲ್ ಇನ್‌ಶ್ಯೂರೆನ್ಸ್ ಕಂಪನಿ ಲಿಮಿಟೆಡ್" ವಿಮಾ ಸಂಸ್ಥೆಯನ್ನು ನಿಗದಿಪಡಿಸಲಾಗಿದೆ.

ಬೆಳೆಸಾಲ ಪಡೆದ ರೈತರಿಗಾಗಿ ಆಪ್ಟಿಂಗ–ಔಟ ಮತ್ತು ಆಪ್ಟಿಂಗ–ಇನ್ ಎಂಬ ಅವಕಾಶವನ್ನು ರೈತರಿಗೆ ನೀಡಲಾಗಿದೆ. ಇದರಲ್ಲಿ ಬೆಳೆಸಾಲ ಪಡೆದ ರೈತರು ಬೆಳೆವಿಮೆ ಮಾಡಿಸುವುದು ಕಡ್ಡಾಯವಾಗಿರುವುದಿಲ್ಲ. ಬೆಳೆವಿಮೆ ಮಾಡಲು ಇಚ್ಛಿಸದ ಸಾಲ ಪಡೆದಂತಹ ರೈತರು ಬೆಳೆವಿಮೆ ಮಾಡಿಸಲು ನಿಗಧಿಪಡಿಸಿರುವ ಅಂತಿಮ ದಿನಾಂಕಕ್ಕಿಂತ 7 ದಿನದ ಮುಂಚಿತವಾಗಿ ಸಂಬಂಧಪಟ್ಟ ಬ್ಯಾಂಕಿಗೆ ಆಪ್ಟಿಂಗ–ಔಟ ಎಂಬ ನಮೂನೆಯಲ್ಲಿ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಸದರಿ ಅರ್ಜಿ ನೀಡಿದ ರೈತರನ್ನು ವಿಮೆ ಯೋಜನೆಯಿಂದ ಬ್ಯಾಂಕ್‌ನವರು ಹೊರಗಿಡಬೇಕಾಗುತ್ತದೆ. ಸಾಲ ಪಡೆದಿರುವ ರೈತರ ಪೈಕಿ ಆಪ್ಟಿಂಗ–ಔಟ ನಮೂನೆ ನೀಡದ ಉಳಿದ ಎಲ್ಲಾ ರೈತರನ್ನು ವಿಮಾ ಯೋಜನೆಯಡಿ ತರುವುದು ಕಡ್ಡಾಯವಾಗಿರುತ್ತದೆ.

ಬೆಳೆ ಸಾಲ ಪಡೆಯದ ರೈತರು ಅರ್ಜಿಯೊಂದಿಗೆ ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ, ಆಧಾರ ಸಂಖ್ಯೆ ಜೊಡಿಸಿದ ಬ್ಯಾಂಕ್ ಖಾತೆ ವಿವರ ಮತ್ತು ಆಧಾರ ಕಾರ್ಡ್ ಪ್ರತಿಯನ್ನು ಸಂಬಂಧಿಸಿದ ಬ್ಯಾಂಕ ಅಥವಾ ಸಿ.ಎಸ್.ಸಿ ಕೇಂದ್ರಗಳಿಗೆ ಒದಗಿಸಿ ನೋಂದಣಿ ಮಾಡಿಸಬಹುದು. ರೈತರು ನೋಂದಣಿಗಾಗಿ ಕಡ್ಡಾಯವಾಗಿ ಈಖಿಗಿಖಖಿಖ ಖಆ (ಈಖಆ) ಹೊಂದಿರಬೇಕು. ಹೆಚ್ಚಿನ ವಿವರಗಳಿಗೆ ಸ್ಥಳೀಯ ವಾಣಿಜ್ಯ/ ಗ್ರಾಮೀಣ/ ಸಹಕಾರಿ/ ಬ್ಯಾಂಕುಗಳನ್ನು/ಸಾರ್ವಜನಿಕ ಸೇವಾ ಕೇಂದ್ರ ಅಥವಾ ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರ ಅಥವಾ ಸಂಬಂಧಪಟ್ಟ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗಳಿಗೆ

# ಆಧಾರ ಸೀಡಿಂಗ್, ಇ–ಕೆವೈಸಿ ಕಡ್ಡಾಯ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.13–ಜಿಲ್ಲೆಯಲ್ಲಿರುವ 745 ನ್ಯಾಯಬೆಲೆ ಅಂಗಡಿಗಳಲ್ಲಿ ಪಿಒಎಸ್ ವ್ಯವಸ್ಥೆ ಅಳವಡಿಸಿ ಪಡಿತರ ವಿತರಿಸಲಾಗುತ್ತಿದ್ದು, ಅದರಂತೆ ಜಿಲ್ಲೆಯಲ್ಲಿ ತಾಲೂಕುವಾರು, ಬಾದಾಮಿ (1473), ಬಾಗಲಕೋಟೆ (3072), ಬೀಳಗಿ (393), ಹುನಗುಂದ (936), ಜಮಖಂಡಿ (943), ಮುಧೋಳ (3437), ಇಳಕಲ್ (1821), ಗುಳೇದಗುಡ್ಡ (518), ರಬಕವಿ–ಬನಹಟ್ಟಿ (3485) ಸೇರಿದಂತೆ ಒಟ್ಟು 16078 ಪಡಿತರ ಚೀಟಿಯಲ್ಲಿನ ಸದಸ್ಯರ ಕಳೆದ 4–5 ವರ್ಷಗಳವರೆಗೆ ಅವಕಾಶ ನೀಡಿದರೂ ಸಹ ಈವರೆಗೂ ಇ–ಕೆವೈಸಿ ಮಾಡಿಸಿಕೊಂಡಿರುವುದಿಲ್ಲ.

ಇ–ಕೆವೈಸಿ ಮಾಡಿಸಿಕೊಳ್ಳಲು ಬಾಕಿ ಇರುವ ಸದಸ್ಯರುಗಳು ಜೂ.30 ರೊಳಗಾಗಿ ತಮಗೆ ಸಂಬಂಧಿಸಿದ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ ಯಾವುದೇ ರೀತಿಯ ಶುಲ್ಕ ನೀಡದೇ ಆಧಾರ ಇ–ಕೆವೈಸಿ (ಬಯೋಮೆಟ್ರಿಕ್) ಮಾಡಿಸಿಕೊಳ್ಳಬೇಕು.

ಇ–ಕೆವೈಸಿ ಮಾಡಿಸಿಕೊಳ್ಳದೇ ಇರುವ ಪಡಿತರ ಚೀಟಿ ಸದಸ್ಯರುಗಳ ಹೆಸರುಗಳು ಪಡಿತರ ಚೀಟಿಯಲ್ಲಿ ಕಡಿಮೆಯಾಗುವ ಸಾಧ್ಯತೆಗಳಿರುತ್ತವೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಕ್ತಿ ಕಾಣೆ: ಪತ್ತೆಗಾಗಿ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ,ಜೂನ್.13–ಬೀದರನ ಒಂಟಿಗುಡಸಿತಾಂಡಾದ ನಿವಾಸಿಯಾದ ಕಿಶನ ಲಕ್ಷ್ಮಣ ರಾಠೋಡ (50) ಇವರು ದಿನಾಂಕ: 07–06–2025 ರಂದು ಮನೆಯಿಂದ ಹೊರಗಡೆ ಹೋಗಿ ಕಾಣೆಯಾಗಿರುತ್ತಾನೆ. ಕಾಣೆಯಾದ ವ್ಯಕ್ತಿಯು 5 ಫೀಟ್, 2 ಇಂಚ್ ಎತ್ತರ ಇದ್ದು, ದುಂಡುಮುಖ, ಸಾಧಾರಣ ಮೈಕಟ್ಟು ಬಿಳಿ ಮೈಬಣ್ಣ ಹೊಂದಿದ್ದು, ಮೈಮೇಲೆ ಒಂದು ಕೆಂಪು ಬಣ್ಣದ ಲುಂಗಿ ಮತ್ತು ಒಂದು ಬಿಳಿ ಬಣ್ಣದ ಶರ್ಟ ಧರಿಸಿರುವ ಇತನು ಕನ್ನಡ, ತೆಲಗು, ಹಿಂದಿ ಮತ್ತು ಲಂಬಾಣಿ ಭಾಷೆಯಲ್ಲಿ ಮಾತನಾಡುತ್ತಾನೆ. ಈ ಕಾಣೆಯಾದ ವ್ಯಕ್ತಿಯ ಬಗ್ಗೆ ಯಾರಿಗಾದರೂ ಮಾಹಿತಿ ಸಿಕ್ಕಲ್ಲಿ ಪೊಲೀಸ ಕಂಟ್ರೋಲ ರೂಂ ಬೀದರ ದೂರವಾಣಿ ಸಂಖ್ಯೆ: 08482–226704, ಪೊಲೀಸ ನೀರಿಕ್ಷಕರು ಚಿಟಗುಪ್ಪಾ ವೃತ್ತ ಮೊಬೈಲ್ ಸಂಖ್ಯೆ: 9480803434, ಪೊಲೀಸ ಉಪನಿರೀಕ್ಷಕರು ಬೇಮಳಖೇಡಾ ಠಾಣೆ ಮೊಬೈಲ್ ಸಂಖ್ಯೆ: 9480803454, ಬೇಮಳಖೇಡಾ ಪೊಲೀಸ ಠಾಣೆ ದೂರವಾಣಿ ಸಂಖ್ಯೆ: 08482–200449 ಗೆ ಸಂಪರ್ಕಿಸುವಂತೆ ಬೇಮಳಖೇಡಾ ಪೊಲೀಸ್ ಠಾಣೆ–ಯ ಅರಕ್ಷಕ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಳೆ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬೀದರ,ಜೂನ್.13 (ಕರ್ನಾಟಕ ವಾರ್ತೆ):–110/33–11ಕೆವಿ ಉಪ ವಿತರಣಾ ಕೇಂದ್ರ, ಕವಿಪ್ರನಿನಿ ಹಳ್ಳಿಖೇಡ (ಬಿ) ವ್ಯಾಪ್ತಿಯಲ್ಲಿ ಬರುವ 110ಕೆವಿ ಹಳ್ಳಿಖೇಡ (ಬಿ) ವಿದ್ಯುತ್ ಉಪ ಕೇಂದ್ರಗಳಲ್ಲಿ ತುರ್ತು ಕೆಲಸದ ಪ್ರಯುಕ್ತ ಜೂನ್.15 ರಂದು ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ 33ಕೆವಿ ಕೆಪಿ ಮೀಲ್ ಲಿಮಿಟೆಡ್ ಮತ್ತು ಸುತ್ತಲಿನ ಗ್ರಾಮಾಂತರ ಪ್ರದೇಶಗಳಾದ 11ಕೆವಿ ಬೇನಚಿಂಚೋಳಿ, ಬಿ.ಎಸ್.ಎಸ್.ಕೆ.ಡಾಕುಳ್ಗಿ, ಸಿಂದಬಂದಗಿ, ನಮದಾಪುರ್, ಮಲ್ಕಾಪುರ ವಾಡಿ, ಅಲ್ಲೂರ ಮತ್ತು ಎಲ್.ಐ.ಎಸ್. ಅತಿವಾಲ್, ಹಳ್ಳಿಖೇಡ (ಬಿ) ಮಾರ್ಗದ ಗ್ರಾಮೀಣ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಕಾರಣ ಸಾರ್ವಜನಿಕರು ಸಹಕರಿಸಬೇಕೆಂದು ಹುಮನಾಬಾದ ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೋಳ ಮಾರಾಟ ಮಾಡಲು ಜೂ.30 ಕೊನೆಯ ದಿನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.13–ಜಿಲ್ಲೆಯಲ್ಲಿ ಮುಂಗಾರು ಮತ್ತು ಹಿಂಗಾರು ಋತುವಿನಲ್ಲಿ ಬೆಳೆದ ಜೋಳವನ್ನು ಖರೀದಿ ಮಾಡಲು ಖರೀದಿ ಕೇಂದ್ರಗಳನ್ನು ಪ್ರಾರಂಭ ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಈಗಾಗಲೇ ನೋಂದಣಿ ಮಾಡಿದ ರೈತರು ನೋಂದಾಯಿತ ಖರೀದಿ ಕೇಂದ್ರಗಳಿಗೆ ಭೇಟಿ ನೀಡಿ ಜೂ.30 ರೊಳಗಾಗಿ ಜೋಳ ಮಾರಾಟ ಮಾಡಬೇಕು. ಜೋಳದ ಖರೀದಿ ಅವಧಿಯು ಜೂ.30 ಕ್ಕೆ ಕೊನೆ ದಿನವಾಗಿದ್ದು, ಮುಂಗಾರು ಮತ್ತು ಹಿಂಗಾರು ಋತುವಿನಲ್ಲಿ ಜೋಳ ಮಾರಾಟ ಮಾಡಲು ನೋಂದಣಿ ಮಾಡಿದ ರೈತರು ಸಂಬಂಧಪಟ್ಟ ಖರೀದಿ ಕೇಂದ್ರಗಳಲ್ಲಿ ಮಾರಾಟ ಮಾಡಿ ಗ್ರೇನ್ ವೋಚರ್ ಪಡೆದುಕೊಳ್ಳಬೇಕು.

ಖರೀದಿಯಾದ ಜೋಳವನ್ನು ಜೋಳ ಉಪಯೋಗಿಸುವ ಜಿಲ್ಲೆಗಳಿಗೆ ಪಡಿತರ ವಿತರಣೆಗೆ ಹಂಚಿಕೆ ನೀಡಲಾಗುವುದು. ಈ ನಿಟ್ಟಿನಲ್ಲಿ ಶೀಘ್ರವಾಗಿ ನೋಂದಾಯಿತ ರೈತರು ಜೋಳವನ್ನು ಖರೀದಿ ಕೇಂದ್ರಗಳಲ್ಲಿ ಮಾರಾಟ ಮಾಡಿ ಸರ್ಕಾರದ ಈ ಯೋಜನೆಯ ಪ್ರಯೋಜನ ಪಡೆಯಬಹುದಾಗಿದೆ. ನಂತರ ಖರೀದಿ ಅವಧಿಗೆ ಅವಕಾಶವಿರುವುದಿಲ್ಲ.





# ವಿಮಾನ ದುರಂತ: ವಿಮಾನಯಾನ ಸಚಿವರ ರಾಜೀನಾಮೆಗೆ ಸಚಿವ ಖಂಡ್ರೆ ಒತ್ತಾಯ

ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ:ಜೂ.13:ಅಹಮದಾಬಾದ್ ವಿಮಾನ ದುರಂತ

ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ವಿಮಾನಯಾನ ಖಾತೆ ಸಚಿವ ರಾಮ ಮೋಹನ್ ನಾಯ್ಡು ಕೂಡಲೇ ರಾಜೀನಾಮೆ ನೀಡಬೇಕು ಎಂದು

ಸಚಿವ ಈಶ್ವರ ಖಂಡ್ರೆ ಒತ್ತಾಯಿಸಿದರು.ನಗರದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ಈ ವಿಮಾನ ದುರಂತಕ್ಕೆ ಕೇಂದ್ರ ಸರ್ಕಾರ ಹೊಣೆ ಹೊತ್ತು ಕೂಡಲೇ ಕೇಂದ್ರ ವಿಮಾನಯಾನ ಸಚಿವರು ರಾಜೀನಾಮೆ ನೀಡಬೇಕು. ಇದು ಒಂದು ಅತಿದೊಡ್ಡ ದುರಂತವಾಗಿದೆ. ಅತ್ಯಂತ ನೋವಿನ ಸಂಗತಿಯಾಗಿದೆ. ಇಂತಹ

ದುರಂತ ನಡೆಯದಂತೆ ಸರ್ಕಾರ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು. ಈ ದುರಂತದ ಬಗ್ಗೆ ನಿಷ್ಪಕ್ಷಪಾತ ತನಿಖೆ

ಕೈಗೊಂಡು ವರದಿ ಜನರ ಮುಂದೆ ಇಡಬೇಕು. ಆರ್‌ಸಿಬಿ ಗೆಲುವಿನ ಸಂಭ್ರಮದ ವೇಳೆ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜೀನಾಮೆ ಕೇಳುವವರು ಕುಂಭಮೇಳದ ಕಾಲ್ತುಳಿತಕ್ಕೂ

ರಾಜೀನಾಮೆ ಕೇಳಬೇಕು. ಸಾವಿನಲ್ಲಿ ರಾಜಕೀಯ ಮಾಡಬಾರದು ಬಿಜೆಪಿಗೆ ಟಾಂಗ್ ಕೊಟ್ಟರು.ದುರಂತದ ಬೆನ್ನಲ್ಲೇ ಟಾಟಾ ಸಮೂಹ

ಪ್ರತಿ ಮೃತ ವ್ಯಕ್ತಿಯ ಸಂತ್ರಸ್ತ ಕುಟುಂಬಕ್ಕೆ 1 ಕೋಟಿ ರೂ. ಪರಿಹಾರ ಘೋಷಿಸಿದೆ.

ಹಾಗಂತ ಸಂತ್ರಸ್ತ ಕುಟುಂಬಗಳಿಗೆ ಇಂತಹ ದುರಂತದ ಬಳಿಕ

ಎಷ್ಟೇ ಕೋಟಿ ಕೊಟ್ಟರೂ ಕಡಿಮೆ ಎಂದರು.

# ಆರೋಗ್ಯ ಆವಿಷ್ಕಾರ ಕಾರ್ಯಕ್ರಮಕ್ಕೆ ಸಿ.ಎಂ.: ಅಂತಿಮ ಸಿದ್ಧತಾ ಕಾರ್ಯ ವೀಕ್ಷಿಸಿದ ಸಚಿವ ಶರಣಬಸಪ್ಪ ದರ್ಶನಾಪುರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ,ಜೂ.13: ಕೆ.ಕೆ. ಆರ್.ಡಿ.ಬಿ ಮಂಡಳಿಯ ಆರ್ಥಿಕ ನೆರವಿನೊಂದಿಗೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅರೋಗ್ಯ ಸಂಸ್ಥೆಗಳ ಬಲವರ್ಧನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ಸುಮಾರು 440 ಕೋಟಿ ರೂ. ಮೊತ್ತದ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮಾಡಲಿರುವ ಹಿನ್ನೆಲೆಯಲ್ಲಿ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಅವರು ಶುಕ್ರವಾರ ಇಲ್ಲಿನ ಜಿಲ್ಲಾ ಕ್ರೀಡಾಂಗಣಕ್ಕೆ ಭೇಟಿ ನೀಡಿ ಕಾರ್ಯಕ್ರಮದ ಅಂತಿಮ ಸಿದ್ಧತಾ ಕಾರ್ಯ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಶರಣಬಸಪ್ಪ ದರ್ಶನಾಪೂರ, ಮುಖ್ಯಮಂತ್ರಿಗಳ ಜೊತೆಗೆ ರಾಜ್ಯಸಭೆ ವಿಪಕ್ಷ ನಾಯಕ ಡಾ.ಮಲ್ಲಿಕಾರ್ಜುನ ಖರ್ಗೆ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ ಗುಂಡೂರಾವ ಸೇರಿದಂತೆ ಪ್ರದೇಶದ ಸಚಿವರು, ಶಾಸಕರು-ಸಂಸದರು ಹಾಗೂ ಇತರೆ ಚುನಾಯಿತ ಜನಪ್ರತಿನಿಧಿಗಳು ಆಗಮಿಸಲಿರುವ ಹಿನ್ನೆಲೆಯಲ್ಲಿ ಶಿಷ್ಠಚಾರದಂತೆ ಸೂಕ್ತ ಭದ್ರತೆ ಹಾಗೂ ಅಗತ್ಯ ಮುನ್ನೆಚ್ಚರಿಕೆ ಕ್ರಮ ತೆಗೆದುಕೊಳ್ಳುವಂತೆ ಅಧಿಕಾರಿ ವರ್ಗಕ್ಕೆ ನಿರ್ದೇಶನ ನೀಡಲಾಗಿದೆ ಎಂದರು.ಸುಮಾರು 20 ಸಾವಿರ ಜನ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗಿಯಾಗುವ ನಿರೀಕ್ಷೆ ಇದ್ದು, ಅವರಿಗೆ ಮಧ್ಯಾಹ್ನದ ಊಟದ ವ್ಯವಸ್ಥೆ ಮಾಡಲಾಗಿದೆ. ಪಾಕಿಂ-ರ್ಗ್, ಸುಗಮ ಸಂಚಾರ ನಿರ್ವಹಣೆ ಸೇರಿದಂತೆ ಯಾವುದೇ ರೀತಿಯ ಸಮಸ್ಯೆ ಆಗದಂತೆ ಮುನ್ನೆಚ್ಚರಿಕೆ ಕ್ರಮ ತೆಗೆದುಕೊಳ್ಳಲಾಗಿದೆ ಎಂದರು.

ಮುಂಡರಗಿಯಲ್ಲಿ ಇಂಡಸ್ಟ್ರಿಹಬ್:

ಗಿರಿ ಜಿಲ್ಲೆ ಯಾದಗಿರಿಯಲ್ಲಿ ಸಣ್ಣ ಕೈಗಾರಿಕೆಗಳಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಸಣ್ಣ ಕೈಗಾರಿಕೆ ಇಲಾಖೆ ಹಾಗೂ ಕೆ.ಕೆ.ಆರ್.ಡಿ.ಬಿ.ಮಂಡಳಿಯ ಶೇ.50-50 ಅನುದಾನದಡಿ ಸುಮಾರು 200 ಕೋಟಿ ರೂ. ವೆಚ್ಚದಲ್ಲಿ ಮುಂಡರಗಿಯಲ್ಲಿ ಇಂಡಸ್ಟ್ರಿಯಲ್ ಹಬ್ ಮಾಡಲು ನಿರ್ಧರಿಸಿದೆ ಎಂದ ಸಚಿವರು, ಜಿಲ್ಲೆಯಲ್ಲಿ ನೀರಾವರಿ ಯೋಜನೆಗಳಿಗೂ ಆದ್ಯತೆ ನೀಡಲಾಗಿದೆ. ಶಹಾಪುರ-ಸುರಪುರ ನಲ್ಲಿ ತಲಾ 90 ಕೋಟಿ ರೂ. ವೆಚ್ಚದಲ್ಲಿ ಮಲ್ಲಾವಾದ ಏತ ನೀರಾವರಿ ಯೋಜನೆ ಕೈಗೆತ್ತಿಕೊಳ್ಳಲಾಗಿದೆ. ವಿರೋಧ ಪಕ್ಷಗಳು ವಿನಾಕಾರಣ ಆರೋಪ ಮಾಡುವುದನ್ನು ಬಿಟ್ಟು ಜಿಲ್ಲೆಯ ಅಭಿವೃದ್ಧಿ ಕಾರ್ಯಗಳನ್ನು ನೋಡಿ ಮಾತನಾಡಲಿ ಎಂದರು.

ಕಲ್ಯಾಣದ ಅಭಿವೃದ್ಧಿಗೆ ಮಂಡಳಿ ಬದ್ಧ:ಕೆ.ಕೆ.ಆರ್.ಡಿ.ಬಿ ಮಂಡಳಿ ಅಧ್ಯಕ್ಷ ಡಾ.ಅಜಯ್ ಸಿಂಗ್ ಮಾತನಾಡಿ, ಪ್ರಸಕ್ತ 2025-26 ನೇ ಸಾಲಿಗೆ ಮಂಡಳಿಗೆ ರಾಜ್ಯ ಸರ್ಕಾರ 5,000 ಕೋಟಿ ರೂ. ಅನುದಾನ ಹಂಚಿಕೆ ಮಾಡುವ ಮೂಲಕ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ತನ್ನ ಬದ್ಧತೆಯನ್ನು ಪ್ರದರ್ಶಿಸಿದೆ. ಪ್ರದೇಶದ 41 ಕ್ಷೇತ್ರಗಳನ್ನು ಸಮಾನವಾಗಿ ಅಭಿವೃದ್ಧಿ ಮಾಡಲಾಗುವುದು. ನುಡಿದಂತೆ ನಡೆಯುವ ಸರ್ಕಾರ ನಮ್ಮದು ಎಂದರು.ಹಿಂದೆ ಯು.ಪಿ.ಎ. ಸರ್ಕಾರದ ಅವಧಿಯಲ್ಲಿಯೇ ಈ ಪ್ರದೇಶಕ್ಕೆ ನ್ಯಾಯ ಒದಗಿಸುವಂತಹ ಐತಿಹಾಸಿಕ 371ಜೆ ತಿದ್ದುಪಡಿ ತಂದಿದ್ದು, ಅದರ ಪರಿಣಾಮವೇ ಇಂದಿಲ್ಲಿ ಪ್ರದೇಶದಲ್ಲಿ ಸಾವಿರಾರು ಕೋಟಿ ರೂ. ಅಭಿವೃದ್ಧಿ ಕಾರ್ಯಗಳು ನೋಡಲು ಸಾಧ್ಯವಾಗುತ್ತಿದೆ. ಕಳೆದ ಸೆಪ್ಟೆಂಬರ್ ನಲ್ಲಿ ಕಲಬುರಗಿಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಅರೋಗ್ಯ ಇಲಾಖೆಗೆ ಸಂಬಂಧಿಸಿದಂತೆ 873 ಕೋಟಿ. ರೂ. ಮೊತ್ತದ ಕಾಮಗಾರಿಗಳಿಗೆ ಅನುಮೋದನೆ ದೊರೆತಿದ್ದು, ಇದರಲ್ಲಿ ಅರ್ಧ ಹಣ ಭರಿಸಲಿದೆ. ಮೊದಲನೇ ಹಂತವಾಗಿ ಶನಿವಾರ 416 ಕೋಟಿ ರೂ. ಮೊತ್ತಕ್ಕೆ ಸಿ.ಎಂ. ಸಿದ್ರಾಮಯ್ಯ ಅವರು ಅಡಿಗಲ್ಲು ನೆರವೇರಿಸಲಿದ್ದಾರೆ ಎಂದರು. ಗ್ರಾಮೀಣ ಪ್ರದೇಶದಲ್ಲಿ ಪಿಎಚ್‌ಸಿ, ಸಮುದಾಯ ಆರೋಗ್ಯ ಕೇಂದ್ರಗಳ ಸೇವೆ ಬಲಗೊಂಡರೆ ಹಳ್ಳಿ ಜನರ ಆರೋಗ್ಯ ಸುಧಾರಣೆಯಾಗಲಿದೆ. ಈ ಹಿನ್ನೆಲೆಯಲ್ಲಿ ದೊಡ್ಡ ಮಟ್ಟದ ಆರೋಗ್ಯ ಯೋಜನೆ ಮಂಡಳಿ ರೂಪಿಸಲಾಗಿದೆ ಎಂದರು.ಕಲ್ಯಾಣ ಭಾಗದಲ್ಲಿ ಅರೋಗ್ಯ ಮತ್ತು ಶಿಕ್ಷಣ ಸುಧಾರಣೆಗೆ ಅಕ್ಷರ ಆವಿಷ್ಕಾರ, ಅರೋಗ್ಯ ಆವಿಷ್ಕಾರ ಯೋಜನೆ ತರಲಾಗಿದೆ. ಇದಲ್ಲದೆ ಪ್ರದೇಶದಲ್ಲಿ ನಿರುದ್ಯೋಗ ನಿವಾರಣೆಗೆ ಯುವಕರಲ್ಲಿ ಕೌಶಲ್ಯ ಹೆಚ್ಚಿಸಲು ಉದ್ಯೋಗ ಆವಿಷ್ಕಾರ, ಅರಣ್ಯೀಕರಣಕ್ಕೆ ಒತ್ತು ನೀಡಲು ಅರಣ್ಯ ಆವಿಷ್ಕಾರದಂತಹ ನವೀನ ಯೋಜನೆಗಳನ್ನು ಮಂಡಳಿ ಹಾಕಿಕೊಂಡಿದೆ. ಪ್ರದೇಶದ ಗ್ರಾಮೀಣ ಭಾಗದಲ್ಲಿ ಖಾಸಗಿ ಶಾಲೆ ಮೀರಿಸುವಂತಹ ಗುಣಮಟ್ಟದ ಶಿಕ್ಷಣ ನೀಡುವ 50 ಕೆ.ಪಿ.ಎಸ್. ಶಾಲೆ ನಿರ್ಮಾಣ ಮಾಡಲಾಗುತ್ತಿದೆ. ನೀರಾವರಿ ಯೋಜನೆಗಳ ಸಮರ್ಪಕ ಅನುಷ್ಟಾನಕ್ಕೆ ಜಲ ಭಾಗ್ಯ ಜಾರಿಗೆ ತರುವ ಚಿಂತನೆ ನಡೆದಿದೆ ಎಂದರು.

ಯಾದಗಿರಿ ಶಾಸಕ ಚೆನ್ನಾರೆಡ್ಡಿ ಪಾಟೀಲ, ಶ್ರೀ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ ಚಿಂಚನಸೂರು, ಡಿ.ಸಿ. ಡಾ.ಬಿ.ಸುಶೀಲಾ, ಯಾದಗಿರಿ ಎಸ್.ಪಿ.ಪೃಥ್ವಿಕ್ ಶಂಕರ, ಕಲಬುರಗಿ ಎಸ್.ಪಿ. ಅಡ್ಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯತ್ ಸಿ.ಇ.ಓ ಲವೀಶ್ ಓರಡಿಯಾ ಸೇರಿದಂತೆ ಇತರೆ ಅಧಿಕಾರಿಗಳು ಇದ್ದರು.


ಕರ್ನಾಟಕ ಸರ್ಕಾರ
**ತೋಟಗಾರಿಕೆ ಇಲಾಖೆ**
**ಹಿರಿಯ ಸಹಾಯ ತೋಟಗರಿಕೆ ನಿರ್ದೇಶಕರು ಜೈವಿಕ ಕೇಂದ್ರ ರವರ ಕಾರ್ಯಾಲಯ ಬೀದರ**
E-mail:bidarbiocentre@gmail.com, ದೂರವಾಣಿ ಸಂಖ್ಯೆ: 08482-295020

ಸಂಖ್ಯೆ : ಹಿಸತೋನಿ/ಜೈಕೇ/ಬೀ/ವಿನಿ/ಸಿಆರ್-05/2025-26/ ದಿನಾಂಕ:11/06/2026

**ಟೆಂಡರ**

**::ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜೈವಿಕ ಕೇಂದ್ರ) ಕಛೇರಿ ಹಳ್ಳದಕೇರಿ, ಬೀದರ::**

1) ಕಾಮಗಾರಿ/ಸರಕು/ಸೇವೆಯ ವಿವರ: ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜೈವಿಕ ಕೇಂದ್ರ), ಹಳ್ಳದಕೇರಿ, ಬೀದರ 2025-26 ನೇ ಸಾಲಿನಲ್ಲಿ ಕಛೇರಿ ಕೆಲಸಕ್ಕೆ ಪ್ರವಾಸ ಕೈಗೊಳ್ಳುವುದು. ಸುಸ್ಥಿತಿಯಲ್ಲಿರುವ ನಾಲ್ಕು ಚಕ್ರಗಳ ಒಂದು ವಾಹನ **(ದಿನಾಂಕ:01/07/2025 ರಿಂದ 30/06/2026)** ಒಂದು ವರ್ಷದ ಅವಧಿಗೆ ಬಾಡಿಗೆ ಆಧಾರದ ಮೇಲೆ ಒದಗಿಸುವ ಬಗ್ಗೆ (ಜಿ.ಎಸ್.ಟಿ ಹಾಗೂ ಇತರೆ ಸಂಬಂಧಪಟ್ಟ ಎಲ್ಲಾ ದಾಖಲೆಗಳು ಹೊಂದಿರತಕ್ಕದ್ದು.), 2) ಕಾಮಗಾರಿ/ಸರಕು/ಸೇವೆಯ ಅಂದಾಜು ಮೊತ್ತ: **ರೂ.4.80 ಲಕ್ಷಗಳು,** 3) ಖಾಲಿ ಕೋಟೇಶನ್ ಅರ್ಜಿ ಫಾರಂ ಪಡೆಯಲು ಅಂತಿಮ ದಿನಾಂಕ ಮತ್ತು ಸಮಯ: **ದಿನಾಂಕ:26.06.2025 ರಂದು ಬೆಳ್ಳಿಗೆ 11.00 ಗಂಟೆಯೊಳಗೆ ಈ ಕಛೇರಿಯಿಂದ ಪಡೆಯಬಹುದು.** 4) ಭರ್ತಿ ಮಾಡಿದ ಕೋಟೇಶನ ಫಾರಂ ಸಲ್ಲಿಸಲು ಅಂತಿಮ ದಿನಾಂಕ ಮತ್ತು ಸಮಯ: ದಿನಾಂಕ: 26.06.2025 ರಂದು ಮದ್ಯಾಹ್ನ 3.00 ಗಂಟೆಯ ಒಳಗೆ, 5) ಕೋಟೇಶನ ಫಾರಂ ತೆರೆಯುವ ಪ್ರಾಧಿಕಾರ ಮತ್ತು ದಿನಾಂಕ ಮತ್ತು ಸಮಯ: ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜೈವಿಕ ಕೇಂದ್ರ) ಕಛೇರಿ ಹಳ್ಳದಕೇರಿ, ಬೀದರ. **ದಿನಾಂಕ:27.06.2025 ಬೆಳ್ಳಿಗೆ 11.00 ಗಂಟೆಗೆ,** 6) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ಕಛೇರಿ ವಿಳಾಸ ದೂರವಾಣಿ ಸಂಖ್ಯೆ: ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜೈವಿಕ ಕೇಂದ್ರ), ಹಳ್ಳದಕೇರಿ, ಬೀದರ ಎಪಿ.ಎಂ.ಸಿ ತರಕಾರಿ ಮಾರುಕಟ್ಟೆ, ಹತ್ತಿರ ಹೈದ್ರಾಬಾದ ರೋಡ್ ಬೀದರ.ದೂರವಾಣಿ ಸಂಖ್ಯೆ:08482-295020 ಮೊಬೈಲ್ ಸಂಖ್ಯೆ:97399985570.

ಸಹಿ/- **ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು**
**ಜೈವಿಕ ಕೇಂದ್ರ, ಹಳ್ಳದಕೇರಿ, ಬೀದರ**

ವಾ.ಸಾ.ಸಂ.ಇ/ಬೀದರ/70/ಕೆ.ಎಸ್.ಎಂ.ಸಿ.&ಎ/2025-26


Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.